ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 62 ಸಂಚಿಕೆ- 62 | PAGE- 8 ಪುಟ-8 | ಶನಿವಾರ 12.04.2025 | RS.2/- ಬೆಲೆ 2/-

# ವಿವಾದಿತ ಜಾತಿ ಗಣತಿ ವರದಿ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ, ಏ. 17ಕ್ಕೆ ಅಂತಿಮ ತೀರ್ಮಾನ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.11: ತೀವ್ರ ವಿವಾದಕ್ಕೆ ಕಾರಣವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಅಥವಾ ಜಾತಿ ಗಣತಿ ವರದಿ ಅನುಷ್ಠಾನದ ಸಂಬಂಧ ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ.

ಇಂದು ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ವರದಿಯ ಬಗ್ಗೆ ಚರ್ಚಿಸಲಾಗಿದ್ದು,ಜಾರಿಗೊಳಿಸುವ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವುದೆಂದು ನಿರ್ಧರಿಸಲಾಯಿತು.

ಸಚಿವ ಸಂಪುಟ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಜಾತಿ ಜನಗಣತಿ ಲಕೋಟೆ ಓಪನ್ ಮಾಡಿ, ಸಚಿವರ ಕೈಗೆ ನೀಡಿದರು. ಬಳಿಕ ಸುದೀರ್ಘ ಸಮಾಲೋಚನೆ ನಡೆಸಲಾಯಿತು. ಸಂಪುಟ ಸಹೋದ್ಯೋಗಿಗಳ ಅಭಿಪ್ರಾಯ ಆಲಿಸಿದ ಸಿದ್ದರಾಮಯ್ಯ, ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವ ನಿರ್ಧಾರಕ್ಕೆ ಬಂದರು.

"ಕೆಲವು ಸಚಿವರು ಮೊದಲು ಜಾತಿ ಗಣತಿ ವರದಿಯ ಶಿಫಾರಸುಗಳನ್ನು ಪರಿಶೀಲಿಸಲು ಬಯಸಿದ್ದಾರೆ. ಹೀಗಾಗಿ ಏಪ್ರಿಲ್ 17 ರಂದು ನಡೆಯುವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗುವುದು" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಸಭೆ ಬಳಿಕ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಏಪ್ರಿಲ್ 17 ರಂದು ನಡೆಯುವ ವಿಶೇಷ ಸಂಪುಟ ಸಭೆಯಲ್ಲಿ ಜಾತಿ ಜನಗಣತಿಯ ಕುರಿತು



ಚರ್ಚೆ ನಡೆಸಲು ನಿರ್ಧರಿಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಹೇಳಿದ್ದಾರೆ.

ಜಾತಿ ಜನಗಣತಿ ವರದಿಯು 50 ಸಂಪುಟಗಳಲ್ಲಿದೆ. ಇದು 1.38 ಕೋಟಿ ಕುಟುಂಬಗಳ 5.98 ಕೋಟಿ ಜನರನ್ನು ಒಳಗೊಂಡಿದೆ.

ಇದು ಶೇಕಡಾ 94.77 ಜನರನ್ನು ಒಳಗೊಂಡಿದೆ. ಕೇವಲ ಶೇಕಡಾ 5.23 ರಷ್ಟು ಜನ ಮಾತ್ರ ಇದರ ವ್ಯಾಪ್ತಿಯಿಂದ ಹೊರಗಿದ್ದಾರೆ" ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದ್ದಾರೆ.

ರಾಜ್ಯ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ಜಾತಿ ಗಣತಿ ವರದಿಯನ್ನು ಮುಚ್ಚಿದ ಲಕೋಟೆಯಲ್ಲಿ ಫೆಬ್ರವರಿ 29, 2024 ರಲ್ಲಿ ರಾಜ್ಯ ಸರ್ಕಾರ-ಕ್ಕೆ ಸಲ್ಲಿಕೆ ಮಾಡಿತ್ತು. ಆದರೆ ಈ ವರದಿಗೆ ಕಾಂಗ್ರೆಸ್‌ನಲ್ಲೇ ಆಂತರಿಕವಾಗಿ ವಿರೋಧ ವ್ಯಕ್ತವಾಗಿದೆ. ಒಕ್ಕಲಿಗ ಮತ್ತು ಲಿಂಗಾಯತ ಸಮುದಾಯದ ನಾಯಕರುಗಳು ವರದಿಗೆ ವಿರೋಧ ವ್ಯಕ್ತಪಡಿಸಿದ್ದಾರೆ.

# ಭೀಕರ ಅಪಘಾತ: ನಾಲ್ವರ ಸಾವು



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ,ಏ.11:ವೇಗವಾಗಿ ಹೋಗುತ್ತಿದ್ದ ಬೊಲೆರೋ ಕಾರು ಹಾಗೂ ಸಾರಿಗೆ ಬಸ್ ನಡುವೆ ನಡೆದ ಭೀಕರ ಅಪಘಾತದಲ್ಲಿ ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿರುವ ದಾರುಣ ಘಟನೆ ಶಹಾಪುರ ತಾಲೂಕಿನ ಮದ್ದರಕಿ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಳೆದ ರಾತ್ರಿ ನಡೆದಿದೆ.

ಯಾದಗಿರಿಯ ವರ್ಕನಹಳ್ಳಿ ಗ್ರಾಮದ ಬೊಲೆರೋ ಚಾಲಕ ಶರಣಪ್ಪ (30), ಸುನೀತಾ (19), ಸೋಮವ್ವ (50) ಮತ್ತು ತಂಗಮ್ಮ (55) ಮೃತಪಟ್ಟವರು.

ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಸಾವಿಗೀಡಾಗಿದ್ದು, ಒಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಸಾವಿಗೀಡಾಗಿದ್ದಾರೆ.

ಬೊಲೆರೋ ವಾಹನದಲ್ಲಿ ಕುಟುಂಬಸ್ಥರು ಕಲಬುರಗಿಯ ಘತ್ತರಗಿ ಭಾಗ್ಯವಂತಿ ದೇವಸ್ಥಾನಕ್ಕೆ ಜವಳ ಕಾರ್ಯಕ್ಕೆ ಹೋಗುತ್ತಿದ್ದರು. ಈ ವೇಳೆ ಅಪಘಾತ ಸಂಭವಿಸಿದೆ. ಬೊಲೆರೋ ವಾಹನದಲ್ಲಿ ಇನ್ನೂ ಹಲವರಿಗೆ ಗಾಯಗಳಾಗಿದ್ದು, ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನಾ ಸ್ಥಳಕ್ಕೆ ಎಸ್ಪಿ ಪೃಥ್ವಿಕ್ ಶಂಕರ್ ಭೇಟಿ ನೀಡಿ

ಪರಿಶೀಲನೆ ನಡೆಸಿದ್ದಾರೆ. ಭೀಮರಾಯನಗುಡಿ ಠಾಣಾ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

# ಕೆಕೆಆರ್ ಡಿಬಿ ಯಿಂದ ಜಾಹಿರಾತು ನೀಡಲು ಕಾರ್ಯದರ್ಶಿಗಳಿಗೆ ಮನವಿ



ಮಲ್ಲಮ್ಮನುಡಿ ವಾರ್ತೆ ಕಲಬುರ್ಗಿ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ವತಿಯಿಂದ ಬೀದರ್ ಜಿಲ್ಲೆಯ ಪ್ರಾದೇಶಿಕ ಪತ್ರಿಕೆಗಳಿಗೆ ಜಾಹಿರಾತು ನೀಡಬೇಕೆಂದು ಶುಕ್ರವಾರ ಕರ್ನಾಟಕ ಕಾರ್ಯನಿರತ ದಿನ ಪತ್ರಿಕೆಗಳ ಸಂಪಾದಕರ ಸಂಘದಿಂದ ಮನವಿ ಪತ್ರ ಸಲ್ಲಿಸಲಾಯಿತು.

ಕೆಕೆಆರ್ ಡಿಬಿ ಯಿಂದ ನೀಡಲಾಗುವ ಜಾಹಿರಾತುಗಳನ್ನು ಕಡ್ಡಾಯವಾಗಿ ಬೀದರ್ ಜಿಲ್ಲೆಯ ಪ್ರಾದೇಶಿಕ ಪತ್ರಿಕೆಗಳಿಗೆ ಜಾಹಿರಾತು ನೀಡಬೇಕೆಂದು ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಲಾಯಿತು. ಮನವಿಯನ್ನು ಸ್ವೀಕರಿಸಿದ ಕಾರ್ಯದರ್ಶಿಗಳು ನಮ್ಮ ಮನವಿಗೆ ಸಕರಾತ್ಮಕವಾಗಿ ಸ್ಪಂದಿಸಿದ್ದಾರೆ. ಈ ಸಂದರ್ಬದಲ್ಲಿ ಸಂಪಾದಕರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ರಮೇಶರಡ್ಡಿ, ರಾಜ್ಯ ಕಾರ್ಯಕಾರಣಿ ಸದಸ್ಯ ಅಜಯ ಭೊಸ್ಲೆ, ರಾಜ್ಯ ಕಾರ್ಯ ಕಾರಣಿ ಸದಸ್ಯರು ಅಶೋಕ ಕುಮಾರ ಕರಂಜಿ. ಉಪಸ್ಥಿತರಿದ್ದರು

# ಬಿಜೆಪಿ ಅವಧಿಯಲ್ಲಿ ಶೇ. 40 ಕಮಿಷನ್: ತನಿಖೆಗೆ ಎಸ್‌ಐಟಿ ರಚಿಸಲು ಸಂಪುಟ ಸಭೆ ತೀರ್ಮಾನ



ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಏ.11: ರಾಜ್ಯದಲ್ಲಿ ಈ ಹಿಂದಿನ ಬಿಜೆಪಿ ಸರ್ಕಾರದ ವಿರುದ್ಧದ ಶೇ. 40 ರಷ್ಟು ಕಮಿಷನ್ ಆರೋಪಗಳ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ತನಿಖಾ ವರದಿಯನ್ನು ಆಧರಿಸಿ ಹೆಚ್ಚಿನ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಲು ಸಚಿವ ಸಂಪುಟ ಸಭೆ ಶುಕ್ರವಾರ ನಿರ್ಧರಿಸಿದೆ.


ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ಅವರು, ಎಸ್‌ಐಟಿ ಎರಡು ತಿಂಗಳಲ್ಲಿ ತನಿಖೆಯನ್ನು ಪೂರ್ಣಗೊಳಿಸಿ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ ಎಂದರು.

ಬಿಜೆಪಿ ಸರ್ಕಾರದ ವಿರುದ್ಧದ ಶೇ.40 ಕಮಿಷನ್ ಆರೋಪದ ತನಿಖೆಗೆ ರಚನೆಯಾಗಿದ್ದ ನ್ಯಾ. ನಾಗಮೋಹನ್ ದಾಸ್ ವಿಚಾರಣಾ ಆಯೋಗ ವರದಿಯನ್ನು ಇಂದು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಯಿತು.

ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿಯು ವಿಶೇಷ ಶಿಫಾರಸುಗಳನ್ನು ಮಾಡಿದೆ. ಹಲವು ದೂರುಗಳ ಬಗ್ಗೆ ಮಾಹಿತಿ ನೀಡಿದ್ದಾರೆ. 3 ಲಕ್ಷ ಕಾಮಗಾರಿಯಲ್ಲಿ 1,729 ಕಾಮಗಾರಿ ಬಗ್ಗೆ ಆಪಾದನೆಗಳ

(2ನೇ ಪುಟ ನೋಡಿ)

# ಕಲಬುರಗಿಯಿಂದ ಬೆಂಗಳೂರಿಗೆ ಏ. 16ರಿಂದ ನಿತ್ಯ ವಿಮಾನಯಾನ




ಮಲ್ಲಮ್ಮನುಡಿ ವಾರ್ತೆ ಕಲಬುರಗಿ, ಏ.11: ಕಲ್ಯಾಣ ಕರ್ನಾಟಕದ ಕೇಂದ್ರವಾಗಿರುವ ನಗರದಿಂದ ರಾಜಧಾನಿ ಬೆಂಗಳೂರಿಗೆ ವಿಮಾನ ಸೇವೆಯಲ್ಲಿ ವ್ಯತ್ಯಯ ಎದುರಾಗಿ-ತ್ತು. ಇದರಿಂದ ಈ ಭಾಗದಲ್ಲಿ ಕೆಲಸ ಮಾಡುತ್ತಿರುವ ಉದ್ಯಮಿ, ಸರ್ಕಾರಿ ಇಲಾಖೆಯ ಸಿಬ್ಬಂದಿಗೆ, ಪ್ರವಾಸಿಗರಿಗೆ, ಸ್ಥಳೀಯರಿಗೆ ಮತ್ತಿತರ ಪ್ರಯಾಣಿಕರಿಗೆ ಬಹಳಷ್ಟು ತೊಂದ-ರೆಯಾಗಿತ್ತು. ಇದೀಗ ರಾಜಧಾನಿಗೆ ಪ್ರಯಾಣಿಸುವ ಪ್ರಯಾಣಿಕರಿಗೆ ನಿತ್ಯವೂ ವಿಮಾನ ಸೇವೆ ಸಿಗಲಿದೆ.

ಕಳೆದ 5 ತಿಂಗಳ ಬಳಿಕ ನಗರದಿಂದ ರಾಜಧಾನಿ ಬೆಂಗಳೂರಿಗೆ ವಿಮಾನ ಸೇವೆ ಆರಂಭವಾಗಲಿದೆ. ಸ್ಟಾರ್ ಏರ್ಲೈನ್ಸ್ ವತಿಯಿಂದ ಏಪ್ರಿಲ್ 16ರಿಂದ ಕಲಬುರ್ಗಿ ಮತ್ತು ಬೆಂಗಳೂರು ನಡುವೆ ನಿತ್ಯ ವಿಮಾನ ಸಂಚಾರ ಪ್ರಾರಂಭವಾಗಲಿದೆ ಎಂದು ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಶರಣು ಪಪ್ಪಾ ಮತ್ತು ಗೌರವ ಕಾರ್ಯದರ್ಶಿ ಶಿವರಾಜ್ ಪಿ. ಇಂಗನಶೆಟ್ಟಿ ಅವರು ತಿಳಿಸಿದ್ದಾರೆ.

ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು, ಸಂಸದ ರಾಧಾಕೃಷ್ಣ ದೊಡ್ಡಮನಿ ಅವರ ಪ್ರಯತ್ನದಿಂದ ರಾಜ್ಯ ರಾಜಧಾನಿ ಬೆಂಗಳೂರಿಗೆ ದಿನಾಲೂ ವಿಮಾನ ಸೇವೆ ಲಭ್ಯವಾಗಲಿದೆ. ಇನ್ನು ಮುಂದೆ ನಿತ್ಯವೂ ವಿಮಾನ ಸೇವೆ ಪ್ರಾರಂಭವಾಗುವುದರಿಂದ ಕಲಬುರಗಿ ಹಾಗೂ ಸುತ್ತಲಿನ ಜಿಲ್ಲೆಗಳ ಪ್ರಯಾಣಿಕರಿಗೆ ಅನುಕೂಲ ಆಗಲಿದೆ ಎಂದು ಅವರು ಸಂತೋಷ ವ್ಯಕ್ತಪಡಿಸಿದ್ದಾರೆ.

ವ್ಯಾಪಾರ ಮತ್ತು ಧಾರ್ಮಿಕ ಕ್ಷೇತ್ರಗಳ ಹಿನ್ನೆಲೆಯಲ್ಲಿ ದಿಲ್ಲಿ ಮತ್ತು ತಿರುಪತಿ ನಡುವೆ ಮತ್ತೆ ನಿತ್ಯ ವಿಮಾನ ಸಂಚಾರ ಆರಂಭವಾಗಬೇಕು. ಮುಂಬೈ, ಅಹ್ಮದಾಬಾದ್, ರಾಜಸ್ಥಾನದ ಕಿಶನ್ ಗಡ್ ಮತ್ತು ಗೋವಾಕ್ಕೂ ವಿಮಾನ ಸೇವೆ ವಿಸ್ತರಣೆ ಮಾಡಬೇಕೆಂದು ಸ್ಥಳೀಯ ಉದ್ಯಮಿಗಳು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

# ಬಿಹಾರದಲ್ಲಿ ಸಿಡಿಲು, ಆಲಿಕಲ್ಲು ಮಳೆಯಿಂದ 61 ಸಾವು




ಮಲ್ಲಮ್ಮನುಡಿ ವಾರ್ತೆ ಪಾಟ್ನಾ:ಏ.11: ಬಿಹಾರದಲ್ಲಿ ಸಿಡಿಲು ಮತ್ತು ಆಲಿಕಲ್ಲು ಮಳೆಯಿಂದ ಸಾವನ್ನಪ್ಪಿದವರ ಸಂಖ್ಯೆ 61ಕ್ಕೆ ಏರಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ.

ಆಲಿಕಲ್ಲು ಮಳೆ ಮತ್ತು ಮಳೆ ಸಂಬಂಧಿತ ಘಟನೆಗಳಲ್ಲಿ 39 ಜನ ಸಾವನ್ನಪ್ಪಿದ್ದರೆ, ಗುರುವಾರ ಸಿಡಿಲು ಬಡಿದು 22 ಜನ ಸಾವನ್ನಪ್ಪಿದ್ದಾರೆ ಎಂದು ಅವರು ಹೇಳಿದ್ದಾರೆ.

ಗುರುವಾರ ಸಂಜೆವರೆಗೆ ಇಪ್ಪತ್ತೈದು ಸಾವುಗಳು ವರದಿಯಾಗಿವೆ ಮತ್ತು ವಿವಿಧ ಜಿಲ್ಲೆಗಳಿಂದ ಡೇಟಾವನ್ನು ಸಂಗ್ರಹಿಸಿದ ನಂತರ ಸಾವಿನ ಸಂಖ್ಯೆ 61ಕ್ಕೆ ಏರಿದೆ. ನಳಂದ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂದರೆ 23 ಸಾವುಗಳು ಸಂಭವಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ."ಗುರುವಾರ ಬಿಹಾರದ ಹಲವಾರು ಜಿಲ್ಲೆಗಳಲ್ಲಿ ಸಿಡಿಲು, ಆಲಿಕಲ್ಲು ಮಳೆ ಮತ್ತು ಮಳೆ ಸಂಬಂಧಿತ ಘಟನೆಗಳಿಂದ ಸಾವನ್ನಪ್ಪಿದವರ ಸಂಖ್ಯೆ 61 ಕ್ಕೆ ಏರಿದೆ" ಎಂದು ರಾಜ್ಯ ವಿಪತ್ತು ನಿರ್ವಹಣಾ ಇಲಾಖೆ ಶುಕ್ರವಾರ ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ ತಿಳಿಸಿದೆ."ನಳಂದ ಜಿಲ್ಲೆಯಲ್ಲಿ ಅತಿ ಹೆಚ್ಚು, 23 ಮಂದಿ ಸಾವನ್ನಪ್ಪಿದ್ದಾರೆ, ನಂತರ ಭೋಜ್‌ಪುರ(ಆರು), ಸಿವಾನ್, ಗಯಾ, ಪಾಟ್ನಾ ಮತ್ತು ಶೇಖ್‌ಪುರದಲ್ಲಿ ತಲಾ ನಾಲ್ವರು, ಜಮುಯಿಯಲ್ಲಿ ಮೂವರು ಮತ್ತು ಜೆಹಾನಾಬಾದ್ ನಲ್ಲಿ ಇಬ್ಬರು ಮೃತಪಟ್ಟಿದ್ದಾರೆ. ಗೋಪಾಲ್‌ಗಂಜ್, ಮುಜಾಫರ್‌ಪುರ್, ಅರ್ವಾಲ್, ದರ್ಭಂಗಾ, ಬೇಗುಸರೈ, ನಹರ್ಸಾ, ಕತಿಹಾರ್, ಲಖಿಪುರ್ ಜಿಲ್ಲೆಗಳಲ್ಲಿ ತಲಾ ಒಬ್ಬರು ಸಾವನ್ನಪ್ಪಿದ್ದಾರೆ.

# ರಾಣಾಗೆ 14*14 ಅಡಿಯ ಸೆಲ್ : ದಿನದ 24 ಗಂಟೆಯೂ ನಿಗಾ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.11: 2008ರ ಮುಂಬೈ ದಾಳಿಯ ಸಂಚುಕೋರ ತಹವ್ವೂರ್ ರಾಣಾನನ್ನ 18 ದಿನಗಳ ಕಾಲ ಎನ್‌ಐಎ ಕಸ್ಟಡಿಗೆ ಪಡೆದುಕೊಂಡು ವಿಚಾರಣೆ ಶುರು ಮಾಡಿದೆ. ಸದ್ಯ ಎನ್‌ಐಎ ಮುಖ್ಯ ಕಚೇರಿಯ ಪ್ರತ್ಯೇಕ ಸೆಲ್‌ನಲ್ಲಿ ರಾಣಾನನ್ನು ಸದಾನಂದ ದಾತೆ ನೇತೃತ್ವದ 12 ಅಧಿಕಾರಿಗಳ ಸ್ಪೆಷಲ್ ಟೀಂ ವಿಚಾರಣೆಗೆ ಒಳಪಡಿಸಿದೆ. ಅದರಂತೆ ರಾಣಾನನ್ನ ದೇಶದ ವಿವಿಧ ಭಾಗಗಳಿಗೆ ಕರೆದೊಯ್ಯುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ.

ದಿನದ 24 ಗಂಟೆಯೂ ನಿಗಾ

ಸದ್ಯ ರಾಣಾನನ್ನ ಸುರಕ್ಷಿತವಾಗಿಡಲು 14*14 ಅಡಿಯ ಸೆಲ್ ವ್ಯವಸ್ಥೆ ಮಾಡಲಾಗಿದೆ. ಈ ಸೆಲ್ ಸಿಜಿಒ ಕಾಂಪ್ಲೆಕ್ಸ್‌ನಲ್ಲಿರುವ ಎನ್‌ಐಎ ಕಚೇರಿಯ ಗ್ರೌಂಡ್ ಫ್ಲೋರ್‌ನಲ್ಲಿ ಇದೆ. ಜೊತೆಗೆ ರಾತ್ರಿ ವೇಳೆಯೂ ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿದೆ. ಹೆಚ್ಚುವರಿಯಾಗಿ ದೆಹಲಿ ಪೊಲೀಸರು ಹಾಗೂ ಅರೆಸೇನಾ ಪಡೆ ಸಿಬ್ಬಂದಿಯನ್ನ ಹೊರಾಂಗಣದಲ್ಲಿ ನಿಯೋಜಿಸಲಾಗಿದೆ. ರಾಣಾ ಕೊಠಡಿ ಪ್ರವೇಶಿಸಲು ಮೂರ್ನಾಲ್ಕು ಹಂತಗಳಲ್ಲಿ ಡಿಜಿಟಲ್ ಸುರಕ್ಷತಾ ಪದರಗಳ ವ್ಯವಸ್ಥೆ ಮಾಡಲಾಗಿದೆ. ದಿನದ

(2ನೇ ಪುಟ ನೋಡಿ)

# ತಮಿಳುನಾಡು ಚುನಾವಣೆಗೆ ಎಐಎಡಿಎಂಕೆ-ಬಿಜೆಪಿ ಮೈತ್ರಿ; ಅಮಿತ್ ಶಾ ಘೋಷಣೆ



ಚೆನ್ನೈ:ಏ.11: 2026ರ ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಡಿಎಂಕೆಯನ್ನು ಅಧಿಕಾರದಿಂದ ಕೆಳಗಿಳಿಸಲು ತಮ್ಮ ಪಕ್ಷ ಎಐಎಡಿಎಂಕೆ ಜೊತೆ ಮೈತ್ರಿ ಮಾಡಿಕೊಳ್ಳಲಿದೆ

(2ನೇ ಪುಟ ನೋಡಿ)

# ಹೆಂಡತಿಯ ಮನೆಗೆ ಕರೆದ ಗಂಡನಿಗೆ ಚಾಕು ಇರಿದ ಪತ್ನಿಯ ಸಹೋದರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.11: ಹೆಂಡತಿಯನ್ನು ಮನೆಗೆ ಬಾ ಎಂದು ಕರೆದ ವ್ಯಕ್ತಿಗೆ ಆಕೆಯ ಸಹೋದರ ಚಾಕು ಇರಿದ ಘಟನೆ ನಗರದ ಗಾಜಿಪುರದಲ್ಲಿ ನಡೆದಿದೆ. ಹಲ್ಲೆಗೊಳಗಾದ ವ್ಯಕ್ತಿಯನ್ನು ಆನಂದ್ ಎಂದು ಗುರುತಿಸಲಾಗಿದೆ. ಆತ ಕಳೆದ ಎರಡು ವರ್ಷದ ಹಿಂದೆ ಸ್ನೇಹಾಳನ್ನ ಪ್ರೀತಿಸಿ ಮದುವೆಯಾಗಿದ್ದ. ಮದುವೆಯಾದ ಬಳಿಕ ಗಂಡ ಹೆಂಡತಿಯ ಮಧ್ಯೆ ಜಗಳವಾಗಿ ಪತ್ನಿ ತವರು ಮನೆ ಸೇರಿದ್ದಳು. ಆನಂದ್ ತನ್ನ ಅಣ್ಣನ ಮದುವೆ ಹಿನ್ನಲೆಯಲ್ಲಿ ಮನೆಗೆ ಬರುವಂತೆ ಸ್ನೇಹಾಳನ್ನು ಕರೆದಿದ್ದ. ಇದೇ ವಿಚಾರಕ್ಕೆ ಸ್ನೇಹಾಳ ಸಹೋದರ ಟೋನಿ ಮತ್ತು ಆತನ ಸ್ನೇಹಿತರು ಸೇರಿ ಆನಂದಗೆ ಚಾಕುವಿನಿಂದ ಇರಿದು ಕೊಲೆಗೆ ಯತ್ನಿಸಿದ್ದಾರೆ ಎಂದು ತಿಳಿದು ಬಂದಿದೆ. ಗಾಯಾಳುವಿಗೆ ಕಲಬುರಗಿಯ ಜಿಮ್ಸ್ ಆಸ್ಪತ್ರೆಯ ಟ್ರಾಮ್ ಕೇರ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಸಂಬಂಧ ಬ್ರಹ್ಮಪೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಒಂದನೇ ಪುಟದಿಂದ

# ದಿನದ 24 ಗಂಟೆಯೂ ನಿಗಾ

24 ಗಂಟೆಯೂ ನಿಗಾ ವಹಿಸಲು ಇಂಚಿಂಚಿಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. 12 ಅಧಿಕಾರಿಗಳ ಸ್ಪೆಷಲ್ ಟೀಂಗೆ ಹೊರತುಪಡಿಸಿ ಉಳಿದವರು ಯಾರಿಗೂ ಇಲ್ಲಿ ಪ್ರವೇಸಿಸಲು ಅವಕಾಶ ಇಲ್ಲ ಎಂದು ಎನ್‌ಐಎ ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ.

ನೆಲದ ಮೇಲೆಯೇ ಬಾತ್ ರೂಂ

ಇನ್ನೂ ರಾಣಾಗೆ ವ್ಯವಸ್ಥೆ ಮಾಡಲಾದ ಈ ಸೆಲ್ ಒಂದು ಭದ್ರಕೋಟೆಯಂತಿದೆ. ನೆಲದ ಮೇಲೆಯೇ ಮಲಗಲು ರಾಣಾಗೆ ಒಂದು ಹಾಸಿಗೆ ಹಾಗೂ ಸ್ನಾನ ಗೃಹದ ವ್ಯವಸ್ಥೆ ಮಾಡಲಾಗಿದೆ. ಜೊತೆಗೆ ಊಟ, ಕುಡಿಯುವ ನೀರು, ವೈದ್ಯಕೀಯ ತಪಾಸಣೆ ಎಲ್ಲದಕ್ಕೂ ಆ 14*14 ಅಡಿಯ ಸೆಲ್‌ನಲ್ಲೇ ವ್ಯವಸ್ಥೆ ಮಾಡಲಾಗಿದೆ.

2008ರ ಮುಂಬೈ ದಾಳಿಯ ಉಗ್ರ ತಹವ್ವೂರ್ ರಾಣಾನನ್ನ ಗುರುವಾರ ವಿಶೇಷ ವಿಮಾನದ ಮೂಲಕ ಅಮೆರಿಕದಿಂದ ಭಾರತಕ್ಕೆ ಕರೆತರಲಾಯಿತು. ದೆಹಲಿಯ ಪಾಲಂ ಏರ್‌ಪೋರ್ಟ್‌ಗೆ ಬಂದಿಳಿಯುತ್ತಿದ್ದಂತೆ ರಾಣಾನನ್ನ ಎನ್‌ಐಎ ಅಧಿಕಾರಿಗಳು ಬಂಧಿಸಿದ್ದರು. ಬಳಿಕ ಪಟಿಯಾಲ ಕೋರ್ಟ್‌ಗೆ ಹಾಜರುಪಡಿಸಿ ಆತನನ್ನ 18 ದಿನಗಳ ಕಾಲ ಕಸ್ಟಡಿಗೆ ಪಡೆದುಕೊಂಡಿತು.

ಸತ್ತ 9 ಲಷ್ಕರ್ ಉಗ್ರರಿಗೆ ಪಾಕ್ ಅವಾರ್ಡ್ ಕೊಡಬೇಕಿತ್ತು:

ಎನ್‌ಐಎ ಅಧಿಕಾರಿಗಳ ತಂಡ ರಾಣಾ ವಿಚಾರಣೆ ನಡೆಸುತ್ತಿರುವ ಹೊತ್ತಿನಲ್ಲೇ ರಾಣಾ ಹಿಂದೆ ನೀಡಿದ್ದ ಹೇಳಿಕೆಯೊಂದು ಬೆಳಕಿಗೆ ಬಂದಿದೆ. ??ಮುಂಬೈನಲ್ಲಿ ನರಮೇಧ ನಡೆಸಿ, ಭಾರತೀಯ ಪಡೆಗಳ ಗುಂಡಿಗೆ ಬಲಿಯಾದ 9 ಲಷ್ಕರ್ ಉಗ್ರರಿಗೆ ಪಾಕ್ ಸೈನಿಕರಿಗೆ ನೀಡುವ ನಿಶಾನ್ ಎ ಹೈದರ್' ಪ್ರಶಸ್ತಿ ನೀಡಬೇಕು" ಎಂದು ದಾಳಿಯ ಮಾಸ್ಟರ್‌ಮೈಂಡ್ ಡೇವಿಡ್ ಕೋಲ್ಮನ್ ಹೆಡ್ಲಿ ಜೊತೆ ತಹಾವೂರ್ ರಾಣಾ ಹೇಳಿದ್ದ ಎಂಬ ವಿಚಾರ ಈಗ ಬಯಲಾಗಿದೆ.

ಅಷ್ಟೇ ಅಲ್ಲ, ದಾಳಿಯಿಂದಾದ ಅನಾಹುತಗಳ ಬಗ್ಗೆ ಹೆಡ್ಲಿ ಪ್ರಸ್ತಾಪ ಮಾಡಿದಾಗ, ಭಾರತೀಯರಿಗೆ ಹಾಗೇ ಆಗಬೇಕಿತ್ತು ಎಂದು ರಾಣಾ ನಾಲಗೆ ಹರಿಬಿಟ್ಟಿದ್ದ. ಹಸ್ತಾಂತರದ ವೇಳೆ ಅಮೆರಿಕ ಕಾನೂನು ವಿಭಾಗ ನೀಡಿದ ಪ್ರಕಟಣೆಯಲ್ಲಿ ಈ ಎಲ್ಲಾ ವಿಚಾರ ಅಡಕವಾಗಿದೆ ಎಂದು ತಿಳಿದುಬಂದಿದೆ.

# ಬಿಜೆಪಿ ಮೈತ್ರಿ; ಅಮಿತ್ ಶಾ ಘೋಷಣೆ

ಎಂದು ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಅವರು ಶುಕ್ರವಾರ ಘೋಷಿಸಿದ್ದಾರೆ.

2026ರಲ್ಲಿ ತಮಿಳುನಾಡಿನಲ್ಲಿ ಎನ್ ಡಿಎ ಸರ್ಕಾರ ರಚನೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅಮಿತ್ ಶಾ, ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ ಪಳನಿಸ್ವಾಮಿ ಅವರು ಎನ್ ಡಿಎ ಮೈತ್ರಿಕೂಟದ ನೇತೃತ್ವ ವಹಿಸಲಿದ್ದಾರೆ ಎಂದು ಹೇಳಿದರು.

ಉಚ್ಚಾಟಿತ ಎಐಎಡಿಎಂಕೆ ನಾಯಕರಾದ ಓ ಪನ್ನೀರ್‌ಸೆಲ್ವಂ ಮತ್ತು ಎಎಂಎಂಕೆ ನಾಯಕ ಟಿಟಿವಿ ದಿನಕರನ್ ಅವರನ್ನು ಮೈತ್ರಿಕೂಟದಲ್ಲಿ ಸೇರಿಸಿಕೊಳ್ಳಲಾಗುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅಮಿತ್ ಶಾ, ಬಿಜೆಪಿ, ಎಐಎಡಿಎಂಕೆಯ ಆಂತರಿಕ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ತಿಳಿಸಿದರು.

ಈ ಮೈತ್ರಿಕೂಟವು ಪರಸ್ಪರ ಹಿತಾಸಕ್ತಿಯಿಂದ ಹುಟ್ಟಿಕೊಂಡಿದೆ ಮತ್ತು ಎರಡೂ ಪಕ್ಷಗಳು ಈ ಹಿಂದೆ ಒಟ್ಟಿಗೆ ಚುನಾವಣೆ ಎದುರಿಸಿದ್ದವು ಎಂದು ಅಮಿತ್ ಶಾ ನೆನಪಿಸಿಕೊಂಡರು.

ಪಳನಿಸ್ವಾಮಿ, ಹಿರಿಯ ಎಐಎಡಿಎಂಕೆ ನಾಯಕರಾದ ಕೆಪಿ ಮುನುಸಾಮಿ ಮತ್ತು ಎಸ್‌ಪಿ ವೇಲುಮಣಿ, ಬಿಜೆಪಿ ರಾಜ್ಯಾಧ್ಯಕ್ಷ ಕೆ ಅಣ್ಣಾಮಲೈ ಮತ್ತು ನೂತನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ನೈನಾರ್ ನಾಗೇಂದ್ರನ್ ಕೂಡ ಮೈತ್ರಿ ಘೋಷಣೆಯ ಸಮಯದಲ್ಲಿ ಉಪಸ್ಥಿತರಿದ್ದರು.

# ಭಕ್ತರ ಆಸೆ ಪೊರೈಸುವ ತುಳಜಾ ಭವಾನಿ ತಾಯಿ : ಡಾ. ಬಸವಲಿಂಗ ಅವಧೂತರ



ಔರಾದ:ಏ.11:ತುಳಜಾಪುರ ಅಲ್ಲದೇಸುತ್ತಮುತ್ತಲಿನಗ್ರಾಮದ ಅದಿ ದೇವರಾದ ತುಳಜಾ ಭವಾನಿ ಬಹಳ ಶಕ್ತಿಶಾಲಿ ದೇವತೆಯಾಗಿದ್ದು ಇವರನ್ನೂ ಭಕ್ತರು ಭಕ್ತಿಯಿಂದ ಬೇಡಿ-ಕೊಂಡರೆ ಅವರ ಇಷ್ಟಾರ್ಥ ಪೊರೈಸುತ್ತಾಳೆ ಎಂದು ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯಗಿರಿ ದೇಗಲಮಡಿ ಹಾಗೂ ಬಸವಕಲ್ಯಾಣ ಆಶ್ರಮದ ಪೀಠಾಧಿಪತಿ ಡಾ. ಬಸವಲಿಂಗ ಅವಧೂತರು ನುಡಿದರು. ತುಳಜಾಪುರ ಗ್ರಾಮದಲ್ಲಿ ಜೈ ತುಳಜಾ ಭವಾನಿ ಜಾತ್ರಾಮಹೋತ್ಸವ ಹಾಗೂ ಶಿವನಾಮ ಸಪ್ತಾಹ ಪ್ರಯುಕ್ತ ಆಯೋಜಿಸಿದ್ದ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು

ಶ್ರೀಮಂರು ತೋರಿ-ಕ್ಕೆಗಾಗಿ ದೊಡ್ಡದೊಡ್ಡ ಮನೆ ಕಟ್ಟಿಸಿಕೋಳ್ಳುತ್ತಿದ್ದಾರೆ ಆದರೆ ಒಳ್ಳೆಯ ಮನಸ್ಸುಗಳನ್ನು ಕಟ್ಟಿಕೊಳ್ಳುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಮನುಷ್ಯ ಸಂಸಾರದ ಜಂಜಾಟದಲ್ಲೇ ಮುಳುಗದೆ, ಪಾರಮಾರ್ಥದ ಒಲುವನ್ನು ಸಹ ಬೆಳೆಸಿಕೊಳ್ಳಬೇಕು. ಶರಣರು, ಸಂತರು, ಪೂಜ್ಯರ ವಾಣಿಗಳನ್ನು ಆಲಿಸಬೇಕು, ತಂದೆ ತಾಯಿಯ ಜೀವಿತವರೆಗೂ ಅವರ ಸೇವೆ ಮಾಡಲೇ ಬೇಕು ಎಂದರು

ಯುವ ಪೀಳಿಗೆ ಮಾದಕ ವಸ್ತುಗಳ ಚಟಕ್ಕೆ ಬಿದ್ದು ಜೀವನ ವ್ಯರ್ಥ ಮಾಡಿಕೊಳ್ಳುತ್ತಿದ್ದಾರೆ. ತಂದೆ ತಾಯಿ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಕೊಟ್ಟು ಒಳ್ಳೆಯ ದಾರಿ ತೊರಿಸಬೇಕು ಎಂದು ಸಲಹೆ ನೀಡಿದರು.

ಜಪ ತಪ ದೇವರ ಧ್ಯಾನ ಮಾಡಿ ಮನಸ್ಸಿಗೆ ಸಮಧಾನ ತಂದುಕೊಳ್ಳಿ ಎಂದು ಹೇಳಿದರು.

ಕಾರ್ಯಕ್ರಮದ ಮೊದಲಿಗೆ ತುಳಜಾ ಭವಾನಿ ದೇವತೆಗೆ ಅವಧೂತರು ಪೂಜೆ ಸಲ್ಲಿಸಿದರು.

ಗ್ರಾಮದ ಮುಖಂಡರಾದ ಅಮೃತ ಪೂಜಾರಿ, ಅರವಿಂದ ಪಾರಾ, ಧನರಾಜ ವಲ್ಲೆಪೂರೆ, ರಾಜಕುಮಾರ ವಲ್ಲೆಪೂರೆ, ಚಂದು ಬಿರಾದರ, ಸಿದ್ದಪ್ಪ ವಲ್ಲೆಪೂರೆ, ಮೊದಲಾದವರು ಪಾಲ್ಗೊಂಡಿದ್ದರು

# ಸಿ.ಸಿ ರಸ್ತೆ ಕಾಮಗಾರಿಗೆ ಚಾಲನೆ



ಬೀದರ್ :ಏ.11: ನನ್ನ ಮತಕ್ಷೇತ್ರದ ಅಭಿವೃದ್ಧಿ ಮತ್ತು ಜನರ ಏಳ್ಗೆಗೆ ಆದ್ಯತೆ ನೀಡಲಾಗುವುದು

ಹಿಂದುಳಿದ ಪ್ರದೇಶಗಳ ಅಭಿವೃದ್ಧಿಯೇ ನನ್ನ ಗು-ರಿಯಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರಬೆಲ್ದಾಳೆ ಅವರು ಹೇಳಿದರು. ಬೀದರ್ ದಕ್ಷಿಣ ಕ್ಷೇತ್ರದ ಬಾಪುರ ಗ್ರಾಮದ ಮುಖ್ಯದ್ವಾರದಿಂದಗ್ರಾಮದವರೆಗೆ 20 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಇಂದು ಚಾಲನೆ ನೀಡಿ ಅವರು ಮಾತನಾಡಿದರು. ಕ್ಷೇತ್ರದ ಅಭಿವೃದ್ಧಿಗಾಗಿ ರಸ್ತೆ, ಒಳಚರಂಡಿ, ವಿದ್ಯುತ್, ಕುಡಿಯುವ ನೀರು, ಶಿಕ್ಷಣ ಸೇರಿದಂತೆ ಇತರೆ ಮೂಲಸೌಕರ್ಯಗಳನ್ನು ಒದಗಿಸುವುದು ನನ್ನ ಕರ್ತವ್ಯ ಈ ನಿಟ್ಟಿನಲ್ಲಿ ಕೆಲಸ ಮಾಡಲಾಗುತ್ತಿದೆ. ಬೀದರ್ ದಕ್ಷಿಣ ಕ್ಷೇತ್ರದ ಪರಿಪೂರ್ಣ ಅಭಿವೃದ್ಧಿಯೇ ನನ್ನ ಗುರಿಯಾಗಿದೆ. ಅಭಿವೃದ್ಧಿ ಕಾರ್ಯಗಳನ್ನು ಮಾಡಿ ಜನರ ಕಣ್ಣಲ್ಲಿ ಸಂತೋಷ ಮತ್ತು ಸಂತೃಪ್ತಿ ಕಾಣುವುದರಲಿ ನನ್ನ ಸಂತೋಷವಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಜಾರಿಗೆ ಬರುವ ಯೋಜನೆಗಳನ್ನು ಕ್ಷೇತ್ರಕ್ಕೆ ತರುವ ನಿಟ್ಟಿನಲ್ಲಿ ನಿರಂತರ ಪ್ರಯತ್ನ ಮಾಡುತ್ತಿದ್ದೇನೆ.

ಗ್ರಾಮೀಣ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಜನತೆಯ ಸಂಕಷ್ಟಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸಿ ಸೇವೆಯನ್ನು ಮಾಡುತ್ತಿದ್ದೇನೆ. ಬಡ ಜನರಿಗೆ ನನ್ನ ಕೈಲಾದ ಸೇವೆಯನ್ನು ಮಾಡಿ ನೊಂದ ಜನರ ಕಣ್ಣೀರನ್ನು ಒರೆಸುವುದು ಮಾತ್ರ ನನ್ನ ಮೂಲ ಉದ್ದೇಶ ಎಂದು ಹೇಳಿದರು. ಬಳಿಕ ಕಾಮಗಾರಿ ಉತ್ತಮವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿ ಗ್ರಾಮಸ್ಥರ ಅಹವಾಲು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಗುರುನಾಥ ರಾಜಗೀರಾ ಮುಖಂಡರಾದ ಬಕ್ಕಪ್ಪ ಬಸರೆಡ್ಡಿ, ಹೇಮಾ ತುಕ್ಕಾರೆಡ್ಡಿ, ವೀರೇಶ ಪಾಟೀಲ್, ಸಂತೋಷ ಜಗದಾಳೆ, ಓಂಕಾರ ಸ್ವಾಮಿ, ಆನಂದ ರೆಡ್ಡಿ, ನಿತೀಶ್ ಡೊಂಗುರಗಾವ್, ಕಲ್ಯಾಣರಾವ ಬಾಪುರ, ಕಲ್ಯಾಣರಾವ ಬಿರಾದಾರ, ಶಂಭುಲಿಂಗ ಸ್ವಾಮಿ, ನಿಜಲಿಂಗ ಬಗದಲಕರ್, ರೇವಣ್ಣಪ್ಪ ಚಿಟ್ಟಾ, ಬಸವರಾಜ ಆಣದೂರ, ಶಾಖಾದ್ರಿ, ಶಹಮದ್ ಮತ್ತಿತರರು ಉಪಸ್ಥಿತರಿದ್ದರು.

## ಸಂಪುಟ ಸಭೆ ತೀರ್ಮಾನ

ಬಗ್ಗೆ ವಿವರ ಇದೆ ಎಂದು ಸಚಿವರು ತಿಳಿಸಿದರು.

"ವರದಿ ಎರಡು ಸಂಪುಟಗಳಲ್ಲಿದೆ. ಇದು ಅಕ್ರಮಗಳ ಆರೋಪಗಳನ್ನು ಅನುಮೋದಿಸುತ್ತದೆ" ಎಂದು ಎಚ್ ಕೆ ಪಾಟೀಲ್ ಹೇಳಿದರು.ಬಿಡುಗಡೆಯಾದ ಹಣವು ಮಂಜೂರಾದ ಮೊತ್ತಕ್ಕಿಂತ ಹೆಚ್ಚಾಗಿದೆ ಮತ್ತು ಟೆಂಡರ್ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡಲಾಗಿದೆ. ಕೆಲವು ಕಾಮಗಾರಿಯಲ್ಲಿ ಅನುದಾನಕ್ಕಿಂತ ಹೆಚ್ಚಿನ ಕೆಲಸ ಕೊಡಲಾಗಿದೆ. ಅಲ್ಪ ಪ್ರಮಾಣದಲ್ಲಿ ಅನುದಾನ ಬಿಡುಗಡೆ ಆದರೂ ಪಾವತಿ ಹೆಚ್ಚಾಗಿದೆ ಎಂದು ಪಾಟೀಲ್ ಹೇಳಿದರು.ಸಂಪುಟ ಸಭೆ ವಿಚಾರಣಾ ಆಯೋಗದ ವರದಿ ಮೇಲೆ ಎಸ್‌ಐ ಟಿ ರಚನೆ ಮಾಡಲು ನಿರ್ಧಾರ ಮಾಡಿದೆ. ಈ ತಂಡದಲ್ಲಿ ತಾಂತ್ರಿಕ ಪರಿಣತರು ಇರಲಿದ್ದಾರೆ. ಆದಷ್ಟು ಬೇಗ ಎರಡು ತಿಂಗಳಲ್ಲಿ ವರದಿ ಕೊಡಲು ಸೂಚನೆ ನೀಡಲಾಗುವುದು ಮತ್ತು ವರದಿಯನ್ನು ಸಂಪುಟ ಸಭೆಯಲ್ಲಿ ಮಂಡಿಸಲಾಗುವುದು ಎಂದರು.

# ಏ. 16ರಂದು ಕಲಬುರಗಿಯಲ್ಲಿ

## ವಿಭಾಗಮಟ್ಟದ ಬೃಹತ್ ಉದ್ಯೋಗ ಮೇಳ

ಕಲಬುರಗಿ.ಏ.11:ಕಲಬುರಗಿ ನಗರದ ಕೆ.ಸಿ.ಟಿ.ಇಂಜಿನೀಯರಿಂಗ್ ಕಾಲೇಜಿನ ಆವರಣದಲ್ಲಿ ಇದೇ ಏಪ್ರಿಲ್ 16 ರಂದು ವಿವಿಧ ತಾಂತ್ರಿಕ ಹಾಗೂ ತಾಂತ್ರಿ-ಕೇತರ ಹುದ್ದೆಗಳಿಗೆ ನೇರವಾಗಿ ಹಾಗೂ ವರ್ಚುವಲ್ ಮೂಲಕ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಈ ಬೃಹತ್ ಉದ್ಯೋಗ ಮೇಳದಲ್ಲಿ ಅಂದಾಜು 300ಕ್ಕಿಂತ ಹೆಚ್ಚಿನ ಕಂಪನಿಗಳು ಹಾಗೂ 25,000ಕ್ಕೂ ಹೆಚ್ಚು ಉದ್ಯೋಗ ಆಕಾಂಕ್ಷಿಗಳು ಭಾಗವಹಿಸಲಿದ್ದಾರೆ ಎಂದು ಕಲಬುರಗಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ತಿಳಿಸಿದ್ದಾರೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸುವರು.

ಈ ಈ ಉದ್ಯೋಗ ಮೇಳದಲ್ಲಿ ರಾಜ್ಯದ ಉಪ ಮುಖ್ಯಮಂತ್ರಿಗಳು, ಸಂಪುಟ ದರ್ಜೆಯ ಸಚಿವರು, ಕಲಬುರಗಿ ಜಿಲ್ಲೆಯ ಉಸ್ತುವಾರಿ ಸಚಿವರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು, ಈ ಭಾಗದ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಕೈ.ತ.ಉ. ಇಲಾಖೆಯ ಸಹಾಯಕ ನಿರ್ದೇಶಕರ ಬಸವರಾಜ ಕಣಮಸ್ ಇವರ ಮೊಬೈಲ್ ಸಂಖ್ಯೆ: 9449513639 ಗೆ ಸಂಪರ್ಕಿಸಲು

ಕೋರಲಾಗಿದೆ.

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.11:ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಏಪ್ರಿಲ್ 15 ರಂದು ಮಂಗಳವಾರ ಬೆಂಗಳೂರಿನಿಂದ ಕಲಬುರಗಿಗೆ ಆಗಮಿಸಿ, ನಿಗದಿತ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

ಏಪ್ರಿಲ್ 16 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿ ನಗರದ ಕೆ.ಸಿ.ಟಿ. ಕಾಲೇಜಿನ ಆವರಣದಲ್ಲಿ ಮುಖ್ಯಮಂತ್ರಿಗಳೊಂದಿಗೆ ಉದ್ಯೋಗ ಮೇಳದ ಉದ್ಘಾಟನಾ ಕಾರ್ಯಕ್ರಮ ಹಾಗೂ

ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

# ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಉಚಿತ ಆರೋಗ್ಯ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.11:ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕಲಬುರಗಿ ತಾಲೂಕಿನ ಸರಡಗಿ ಬಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ತಿಳುಗೂಳು ಗ್ರಾಮದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಉಚಿತ ಆರೋಗ್ಯ ಶಿಬಿರವನ್ನು ಶುಕ್ರವಾರ ಹಮ್ಮಿಕೊಳ್ಳಲಾಯಿತು.

ಈ ಆರೋಗ್ಯ ಶಿಬಿರದಲ್ಲಿ ಕಲಬುರಗಿ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಎಂ.ಡಿ ಸೈಯದ ಪಟೇಲ ಅವರು ಮಾತನಾಡಿ, ಪ್ರತಿಯೊಬ್ಬ ಕೂಲಿ ಕಾರ್ಮಿಕರು ಕಒಎಎಜ ಮತ್ತು ಕಒಖಃಜ ಯೋಜನೆಯಡಿ (ಖಟಿಣಡಿಚಿಟಿಛಿಜ) ವಿಮೆ ಮಾಡಿಸಿಕೊಳ್ಳಬೇಕು. ನರೇಗಾ ಕೂಲಿ ಮೊತ್ತ 370 ರೂ. ಗಳಿಗೆ ಹೆಚ್ಚಿಸಲಾಗಿದೆ. ಎಲ್ಲರೂ ನಿಗದಿಪಡಿಸಿದ ಅಳತೆಗನುಗುಣವಾಗಿ ಕೆಲಸ ಮಾಡಬೇಕು. ಕಾಮಗಾರಿ ಸ್ಥಳದಲ್ಲಿ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಆರೋಗ್ಯ ಕಿಟ್ ಮತ್ತು ಓ.ಆರ್. ಎಸ್. ಪಾಕೀಟ್ ವ್ಯವಸ್ಥೆ ಮಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ನಂತರ ಕಾಮಗಾರಿ ಸ್ಥಳದ ಬಗ್ಗೆ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಕಲಬುರಗಿ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ ರೇವಣಸಿದ್ದಪ್ಪ ಗೌಡರ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬೋರಮ್ಮ, ಗ್ರಾಮ ಪಂಚಾಯತಿ ಅಧ್ಯಕ್ಷ ಚಂದ್ರಕಾಂತ, ಐ.ಈ.ಸಿ. ಸಂಯೋಜಕ ಮೊಸಿನ್ ಖಾನ್, ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಕಲಬುರಗಿ ತಾಲೂಕ ಪಂಚಾಯತ, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಂತೃಪ್ತ ಜೀವನಕ್ಕೆ ಸದ್ಗುಣಗಳು ಅತ್ಯವಶ್ಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.11: ಮಾನವರು ಸಂತೃಪ್ತ ಜೀವನ ನಡೆಸಲು ಸದ್ಗುಣಗಳನ್ನು ಅತ್ಯವಶ್ಯವಾಗಿ ಬೆಳೆಸಿಕೊಳ್ಳಬೇಕು ಎಂದು ರಾಚೋಟೇಶ್ವರ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ಹೇಳಿದರು.

ತಾಲ್ಲೂಕಿನ ತೇಗಂಪೂರ ಗ್ರಾಮದಲ್ಲಿ ಮಹಾದೇವ ಜಾತ್ರೆ ನಿಮಿತ್ತ ಹಮ್ಮಿಕೊಂಡಿದ್ದ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಧಾರ್ಮಿಕ ನಂಬಿಕೆಗಳು ಮತ್ತು ದೇವರಲ್ಲಿ ಭಕ್ತಿ, ಮನುಷ್ಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸುತ್ತವೆ. ಅನಿಶ್ಚಿತವಾದ ಬದುಕಿನಲ್ಲಿ ನಿಶ್ಚಿಂತೆಯಿಂದ ಬದುಕಲು ಪ್ರತಿಯೊಬ್ಬರು ದೈವಿಕ ಗುಣಗಳನ್ನು ಬೆಳೆಸಿಕೊಂಡು ಸಮಾಜೋಪಯೋಗಿ ಕಾರ್ಯಗಳ ಮೂಲಕ ಉತ್ತಮ ಬದುಕನ್ನು ನಡೆಸಬೇಕು ಎಂದು ತಿಳಿಸಿದರು.

ಪ್ರಮುಖರಾದ ಶಿವಕುಮಾರ್ ಪಾಟೀಲ, ಸುಭಾಷ್ ಪಾಟೀಲ, ಪ್ರೇಮಕುಮಾರ ಪ್ರಭಾ, ಗಣಪತಿ ಬಿರಾದಾರ,

ಸಂತೋಷ ಅಮೃತರಾವ್ ಪಾಟೀಲ, ದತ್ತಾತ್ರಿ ಪಾಟೀಲ, ರೇಣುಕಾ ಪಾಟೀಲ, ಅನ್ನಪೂರ್ಣ ಪ್ರಭಾ ಸೇರಿದಂತೆ ಇತರರು ಇದ್ದರು.

# ಅಕ್ರಮ ಕೋಚಿಂಗ್ ಸೆಂಟರ್ ಗಳ ವಿರುದ್ಧ ಕ್ರಮ ಕೈಗೊಳ್ಳದ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ. ಏ. 11: ತಾಲೂಕಿನಲ್ಲಿ ಕೋಚಿಂಗ್ ಸೆಂಟರ್ ನೆಪದಲ್ಲಿ ವಿದ್ಯಾರ್ಥಿಗಳಿಗೆ ಅಕ್ರಮವಾಗಿ ಪ್ರವೇಶ ಪಡೆದುಕೊಂಡು ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಹೊಂದದೆ. ಶಿಕ್ಷಣ ಇಲಾಖೆಯ ಯಾವುದೇ ನಿಯಮ ಪಾಲಿಸದ 50 ಕ್ಕೂ ಹೆಚ್ಚು ಕೋಚಿಂಗ್ ಸೆಂಟರ್‌ಗಳು ವ್ಯಾಪಕವಾಗಿ ಪ್ರಚಾರಗೈದು ಸಾರ್ವಜನಿಕರನ್ನು ವಂಚಿಸುತ್ತಿರುವದು ತಾಲೂಕಿನಲ್ಲಿ ಸಾಮಾನ್ಯವಾಗಿದ್ದು ಇಂತಹ ಅಕ್ರಮ ಕೋಚಿಂಗ್ ಸೆಂಟರ್ ಗಳ ವಿರುದ್ಧ ಕ್ರಮ ಕೈಗೊಳ್ಳದ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ದಲಿತ ಸಂಘರ್ಷ ಸಮಿತಿಯ ( ನಾಗವಾರ ಬಣದ) ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಪ್ರಭುಲಿಂಗ ಮೇಗಳಮನಿ ಅವರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬರೆದ ಮನವಿ ಪತ್ರವನ್ನು ಸಹಾಯಕ ಆಯುಕ್ತರಿಗೆ ಸಲ್ಲಿಸಿ ಕ್ರಮಕ್ಕೆ ಒತ್ತಾಯಿಸಿದರು. ತಾಲೂಕಿನಲ್ಲಿ ಕೆಲವು ಕೋಚಿಂಗ್ ಸೆಂಟಗರ್‌ಳು ಪರವಾನಿಗೆ ಪಡೆಯುವ ಸಂಧರ್ಭದಲ್ಲಿ ಯಾವುದೋ ಒಂದು ಶಾಲೆಯ ವಿಳಾಸ ಮತ್ತು ದಾಖಲೆಗಳನ್ನು ತೋರಿಸಿ ನಂತರದಲ್ಲಿ ಇನ್ನಾವುದೋ ಶೆಡ್‌ನಲ್ಲಿ ಅಥವಾ ಮೂಲಭೂತ ಸೌಕರ್ಯ ಹೊಂದದೆ ಇರುವ ಕಡೆ ಕೋಚಿಂಗ್ ನಿರ್ವಹಣೆ ಮಾಡಲಾಗುತ್ತಿದೆ. ಸಾರ್ವಜನಿಕರು ಇದನ್ನು ಪ್ರಶ್ನಿಸಿದರೆ ನಮ್ಮಲ್ಲಿ ಪರವಾನಿಗೆ ಇದೆ ಎಂದು ಹೇಳುತ್ತಾರೆ. ಆದರೆ ಸದರಿ ಪರವಾನಿಗೆ ಪಡೆದ ಕೋಚಿಂಗ್ ಸೆಂಟರ್‌ಗಳ ವಿಳಾಸ ಹಾಗೂ ದಾಖಲೆಗಳನ್ನು ಪರಿಶೀಲಿಸಿದರೆ ಎಲ್ಲವೂ ಆಕ್ರಮ ದಾಖಲೆಗಳನ್ನು ನೀಡಿ ಇಲಾಖೆಗೆ ಹಾಗೂ ಮುಗ್ಧ ಜನರಿಗೆ ವಂಚಿಸುತ್ತಿರುವದು ಮೇಲ್ನೋಟಕ್ಕೆ ಸಾಬೀತಾಗುತ್ತದೆ.

ವಿಶೇಷವಾಗಿ ನಮ್ಮ ಭಾಗದಲ್ಲಿ ಈ ಭಾರಿ ಬಿಸಿಲಿನ ಪ್ರಖರತೆ ಹೆಚ್ಚು ಇರುವುದನ್ನು ಹವಮಾನ ಇಲಾಖೆ ಹಾಗೂ ಜಿಲ್ಲಾಧಿಕಾರಿಗಳು ಈಗಾಗಲೇ ಜನರಿಗೆ ಜಾಗೃತಿ ಮೂಡಿಸಿದ್ದಾರೆ. ಆದಾಗ್ಯೂ ಕೂಡ ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯ ಕುರಿತು ಯಾವ ಮಾನದಂಡಗಳನ್ನು ಅನುಸರಿಸದೆ ರಾಜಾರೋಷವಾಗಿ ಬ್ಯಾನರ್, ಭಿತ್ತಿ ಪತ್ರಗಳ ಮೂಲಕ ಪ್ರಚಾರ ಮಾಡಿ ಕೋಚಿಂಗ್ ಸೆಂಟರ್‌ನವರು ತಮ್ಮ ದಂಧೆಗಿಳಿದಿರುವದು ಸಾರ್ವಜನಿಕರ ಆಕ್ರೋಶಕ್ಕೆ ಗುರಿಯಾಗಿದೆ. ಉಲ್ಲೇಖ (1) ರನ್ವಯ ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ರಾಯಚೂರು ಇವರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಕೋಚಿಂಗ್ ಸೆಂಟರ್‌ಗಳನ್ನು ಮುಚ್ಚುವ ಬಗ್ಗೆ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಆದೇಶ ಕೂಡ ನೀಡಿರುತ್ತಾರೆ. ಉಲ್ಲೇಖ (2)ರ ಪತ್ರದನ್ವಯ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ,

ಬೆಂಗಳೂರ ಇವರು ಕೂಡ ಅನಧಿಕೃತವಾಗಿ ನಡೆಸುತ್ತಿರುವ ವಸತಿ ನಿಲಯಗಳು ಹಾಗೂ ಟ್ಯುಟೋರಿಯಲ್ಸ್ ಗಳಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ಅವಗಡ ಸಂಭವಿಸದಂತೆ ವಿದ್ಯಾರ್ಥಿಗಳ ಸುರಕ್ಷತಾ ಹಿತದೃಷ್ಟಿಯಿಂದ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ತಕ್ಷಣ ಪರೀಶೀಲನೆ ನಡೆಸಿ ಮೂರು ದಿನಗಳ ಒಳಗಾಗಿ ಸಂಪೂರ್ಣ ಮಾಹಿತಿಯನ್ನು ಒದಗಿಸಲು ತಿಳಿಸಿದರು ಸಹ ಇಲ್ಲಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಯಾವುದೇ ಮಾಹಿತಿ ಒದಗಿಸದೆ ಇರುವುದು ದುರ್ದೈವದ ಸಂಗತಿಯಾಗಿದೆ.

ಕೂಡಲೇ ಜಿಲ್ಲಾ ಪಂಚಾಯಿತಿಯಿಂದ ತನಿಕಾ ತಂಡವನ್ನು ರಚನೆ ಮಾಡಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಕ್ರಿಮಿನಲ್ ಕೇಸು ದಾಖಲಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದೆಂದು ಅವರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿಯ ಸಾಮಾಜಿಕ ಜಾಲತಾಣದ ತಾಲೂಕ ಸಂಚಾಲಕರಾದ ಅಕ್ರಂ ಪಾಷಾ, ತಾಲೂಕ ಸಂಚಾಲಕರಾದ ಯಲ್ಲಪ್ಪ ಹಾಲಭಾವಿ, ತಾಲೂಕ ಸಂಘಟನಾ ಸಂಚಾಲಕರಾದ ಪರಶುರಾಮ್ ಗುಡಿಜಾವೂರ, ಸದಸ್ಯರಾದ ಹುಸೇನಪ್ಪನಾಯಕ್ ಸೇರಿದಂತೆ ಉಪಸ್ಥಿತರಿದ್ದರು

# 20 ಲಕ್ಷ ರೂ. ಮೊತ್ತದ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ನನ್ನ ಮತಕ್ಷೇತ್ರದ ಅಭಿವೃದ್ಧಿ ಮತ್ತು ಜನರ ಏಳ್ಗೆಗೆ ಆದ್ಯತೆ ನೀಡಲಾಗುವುದು

ಹಿಂದುಳಿದ ಪ್ರದೇಶಗಳ ಅಭಿವೃದ್ಧಿಯೇ ನನ್ನ ಗುರಿಯಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು. ಬೀದರ್ ದಕ್ಷಿಣ ಕ್ಷೇತ್ರದ ಬಾಪುರ ಗ್ರಾಮದ ಮುಖ್ಯದ್ವಾರದಿಂದ ಗ್ರಾಮದವರೆಗೆ 20 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಇಂದು ಚಾಲನೆ ನೀಡಿ ಅವರು ಮಾತನಾಡಿದರು. ಕ್ಷೇತ್ರದ ಅಭಿವೃದ್ಧಿಗಾಗಿ ರಸ್ತೆ, ಒಳಚರಂಡಿ, ವಿದ್ಯುತ್, ಕುಡಿಯುವ ನೀರು, ಶಿಕ್ಷಣ ಸೇರಿದಂತೆ ಇತರೆ ಮೂಲಸೌಕರ್ಯಗಳನ್ನು ಒದಗಿಸುವುದು ನನ್ನ ಕರ್ತವ್ಯ ಈ ನಿಟ್ಟಿನಲ್ಲಿ ಕೆಲಸ ಮಾಡಲಾಗುತ್ತಿದೆ. ಬೀದರ್ ದಕ್ಷಿಣ ಕ್ಷೇತ್ರದ ಪರಿಪೂರ್ಣ ಅಭಿವೃದ್ಧಿಯೇ ನನ್ನ ಗುರಿಯಾಗಿದೆ. ಅಭಿವೃದ್ಧಿ ಕಾರ್ಯಗಳನ್ನು ಮಾಡಿ ಜನರ ಕಣ್ಣಲ್ಲಿ ಸಂತೋಷ ಮತ್ತು ಸಂತೃಪ್ತಿ ಕಾಣುವುದರಲಿ ನನ್ನ ಸಂತೋಷವಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಜಾರಿಗೆ ಬರುವ ಯೋಜನೆಗಳನ್ನು ಕ್ಷೇತ್ರಕ್ಕೆ ತರುವ ನಿಟ್ಟಿನಲ್ಲಿ ನಿರಂತರ ಪ್ರಯತ್ನ ಮಾಡುತ್ತಿದ್ದೇನೆ. ಗ್ರಾಮೀಣ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಜನತೆಯ ಸಂಕಷ್ಟಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸಿ ಸೇವೆಯನ್ನು ಮಾಡುತ್ತಿದ್ದೇನೆ. ಬಡ ಜನರಿಗೆ ನನ್ನ ಕೈಲಾದ ಸೇವೆಯನ್ನು ಮಾಡಿ ನೊಂದ ಜನರ ಕಣ್ಣೀರನ್ನು ಒರೆಸುವುದು ಮಾತ್ರ ನನ್ನ ಮೂಲ ಉದ್ದೇಶ ಎಂದು ಹೇಳಿದರು. ಬಳಿಕ ಕಾಮಗಾರಿ ಉತ್ತಮವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿ ಗ್ರಾಮಸ್ಥರ ಅಹವಾಲು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಗುರುನಾಥ ರಾಜಗೀರಾ ಮುಖಂಡರಾದ ಬಕ್ಕಪ್ಪ ಬಸರೆಡ್ಡಿ, ಹೇಮಾ ತುಕ್ಕಾರೆಡ್ಡಿ, ವೀರೇಶ ಪಾಟೀಲ್, ಸಂತೋಷ ಜಗದಾಳೆ, ಓಂಕಾರ ಸ್ವಾಮಿ, ಆನಂದ ರೆಡ್ಡಿ, ನಿತೀಶ್ ಡೊಂಗುರಗಾವ್, ಕಲ್ಯಾಣರಾವ ಬಾಪುರ, ಕಲ್ಯಾಣರಾವ ಬಿರಾದಾರ, ಶಂಭುಲಿಂಗ ಸ್ವಾಮಿ, ನಿಜಲಿಂಗ ಬಗದಲಕರ್, ರೇವಣ್ಣಪ್ಪ ಚಿಟ್ಟಾ, ಬಸವರಾಜ ಆಣದೂರ, ಶಾಖಾದ್ರಿ, ಶಹಮದ್ ಮತ್ತಿತರರು ಉಪಸ್ಥಿತರಿದ್ದರು.







ಬಸವಕಲ್ಯಾಣ :- ಇಲ್ಲಿನ ಪುಣ್ಯಕೋಟಿ ಪದವಿ ಪೂರ್ವ ಕಲಾ ಮತ್ತು ವಾಣಿಜ್ಯ ಕಾಲೇಜಿನ ದ್ವಿತೀಯ ಪಿ ಯು ಕಲಾ ವಿಭಾಗದ ಫಲಿತಾಂಶ 58.92% ವಾಣಿಜ್ಯ ವಿಭಾಗದ 43.75% ಕಾಲೇಜು ಒಟ್ಟು ಫಲಿತಾಂಶ 55.55 ಬಂದಿದೆ. ಬೀದರ್ ಜಿಲ್ಲೆಗೆ ಟಾಪ್ಪರ್ ಆಗಿ 1) ಮಾಣಿಕೇಶ್ವರಿ ಮಹದೇವ್ ಬಟಗೇರಾ ವಾಡಿ 97.33%, 2)ಪ್ರತಿಭಾ ಬಸರಾಜ್ ಬಟಗೇರಾ ವಾಡಿ 97.16% 3) ಸೋನಮ್ಮ ಅರ್ಜುನ್ ಕಿಣ್ಣಿವಾಡಿ 91.5 ರಷ್ಟು ಫಲಿತಾಂಶ ಪಡೆದಿ ದ್ದಾರೆ.ಕಾಲೇಜಕ್ಕೆ ಪ್ರತಿ ವರ್ಷದಂತೆ ಈ ವರ್ಷವು ಉತ್ತಮ ಫಲಿತಾಂಶ ಬಂದಿದೆ. ಈ ನಿಮಿತ್ತ ವಾಗಿ ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಯವರಿಗೆ ಸಂಸ್ಥೆಯ ಅಧ್ಯಕ್ಷರಾದ ಪ್ರೊ. ಸೂರ್ಯಕಾಂತ್ ಶೀಲವಂತ ಹರ್ಷ ವ್ಯಕ್ತಪಡಿಸಿದರು.

# ರೈತ ರಾಜನಾಗುವ ಕಾಲ ಸನ್ನಿಹಿತ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 11 ಲೋಕದಲ್ಲಿ ಕೃಷಿ ಕಾಯಕ ಶ್ರೇಷ್ಠವಾಗಿದ್ದು, ರೈತ ರಾಜನಾಗಿ ಮೆರೆಯುವ ಕಾಲ ಸನ್ನಿಹಿತವಾಗಿದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಸಿರಗಾಪೂರ ಗ್ರಾಮದ ಮಹಾದೇವ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ ಧರ್ಮ ಸಭೆಯ ಸನ್ನಿಧಾನವಹಿಸಿ ಮಾತನಾಡಿದ ಶ್ರೀಗಳು ಕೃಷಿ ಕಾಯಕ ನಮ್ಮ ನಾಗರಿಕತೆಯ ವಿಕಾಸದ ಕೇಂದ್ರವಾಗಿದ್ದು, ಎಲ್ಲಾ ಬಗೆಯ ಉದ್ಯೋಗಗಳಿಗೆ ಭದ್ರ ಭೂಮಿಗೆಯನ್ನು ಒದಗಿಸಿಕೊಡುತ್ತದೆ.

ತನು ಮನ ಭಾವಸುದ್ದಿಯಿಂದ ಶ್ರಮ ವಹಿಸಿ ದುಡಿದು ಜಗತ್ತಿಗೆ ಅನ್ನ ನೀಡುವ ರೈತನ ಮನೆಯ ಪ್ರಸಾದ ಅಮೃತ ಸಮನಾಗಿರುತ್ತದೆ.

ಸಾಮರಸ್ಯದ ಸಹಬಾಳ್ವೆಯಲ್ಲಿ ದೈವ ಭಕ್ತಿಯಲ್ಲಿ ಯಾವತ್ತೂ ಮೇಲೂ ಪಂಕ್ತಿಯನ್ನು ಕಾಯ್ದುಕೊಂಡು ಬರುತ್ತಿರುವ ಸಿರಗಾಪೂರದ ಜನತೆ ಮಹಾದೇವನ ಹಾಗೂ ಹಾರಕೂಡ ಚನ್ನಬಸವ ಶಿವಯೋಗಿಗಳ ಕೃಪೆಯಿಂದ ಶ್ರೇಯಸ್ಸಿನ ಬದುಕು ಸಾಗಿಸುವಂತಾಗಲಿ ಎಂದು ಶುಭ ಹಾರೈಸಿದರು.

ಕಲಬುರ್ಗಿ ಎಸ್ಟೇಟ್ ಅಧಿಕಾರಿ ಸಾವಿತ್ರಿ ಶರಣು ಸಲಗರ ಮಾತನಾಡಿ ಪ್ರಾಚೀನ ಕಾಲದಿಂದಲೂ ಮಹಿಳೆಯರು ಸಮಾಜದ, ರಾಷ್ಟ್ರದ ಒಳಿತಿಗಾಗಿ ತಮ್ಮ ನಿಸ್ವಾರ್ಥ ಸೇವೆಯನ್ನು, ಜ್ಞಾನಧಾರೆಯನ್ನು ನೀಡುತ್ತಾ ಬಂದಿದ್ದಾರೆ ಇಂದು ನಾರಿ ಶಕ್ತಿ ಇಲ್ಲದ ಕ್ಷೇತ್ರವೇ ಇಲ್ಲ ಎನ್ನುವಷ್ಟರ ಮಟ್ಟಿಗೆ ಸ್ತ್ರೀ ಎಲ್ಲರಂಗಗಳಲ್ಲೂ ತನ್ನ ವಿದ್ವತ್ತಿನ ಛಾಪು ಮೂಡಿಸಿದ್ದಾಳೆ.

ಪೂಜ್ಯ ಚನ್ನವೀರ ಶಿವಾಚಾರ್ಯರ ಘನ ವ್ಯಕ್ತಿತ್ವ ಹಾಗೂ ಅವರ ಆಶೀರ್ವಾದದ ಸ್ಫೂರ್ತಿಯಿಂದ ಉತ್ತಮ ಸಮಾಜ ಕಟ್ಟುವಲ್ಲಿ ನಮ್ಮನ್ನು ನಾವು ಸಮರ್ಪಿಸಿಕೊಳ್ಳೋಣ ಎಂದು ನುಡಿದರು.

ಮಲ್ಲಿನಾಥ ಹಿರೇಮಠ ಹಾರಕೂಡ.ಪಂಚಾಯಿತಿ ಉಪಾಧ್ಯಕ್ಷ ಸಾವಿತ್ರಿ ರಾಜಕುಮಾರ ಯಾಚೆ, ಮಾರುತಿ ಸಜ್ಜನ, ದೇವಿಂದ್ರಪ್ಪ ಮೂಲಗೆ, ಶರಣಬಸಪ್ಪ ಮುಡಬೆ, ಜಿ.ಎಸ್. ಮಾಲಿ ಪಾಟೀಲ, ಕುಪ್ಪಣ್ಣ ಯಾಚೆ, ಶಿವ ಕಲೋಜಿ, ರತಿಕಾಂತ ಕೋಹಿನೂರ, ದತ್ತು ಮಲ್ಕಾಪುರೆ, ಅಂಬರಾಯ ಉಗಾಜಿ, ರಾಜು ಹೆಬ್ಬಾಳ, ಶಂಭುಲಿಂಗ ಸ್ವಾಮಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಾಜಕುಮಾರ ಬಿರಾದಾರ ಸ್ವಾಗತಿಸಿದರು.

ಕುಮಾರಿ ಲಕ್ಷ್ಮಿ ರಾಜಕುಮಾರ ಯಾಚೆ ಪ್ರಾರ್ಥನಾ ಗೀತೆ.

ಕುಮಾರಿ ಸೃಷ್ಟಿ ಭರತನಾಟ್ಯ ಪ್ರಸ್ತುತಪಡಿಸಿದರು.

ಸಂತೋಷ ಯಾಚೆ ನಿರೂಪಿಸಿದರು.

ಕಾರ್ಯಕ್ರಮಕ್ಕೂ ಮೊದಲು ಅಲಂಕೃತ ಸಾರೋಟಿನಲ್ಲಿ ಹಾರಕೂಡ ಪರಮಪೂಜ್ಯರ ಅದ್ದೂರಿ ಮೆರವಣಿಗೆ ಜರುಗಿತು.

# ವಿಶ್ವ ಹೋಮಿಯೋಪಥಿ ದಿನಾಚರಣೆ: ಹುಮನಾಬಾದನಲ್ಲಿ: ರಾಷ್ಟ್ರಮಟ್ಟದ ಸಮ್ಮೇಳನ

ಹುಮನಾಬಾದ: ಏಪ್ರಿಲ್ 11–ಶ್ರೀ ವೀರಭದ್ರೇಶ್ವರ ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಹುನಬದ್ನಲ್ಲಿ ವಿಶ್ವ ಹೋಮಿಯೋಪಥಿ ದಿನಾಚರಣೆ ಅಂಗವಾಗಿ ಏಕದಿನ ರಾಷ್ಟ್ರಮಟ್ಟದ ಸಮ್ಮೇಳನ ಆಯೋಜಿಸಲಾಯಿತು. ಈ ಸಮ್ಮೇಳನವು ಹೋಮಿಯೋಪಥಿಯ ಸ್ಥಾಪಕ ಡಾ. ಸ್ಯಾಮುಯೆಲ್ ಹಾನೆಮಾನ್ ಅವರ 270ನೇ ಜನ್ಮದಿನ ನಿಮಿತ್ತ "ಹೋಮಿಯೋಪಥಿಯಲ್ಲಿ ಸಂಶೋಧನೆಯ ಗುಣಮಟ್ಟವನ್ನು ಹೆಚ್ಚಿಸುವುದು" ಎಂಬ ವಿಷಯದೊಂದಿಗೆ ನಡೆದಿತು. ಸಮ್ಮೇಳನವನ್ನು ಡಾ. ಸಿದ್ದಶರಾಮ ಪಾಟೀಲ, ಪ್ರಾಧ್ಯಾಪಕರು ಹಾಗೂ ವಿಭಾಗಾಧ್ಯಕ್ಷರು, ಡಾ. ಮಾಲಕರೆಡ್ಡಿ ಹೋಮಿಯೋಪಥಿಕ್ ವೈದ್ಯಕೀಯ ಕಾಲೇಜು, ಕಲಬುರ್ಗಿ ಅವರು ದೀಪ ಬೆಳಗಿಸಿ ಉದ್ಘಾಟಿಸಿದರು.

ಡಾ. ಸಮೀನಾ ಬಿ. ಅವರು ಹೋಮಿಯೋಪಥಿಯ ಮಹತ್ವವನ್ನು




ವಿವರಿಸಿ, ಅದರ ಜಾಗತಿಕ ಪ್ರಸಾರವನ್ನು ಶ್ಲಾಘಿಸಿದರು. ಪ್ರಾಚಾರ್ಯ ಡಾ. ಇಂದ್ರಜೀತ್ ಪಿ. ಶಾ ಅವರು ಭಾರತದಲ್ಲಿ ಹೋಮಿಯೋಪಥಿಯ ಪಾತ್ರವನ್ನು ವಿವರಿಸಿ ಸಂಶೋಧನೆಯ ಅವಶ್ಯಕತೆಯನ್ನು ಒತ್ತಿಹೇಳಿದರು.

ಡಾ. ಎಸ್. ಎಸ್. ಪಾಟೀಲ ಮತ್ತು ಡಾ. ರವಿರಾಜ್ ಪೊರೆ ಉಪನ್ಯಾಸ ನೀಡಿದ್ದು, ಹೋಮಿಯೋಪಥಿಯ ಪ್ರಸ್ತುತ ಮತ್ತು ಭವಿಷ್ಯದ ಬಗೆಗೆ ಚರ್ಚಿಸಿದರು. ಡಾ. ಸ್ವಾತಾ ಧನ್ಯವಾದ ಅರ್ಪಿಸಿದರು. ಡಾ. ಚಂದ್ರಶೇಖರ್ ಬಿ. ಪಾಟೀಲ (ಒಐಆ) ಅವರಿಗೆ ಸಮಾರಂಭದ ಯಶಸ್ಸಿಗೆ ನೀಡಿದ ಬೆಂಬಲಕ್ಕಾಗಿ ಕೃತಜ್ಞತೆ ಸಲ್ಲಿಸಲಾಯಿತು.

## ಕಾನ್‌ಸ್ಟೇಬಲ್ ವಿರುದ್ಧ ಪೋಕ್ಸೊ ಪ್ರಕರಣ ದಾಖಲು

ಯಾದಗಿರಿ,ಏ.11– ಮದುವೆಯಾಗುವುದಾಗಿ ನಂಬಿಸಿ ಅಪ್ರಾಪ್ತೆ ಮೇಲೆ ಅತ್ಯಾಚಾರ ಎಸಗಿರುವ ಆರೋಪದ ಮೇಲೆ ಸೈದಾಪುರ ಪೊಲೀಸ್ ಠಾಣೆಯ ಕಾನ್‌ಸ್ಟೇಬಲ್ ವಿರುದ್ಧ ಪೊಕ್ಸೊ ಪ್ರಕರಣ ದಾಖಲಾಗಿದೆ.

ಸಂತ್ರಸ್ತೆ ನೀಡಿದ ದೂರನ್ನು ಆಧರಿಸಿ ಸೈದಾಪುರ ಪೊಲೀಸ್ ಠಾಣೆಯ ಪೇದೆ ಬಲರಾಮ್ ವಿರುದ್ಧ ಪೊಕ್ಸೊ ಪ್ರಕರಣ ದಾಖಲಿಸಲಾಗಿದ್ದು, ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಎಸ್ಪಿ ಪ್ರಥ್ವಿಕ್ ಶಂಕರ್ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

**CITATION**

**IN THE COURT OF THE PRL. CIVIL JUDGE AND JMFC., AT HUMNABAD**

**Crl. Misc. No. 90/2025**

Petitioners :

P-1. Shivkumar S/o Govind Kalyani Age; 35 years Occu: Pvt. Work
R/o Sitalgera Tq:Humnabad Dist:Bidar.

P-2. Manjula W/o Manjunath D/o Govind Kalyani Age; 34 years Occu:
Household

Respondent:-

The Registrar of Birth and Death through the Tahasildar Humnabad.

Sub: Petition U/Sec 13 (3) of Birth and Death Registration Act 1969.

Whereas the above named petitioner has filed the petition under section 13(3) of Birth and Death Registration Act 1969 praying the Honourable court to issue Death certificate mother of petitioner no. 1 and 2 namely: late Nagamma W/o Govind Kalyani who died on 12-10-1999 at Village Sitalgera Tq:Humnabad Dist:Bidar. The petitioners claiming the death certificate of said Nagamma for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 27-05-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 08-04-2025.

//By order of the court//
Chief Ministerial Officer
Prl. Civil Judge and JMFC Court,
Humnabad

**CITATION**

**IN THE COURT OF THE PRL. CIVIL JUDGE AND JMFC., AT HUMNABAD**

**Crl. Misc. No. 89/2025**

Petitioners :

1). Alimoddin S/o Mohammed Miyan Aliyas Mahamadamiyya Age; 52
R/o Hunsnal

2). Bakshuddin S/o Mahemud Miyan Aliyas Mahamadamiyya Age; 57
R/o Hunsnal

3). Salam S/o Mahemud Miya Aliyas Mahamadamiyya Age; 44
R/o Hunsnal

4). Tayyab Pasha S/o Mahemud Miya Aliyas Mahamadamiyya Age; 42
R/o Hunsnal

5). Taher S/o Mahemud Miya Aliyas Mahamadamiyya Age; 40
R/o Hunsnal

Respondent:-

THE CHIEF REGISTRAR OF BIRTH AND DEATH THOURGHT THE TMC OFFICE HUMNABAD.

Sub: Petition U/Sec 13 (3) of Birth and Death Registration Act 1969.

Whereas the above named petitioner has filed the petition under section 13(3) of Birth and Death Registration Act 1969 praying the Honourable court to issue Death certificate of Kutuboddin S/o Mahamadamiyya who died on 05.12.2011 The petitioner claiming the death certificate of petitioners brother for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 27.05.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 09.04.2025.

//By order of the court//
Chief Ministerial Officer
Prl. Civil Judge and JMFC Court,
Humnabad

## ಅಪಾರ ಭಕ್ತರ ಸಮೂಹದಲ್ಲಿ ಜರುಗಿದ ನಿಡವಂಚಾ ನಿಜಲಿಂಗ ಭದ್ರೇಶ್ವರರ ರಥೋತ್ಸವ

# ಧಾರ್ಮಿಕ ಕ್ಷೇತ್ರಕ್ಕೆ ಚನ್ನಮಲ್ಲೇಶ್ವರರ ಕೊಡುಗೆ ಅಪಾರ : ಶಿವಸಿದ್ದ ಸೋಮೇಶ್ವರ ಶಿವಾಚಾರ್ಯರು





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಬೀದರ ತಾಲೂಕಿನ ನಿಡವಂಚ ಗ್ರಾಮದ ಶ್ರೀ ಗುರು ನಿಜಲಿಂಗ ಭದ್ರೇಶ್ವರರ 111ನೇ ಪುಣ್ಯಸ್ಮರಣೋತ್ಸವ ವೈಭವದಿಂದ ಜರುಗಿತು ಜಾತ್ರಾ ಮಹೋತ್ಸವದ ಅಂಗವಾಗಿ ನೂತನ ರಥೋತ್ಸವಕ್ಕೆ ವಿಶೇಷ ಪೂಜೆ ಸಲ್ಲಿಸಿ ಶಂಕರಲಿಂಗ ಮಹಾರಾಜರು ಚಾಲನೆ ನೀಡಿದರು. ಇಟಗಾ ಶಿವಸಿದ್ದ ಸೋಮೇಶ್ವರ ಶಿವಾಚಾರ್ಯರು ಈ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ರಥೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ ಲಿಂಗೈಕ್ಯ ಚೆನ್ನಮಲ್ಲೇಶ್ವರ ತ್ಯಾಗಿಗಳು ನಿಡವಂಚ ಭದ್ರೇಶ್ವರ ದೇವಸ್ಥಾನದಲ್ಲಿ ಘೋರ ತಪಸ್ಸು ಮಾಡಿ ನಿಜಲಿಂಗ ಭದ್ರೇಶ್ವರ ಕೃಪೆಗೆ ಪಾತ್ರರಾಗಿ ದಿವ್ಯ ಶಕ್ತಿ ಪಡೆದ ಪವಿತ್ರ ಸ್ಥಳವಾಗಿದೆ. ಇಟಗಾ ಚೆನ್ನಮಲ್ಲೇಶ್ವರರು ನಿಡವಂಚದಿಂದ ಇಟಗಾ ಆಶ್ರಮಕ್ಕೆ ಆಗಮಿಸಿ ಯೋಗದಲ್ಲಿ ಅದ್ಭುತ ಸಾಧನೆ ಮಾಡಿದ ತ್ಯಾಗಿ ಎಂದರು. ಭದ್ರೇಶ್ವರ ತತ್ವಸಿದ್ಧಾಂತಗಳನ್ನು ಇಡೀ ಜಿಲ್ಲೆಯಾದ್ಯಂತ ಪ್ರಚಾರ ಮಾಡಿದಂತಹ ಶ್ರೇಯಸ್ಸು ಲಿಂಗ್ಯಕ ಚೆನ್ನಮಲ್ಲೇಶ್ವರರಿಗೆ ಸಲ್ಲುತ್ತದೆ ಎಂದು ಸ್ಮರಿಸಿದರು. ಈ ಕಾರ್ಯಕ್ರಮದಲ್ಲಿ ಶಂಭುಲಿಂಗ ಶಿವಾಚಾರ್ಯರು ಮಾತನಾಡಿದರು ರಾಚಯ್ಯ ಚೌಕಿಮಠ ಶಿವಸಿದ್ಧ ಸೋಮೇಶ್ವರ ಶಿವಾಚಾರ್ಯರಿಗೆ ಹಾಗೂ ಶಂಭುಲಿಂಗ ಶಿವಾಚಾರ್ಯರಿಗೆ ಸನ್ಮಾನಿಸಿ ಗೌರವಿಸಿದರು. ಈ ಕಾರ್ಯಕ್ರಮದಲ್ಲಿ ರಾಮಚಂದ್ರ ಅರ್ಕಿ, ಕಿಶನ್, ಸೇರಿದಂತೆ ಗ್ರಾಮದ ಪ್ರಮುಖರು ಇಂದ್ರಣ್ಣಾ ಮೈಲೂರ್ ಇಟಗ ಸೇರಿದಂತೆ ಅಪಾರ ಭಕ್ತಾಧಿಗಳು ಉಪಸ್ಥಿತರಿದ್ದರು. ನೀಲಕಂಠ ಇಸ್ಲಾಂಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಸಂಭ್ರಮದ ಸಿದ್ಧಾರೂಢ ಸ್ವಾಮೀಜಿ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಏ. 11: ತಾಲ್ಲೂಕಿನ ಕಪಲಾಪುರ(ಎ) ಗ್ರಾಮದಲ್ಲಿ ಸಿದ್ಧಾರೂಢ ಸ್ವಾಮೀಜಿ ಜಯಂತಿಯನ್ನು ಈಚೆಗೆ ಸಂಭ್ರಮ, ಸಡಗರದಿಂದ ಆಚರಿಸಲಾಯಿತು. ಜಯಂತಿ ಅಂಗವಾಗಿ ಸಿದ್ಧಾರೂಢ ಮಠದಲ್ಲಿ ಮೂರು ದಿನ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಸಿದ್ಧಾರೂಢರ ಮೂರ್ತಿಗೆ ಪೂಜೆ, ಅಭಿಷೇಕ, ತೊಟ್ಟಿಲು, ಭಜನೆ, ಕೀರ್ತನೆ, ಮೆರವಣಿಗೆಯಲ್ಲಿ ವಿವಿಧೆಡೆಯ ಭಕ್ತರು ಪಾಲ್ಗೊಂಡರು. ಕೊನೆಯ ದಿನ ಗ್ರಾಮದ ಪ್ರಮುಖ ಬೀದಿಗಳಲ್ಲಿ ಅಲಂಕೃತ ರಥದಲ್ಲಿ ಸಿದ್ಧಾರೂಢ ಸ್ವಾಮೀಜಿ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು. ಕೋಲಾಟ, ಭಜನೆ ಮತ್ತಿತರ ಕಲಾ ತಂಡಗಳು ಮೆರವಣಿಗೆಯ ಮೆರುಗು ಹೆಚ್ಚಿಸಿದವು. ಯುವಕರು, ಮಹಿಳೆಯರು ಹೆಜ್ಜೆ ಹಾಕಿ ಸಂಭ್ರಮಿಸಿದರು. ಇದಕ್ಕೂ ಮುನ್ನ ಮಠದಲ್ಲಿ ನಡೆದ ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡಿದ ಮಠದ ಪೀಠಾಧಿಪತಿ ಪೂರ್ಣಾನಂದ ಸ್ವಾಮೀಜಿ, ಶಾಂತಿ, ನೆಮ್ಮದಿಯ ಜೀವನಕ್ಕೆ ಆಧ್ಯಾತ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು. ಪಾಲಕರು ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ಕೊಡಬೇಕು ಎಂದು ಕಿವಿಮಾತು ಹೇಳಿದರು. ಶಂಕರಾನಂದ ಸ್ವಾಮೀಜಿ, ಸದ್ರೂಪಾನಂದ ಸ್ವಾಮೀಜಿ, ಶಿವಶರಣ ಗುಂಡಪ್ಪ ಬೆಳಕೇರೆ, ಶರಣಯ್ಯ ಸ್ವಾಮಿ ಮರ್ಜಾಪುರ ಮಾತನಾಡಿದರು. ಮಠದ ಟ್ರಸ್ಟ್ ಧರ್ಮದರ್ಶಿಗಳಾದ ಹಣಮಂತರಾವ್ ಮೈಲಾರೆ, ಶಿವರಾಜ ಮೂಲಗೆ, ಬಸವರಾಜ ಮೂಲಗೆ, ಶಿವರಾಜ ಖೇಮಶೆಟ್ಟಿ, ಮಲ್ಲಿಕಾರ್ಜುನ ಕೋಟೆ, ಶಿವಕುಮಾರ ಭಾಲ್ಕೆ, ಮಲ್ಲಿಕಾರ್ಜುನ ಮಡಿವಾಳ, ರಮೇಶ ಮೈಲಾರೆ, ಪ್ರಕಾಶ ಬಿರಾದಾರ, ಸುಧಾಕರ ಹಳೆಂಬುರೆ, ಶಿವಾನಂದ ಮಮದಾಪುರೆ, ಕಲಾವತಿ ಕೊಳಾರೆ, ಮಾಣೆಮ್ಮ ಕೊಳಾರೆ, ಮಹಾನಂದ ಚಾಂಬೋಳೆ ಮತ್ತಿತರರು ಉಪಸ್ಥಿತರಿದ್ದರು.

ಮಠದಲ್ಲಿ ಐದನೇ ವೇದಾಂತ ಪರಿಷತ್ ಕಾರ್ಯಕ್ರಮವೂ ಜರುಗಿತು.

# ನೆಚರೋಪಥಿ ಆರ್ಗನೈಸೇಷನ್ ಸಲಹೆಗಾರರಾಗಿ ಚಿಕ್ಕಬಸೆ



ಮಲ್ಲಮ್ಮನುಡಿ ವಾರ್ತೆ ಬೀದರ. ಏ. 11 : ಇಂಟರ್‌ನ್ಯಾಷನಲ್ ನೆಚರೋಪಥಿ ಆರ್ಗನೈಸೇಷನ್ ಬೀದರ್ ಘಟಕದ ಸಲಹೆಗಾರರಾಗಿ ಕಾಮಶೆಟ್ಟಿ ಚಿಕ್ಕಬಸೆ ಅವರನ್ನು ನೇಮಕ ಮಾಡಲಾಗಿದೆ.

ಆರ್ಗನೈಸೇಷನ್ ರಾಷ್ಟ್ರೀಯ ಅಧ್ಯಕ್ಷ ಅನಂತ ಬಿರಾದಾರ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ನವೀನ್ ಪಬ್ಲಿಕ್ ಶಾಲೆಯ ಅಧ್ಯಕ್ಷರಾಗಿರುವ ಚಿಕ್ಕಬಸೆ, ಹಲವು ಸಂಘ ಸಂಸ್ಥೆಗಳೊಂದಿಗೆ ಒಡನಾಟ ಹೊಂದಿದ್ದಾರೆ. ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದಾರೆ. ಇಂಟರ್‌ನ್ಯಾಷನಲ್ ನೆಚರೋಪಥಿ ಆರ್ಗನೈಸೇಷನ್ ಯೋಗ ಹಾಗೂ ನಿಸರ್ಗ ಚಿಕಿತ್ಸಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದೆ. 12 ದೇಶ ಹಾಗೂ ಭಾರತದ ಹಲವು ರಾಜ್ಯಗಳಲ್ಲಿ ತನ್ನ ಸಂಪರ್ಕ ಜಾಲವನ್ನು ಹೊಂದಿದೆ.

ನೇಮಕಾತಿ ಪತ್ರ ವಿತರಣೆ: ನಗರದ ಸಿದ್ಧಾರೂಢ ಮಠದಲ್ಲಿ ಆರ್ಗನೈಸೇಷನ್ ರಾಷ್ಟ್ರೀಯ ಅಧ್ಯಕ್ಷ ಅನಂತ ಬಿರಾದಾರ ಅವರು ಕಾಮಶೆಟ್ಟಿ ಚಿಕ್ಕಬಸೆ ಅವರಿಗೆ ಶುಕ್ರವಾರ ನೇಮಕಾತಿ ಆದೇಶ ಪತ್ರ ವಿತರಿಸಿದರು.

ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ, ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಬಿ.ಜಿ. ಶೆಟಕಾರ್, ಗೋರಕನಾಥ ಇದ್ದರು.

# ಜಿಲ್ಲೆಯ ಗಿರವಿದಾರರು ಹಾಗೂ ಲೇವಾದೇವಿದಾರರು 2025ರ ತಿದ್ದುಪಡಿ ಅಧಿನಿಯಮದಡಿ ಕಾರ್ಯನಿರ್ವಹಿಸಲು ಸೂಚನೆ

ಬೀದರ : ಏ.11: ಕರ್ನಾಟಕ ಲೇವಾದೇವಿದಾರರ ಅಧಿನಿಯಮ 1961 (1962ರ ಕರ್ನಾಟಕ ಅಧಿನಿಯಮ 13) ರಲ್ಲಿ ಕರ್ನಾಟಕ ಸರ್ಕಾರದ ಸಂಸದಿಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯವು ಕೆಲವೊಂದು ತಿದ್ದುಪಡಿಯನ್ನು ಮಾಡಿದ್ದು, ಈ ತಿದ್ದುಪಡಿಯನ್ನು ಕರ್ನಾಟಕ ಲೇವಾದೇವಿದಾರರ ಅಧಿನಿಯಮ 1961 (1962ರ ಕರ್ನಾಟಕ ಅಧಿನಿಯಮ 12) (ತಿದ್ದುಪಡಿ) ಅಧಿನಿಯಮ 2025 ಎಂದು ಪ್ರಕಟಿಸಿರುತ್ತದೆ. ಕಾರಣ ಬೀದರ, ಔರಾದ(ಬಿ), ಹುಲಸೂರ, ಬಸವಕಲ್ಯಾಣ, ಭಾಲ್ಕಿ, ಹುಮನಾಬಾದ, ಚಿಟಗುಪ್ಪಾ ಹಾಗೂ ಕಮಲನಗರ ತಾಲೂಕುಗಳಲ್ಲಿ ಬರುವ ಗಿರವಿದಾರರರಿಗೆ ಹಾಗೂ ಲೇವಾದೇವಿದಾರರು 2025ರ ತಿದ್ದುಪಡಿ ಅಧಿನಿಯಮದಡಿ ಕಾರ್ಯನಿರ್ವಹಿಸಬೇಕೆಂದು ಬೀದರ ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. 1961 ಅಧಿನಿಯಮದ ಮೂಲ ಪ್ರಕರಣ: 3ನೇ ಪ್ರಕರಣದ ವಿವರಣೆ–2ರಲ್ಲಿ ಪ್ರತಿಯೊಂದು ಗಿರವಿದಾರನ ಲೈಸೆನ್ಸು 5 ವರ್ಷಗಳ ಅವಧಿಗೆ ಸಿಂಧುವಾಗಿರತಕ್ಕದ್ದು, ಅದನ್ನು ಅವಧಿಯಿಂದ ಅವಧಿಗೆ ನವೀಕರಿಸಬಹುದು. 15 ನೇ ಪ್ರಕರಣದ 01 ನೇ ವಿವರಣೇಯಲ್ಲಿ ಗಿರವಿ ಚೀಟಿಯಲ್ಲಿ ಅಥವಾ ಅವನ ಲೆಕ್ಕಪತ್ರದಲ್ಲಿ ಅಥವಾ ರಿಜಿಸ್ಟರಗಳಲ್ಲಿ ತೋರಿಸಿರುವುದಕ್ಕಿಂತ ಕಡಿಮೆ ಮೊಬಲಗನ್ನು ವಾಸ್ತವವಾಗಿ ಸಾಲವಾಗಿ ಕೊಡುವ, ಹೆಚ್ಚಿನ ದರದಲ್ಲಿ ಬಡ್ಡಿಯನ್ನು ಅಥವಾ ಇತರೆ ಯಾವುದೆ ವೆಚ್ಚನ್ನು ಸ್ವೀಕರಿಸುವ ಯಾರೇ ಗಿರವಿದಾರನು ಅಪರಾಧ ನಿರ್ಣಯವಾದ ಮೇಲೆ ಐದು ನೂರು ರೂಪಾಯಿಗಳ ವಿಸ್ತರಿಸಬಹುದಾದ ಜುಲ್ಮಾನೆಯಿಂದ ದಂಡಿತನಾಗತಕ್ಕದ್ದು. ಉಪದ್ರವಕ್ಕಾಗಿ ದಂಡ–ಸಾಲ ನೀಡಿದವನು ಬಾಕಿಯಿರುವ ಸಾಲದ ವಸೂಲಿಗಾಗಿ ಸಾಲಗಾರನಿಗೆ ಉಪದ್ರವ ಕೊಡುವ ಅಥವಾ ಅದಕ್ಕೆ ಪ್ರೇರೇಪಿಸುವ ಯಾರೇ ಆದರೂ ಅಪರಾಧ ನಿರ್ಣಯದವಾದ ಮೇಲೆ ಒಂದು ವರ್ಷ ವಿಸ್ತರಿಸಬಹುದಾದ ಕಾರಾವಾಸದಿಂದ 50 ಸಾವಿರ ರೂಪಾಯಿಗಳ ವಿಸ್ತರಿಸಬಹುದಾದ ದಂಡದಿಂದ ಅಥವಾ ಇವೆರಡರಿಂದಲೂ ದಂಡಿತರಾಗತಕ್ಕದ್ದು. 2025ರ ತಿದ್ದುಪಡಿ ಅಧಿನಿಯಮದ ಪ್ರಕರಣ: 3ನೇ ಪ್ರಕರಣದ ವಿವರಣೆ–2ರಲ್ಲಿ 5 ವರ್ಷಗಳ ಎಂಬ ಪದಗಳ ಬದಲಿಗೆ 3 ವರ್ಷಗಳ ಅವಧಿಗೆ ಸಿಂಧುವಾಗಿರತಕ್ಕದ್ದು, ಅದನ್ನು ಅವಧಿಯಿಂದ ಅವಧಿಗೆ ನವೀಕರಿಸಬಹುದು. 15 ನೇ ಪ್ರಕರಣದ 01 ನೇ ವಿವರಣೇಯಲ್ಲಿ ಗಿರವಿ ಚೀಟಿಯಲ್ಲಿ ಅಥವಾ ಅವನ ಲೆಕ್ಕಪತ್ರದಲ್ಲಿ ಅಥವಾ ರಿಜಿಸ್ಟರಗಳಲ್ಲಿ ತೋರಿಸಿರುವುದಕ್ಕಿಂತ ಕಡಿಮೆ ಮೊಬಲಗನ್ನು ವಾಸ್ತವವಾಗಿ ಸಾಲವಾಗಿ ಕೊಡುವ , ಹೆಚ್ಚಿನ ದರದಲ್ಲಿ ಬಡ್ಡಿಯನ್ನು ಅಥವಾ ಇತರೆ ಯಾವುದೆ ವೆಚ್ಚನ್ನು ಸ್ವೀಕರಿಸುವ ಯಾರೇ ಗಿರವಿದಾರನು ಅಪರಾಧ ನಿರ್ಣಯವಾದ ಮೇಲೆ ಐದು ಲಕ್ಷ ರೂಪಾಯಿಗಳ ವಿಸ್ತರಿಸಬಹುದಾದ ಜುಲ್ಮಾನೆಯಿಂದ ದಂಡಿತನಾಗತಕ್ಕದ್ದು. ಉಪದ್ರವಕ್ಕಾಗಿ ದಂಡ–ಸಾಲ ನೀಡಿದವನು ಬಾಕಿಯಿರುವ ಸಾಲದ ವಸೂಲಿಗಾಗಿ ಸಾಲಗಾರನಿಗೆ ಉಪದ್ರವ ಕೊಡುವ ಅಥವಾ ಅದಕ್ಕೆ ಪ್ರೇರೇಪಿಸುವ ಯಾರೇ ಆದರೂ ಅಪರಾಧ ನಿರ್ಣಯದವಾದ ಮೇಲೆ ಹತ್ತು ವರ್ಷ ವಿಸ್ತರಿಸಬಹುದಾದ ಕಾರಾವಾಸದಿಂದ 5 ಲಕ್ಷ ರೂಪಾಯಿಗಳ ವಿಸ್ತರಿಸಬಹುದಾದ ದಂಡದಿಂದ ಅಥವಾ ಇವೆರಡರಿಂದಲೂ ದಂಡಿತರಾಗತಕ್ಕದ್ದು. ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಅಧಿನಿಯಮ 2004 (2004ರ ಕರ್ನಾಟಕ ಅಧಿನಿಯಮ 14)ರ ಉಪಬಂಧಗಳನ್ನು ಯಾರೇ ವ್ಯಕ್ತಿಯು ಉಲ್ಲಂಘಿಸಿದರೆ, ಕಂದಾಯ ಇಲಾಖೆ ಅಥವಾ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೇ ಅಥವಾ ನಗರಾಭಿವೃದ್ಧಿ ಇಲಾಖೆ ಅಥವಾ ನಗರ ಯೋಜನಾ ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಥವಾ ಸಮಾಜ ಕಲ್ಯಾಣ ಇಲಾಖೆ ಅಥವಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಥವಾ ಬುಡಕಟ್ಟು ಕಲ್ಯಾಣ ಇಲಾಖೆ ಅಥವಾ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೇಯ ಗ್ರೂಪ್–ಬಿ ಅಧಿಕಾರಿಯ ಸಂಬಂಧಪಟ್ಟ ರಿಜಿಸ್ಟ್ರಾರ್, ಸಹಾಯಕ ರಿಜಿಸ್ಟ್ರಾರ್ ಅಥವಾ ಈ ಕುರಿತು ರಾಜ್ಯ ಸರ್ಕಾರವು ಅಧಿಕೃತಗೊಳಿಸಿದ ಯಾರೇ ಅಧಿಕಾರಿಗೆ ವರದಿ ಮಾಡತಕ್ಕದ್ದು. ವಿವಾದಗಳನ್ನು ಇತ್ಯರ್ಥಪಡಿಸುವುದಕ್ಕಾಗಿ ಸಾಲಗಾರ ಅಥವಾ ಲೇವಾದೇವಿದಾರನ ನಡುವೆ ಮಧ್ಯಸ್ಥಗಾರನಾಗಿ ಕಾರ್ಯವರ್ಹಿಸಲು ಸರ್ಕಾರವು ಅಧಿಸೂಚನೆಯ ಮೂಲಕ ಒಂಬುಂಡ್ಸ್‌ಪರ್ಸನ್‌ನನ್ನು ನೇಮಕ ಮಾಡತಕ್ಕದ್ದು, ಇತ್ಯರ್ಥ ಮತ್ತು ಮಧ್ಯಸ್ಥಿಕೆಯ ಕಾರ್ಯವಿಧಾನ ಮತ್ತು ಮಾರ್ಗಸೂಚಿಗಳು ನೇಮಿಸಬಹುದಾದಂತಹ ವಿಧಾನದಲ್ಲಿರತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪ ನಿಬಂಧಕರ ಕಾರ್ಯಾಲಯ, ಅಂಬೇಡ್ಕರ ಸರ್ಕಲ್ ಹತ್ತಿರ, ಬರೀದಶಾಹಿ ಹೋಟಲ ಎದುರುಗಡೆ, ಉದಗೀರ ರೋಡ, ಬೀದರಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಏ.16 ರಂದು ಕಲಬುರಗಿಯಲ್ಲಿ ಉದ್ಯೋಗ ಮೇಳ: ಹೆಚ್ಚಿನ ಸಾರಿಗೆ ಸೌಲಭ್ಯದ ಸದುಪಯೋಗ ಪಡೆಯಲು ಮನವಿ

ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.11: ಇದೇ ಏಪ್ರಿಲ್.16 ರಂದು ಎ.ಸಿ.ಟಿ. ಇಂಜೀನಿಯರಿಂಗ ಕಾಲೇಜು ಕಲಬುರಗಿಯಲ್ಲಿ ಉದ್ಯೋಗ ಮೇಳ ನಡೆಯುತ್ತಿದ್ದು, ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳ ಅನುಕುಲಕ್ಕಾಗಿ

ಬೀದರ ಜಿಲ್ಲೆಯಿಂದ ಕಲಬುರಗಿಗೆ ತೆರಳಲು ಹೆಚ್ಚಿನ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಈ ಸಾರಿಗೆ ಸೌಲಭ್ಯದ ಸದುಪಯೋಗವನ್ನು ಅಭ್ಯರ್ಥಿಗಳು ಪಡೆದುಕೊಳ್ಳಬೇಕೆಂದು ಬೀದರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ

# ಅಸಂಘಟಿತ ಕಾರ್ಮಿಕರ ನೋಂದಣಿ

ಬೀದರ :ಏ.11: ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 26 ವರ್ಗಗಳ ಅಸಂಘಟಿತ ಕಾರ್ಮಿಕರು ಈಗಾಗಲೇ ಗುರುತಿಸಿ ನೋಂದಾಯಿಸಲು ಮತ್ತು ಅರ್ಹ ಕಾರ್ಮಿಕರಿಗೆ ಸೌಲಭ್ಯಗಳನ್ನು ನೀಡಲು ಸರ್ಕಾರವು ಆದೇಶಿಸಿದ್ದು, ಈ ಯೋಜನೆಯಡಿ ಹೊಸದಾಗಿ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ ಮತ್ತು 3ಬಿ ಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38 ವ್ಥಳುಹಾಗೂ ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡದ ಕುಲಕಸುಬಿನಲ್ಲಿ ತೊಡಗಿರುವ 27 ವರ್ಗಗಳ ಕಾರ್ಮಿಕರು ಸೇರಿದಂತೆ ಒಟ್ಟಾರೆ 91 ವರ್ಗಗಳ ಕಾರ್ಮಿಕರು ಮಂಡಳಿಯ ವೆಬ್‌ಸೈಟ್ ತಿತಿತಿ.ಇಚಿಡಿ–ಟಿಚಿಣಚಿಇಚಿ.ರಠತ.ಎಟಿ ಪೋರ್ಟಲ್‌ನಲ್ಲಿ ಅನ್‌ಲೈನ್ ಮೂಲಕ ನೋಂದಾಯಿಸಿಕೊಂಡು ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಬೀದರ ಉಪ ವಿಭಾಗದ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾರಂಭಿಕವಾಗಿ ಗುರುತಿಸಲಾದ 26 ವರ್ಗಗಳ ಅಸಂಘಟಿತ ಕಾರ್ಮಿಕರ ವಿವರ: ಹಮಾಲರು, ಟೈಲರ್‌ಗಳು, ಗೃಹ ಕಾರ್ಮಿಕರು, ಅಗಸರು, ಚಿಂದಿ ಆಯುವವರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು, ಭಟ್ಟಿ ಕಾರ್ಮಿಕರು, ಸಿನಿ ಕಾರ್ಮಿಕರು, ನೇಕಾರರು, ಬೀದಿಬದಿ ವ್ಯಾಪಾರಿಗಳು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರಗಳು, ಸ್ವತಂತ್ರ ಲೇಖನ ಬರಹಗಾರರು, ಬೀಡಿ ಕಾರ್ಮಿಕರು, ಅಸಂಘಟಿತ ವಿಕಲಚೇತನ ಕಾರ್ಮಿಕರು, ಅಲೆಮಾರಿ ಪಂಗಡದ ಕಾರ್ಮಿಕರು, ಹಗ್ಗ ಸಿದ್ದಪಡಿಸುವ (ಬೈಜಂತ್ರಿ) ಕಾರ್ಮಿಕರು, ಉಪ್ಪನ್ನು ತಯಾರಿಸುವ ಉಪ್ಪಾರರು, ಬಿದಿರು ವೃತ್ತಿಯಲ್ಲಿರುವ ಮೇದಾರರು, ಚಪ್ಪಲಿ ತಯಾರಿಕೆ ಮತ್ತು ರಿಪೇರಿ ಮಾಡುವ ಕಾರ್ಮಿಕರು, ಕೇಬಲ್ ಕಾರ್ಮಿಕರು, ಕಲ್ಯಾಣ ಮಂಟಪ/ ಸಬಾ ಭವನ/ ಟೆಂಟ್/ ಪೆಂಡಾಲ್‌ಗಳ ಕಾರ್ಮಿಕರು, ಗಾದಿ, ಹಾಸಿಗೆ ಮತ್ತು ದಿಂಬು ತಯಾರಿಕಾ ಕಾರ್ಮಿಕರು (ಪಿಂಜಾರರು/ ನದಾಫರು).

ಹಿಂದುಳಿದ ವರ್ಗಗಳ ಪ್ರವರ್ಗ–1,2ಎ,3ಎ, ಮತ್ತು 3ಬಿ ಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರ ವಿವರ: ಬಡಗಿ /ಮರದ ಕೆತ್ತನೆ ಕೆಲಸ, ಉಣ್ಣೆ ಮತ್ತು ಕಂಬಳಿ ನೇಯ್ಗೆ ಹಾಗೂ ಕಂಬಳಿ ತಯಾರಿಕೆ, ಅಡಿಕೆ ಹಾಳೆಯಿಂದ ತಟ್ಟೆ ತಯಾರಿಕೆ, ಸಿಲ್ಕ್ ರೀಲಿಂಗ್ ಮತ್ತು ಸಿಲ್ಕ್ ಟ್ವಿಸ್ಟಿಂಗ್ ಕೆಲಸ, ಪೊರಕೆ ಕಡ್ಡಿ ತಯಾರಿಕೆ, ಸುಣ್ಣ ಸುಡುವುದು, ವಾಲಗ ಊದುವುದು, ದನಗಾಹಿ ವೃತ್ತಿ, ಹೈನುಗಾರಿಕೆ (ಗೌಳಿ ವೃತ್ತಿ), ಬಳೆ ವ್ಯಾಪಾರ / ಮೇಣದ ಬತ್ತಿ ತಯಾರಿಕೆ, ಕಂಚು ಕೆಲಸ, ನಾರಿನಿಂದ ವಿವಿಧ ಉತ್ಪನ್ನ ತಯಾರಿಕೆ, ಬೆತ್ತದ ಕೆಲಸ (ರಟ್ಟನ್) ಆಟಿಕೆ/ ಗೊಂಬೆ ತಯಾರಿಕೆ ಮತ್ತು ಕೆತ್ತನೆ ಕೆಲಸ, ಚರ್ಮದ ವಸ್ತುಗಳ ತಯಾರಿಕೆ, ಅಗರಬತ್ತಿ ತಯಾರಿಕೆ, ಕಾಯರ್ ಫೈಬರ್ ತಯಾರಿಕೆ, ಸ್ಮಶಾನ ಕಾರ್ಮಿಕರು, ವಿಗ್ರಹ / ಕಲ್ಲು ಕೆತ್ತನೆ ಕೆಲಸ, ಮೀನುಗಾರಿಕೆ, ನಾಟಿ ಔಚಧಿ ತಯಾರಿಕೆ, ಬಣ್ಣ ಶೃಂಗಾರ (ಬ್ಯೂಟಿ ಪಾರ್ಲರ್) ಮಾಡುವ ವೃತ್ತಿ, ಶೀಟ್ ಮೆಟಲ್ ವೃತ್ತಿ, ಬೈಸಿಕಲ್ ರಿಪೇರಿ, ಬಣ್ಣಗಾರಿಕೆ, ಮುದ್ರಣಗಾರಿಕೆ ಮತ್ತು ಹಚ್ಚೆ ಹಾಕುವುದು, ಮ್ಯಾಟ್ ತಯಾರಿಕೆ, ಗಾಡಿ/ ರಥ ತಯಾರಿಕೆ, ಗ್ಲಾಸ್ ಬೀಡ್ಸ್ ತಯಾರಿಕೆ, ಮೆಟಲ್ ಕ್ರಾಫ್ಟ್, ಟಿನ್ ವಸ್ತುಗಳ ತಯಾರಿಕೆ, ಜೇನು ಸಾಕಾಣಿಕೆ, ನಿಟ್ಟಿಂಗ್ ಕೆಲಸ, ಗಾಣದ ಕೆಲಸ, ಮೆಷನರಿ ಕೆಲಸ, ಹೂವು ಕಟ್ಟುವ ವೃತ್ತಿ, ಹೊಸೈರಿ ವಸ್ತುಗಳ ತಯಾರಿಕೆ, ಪಾತ್ರೆಗಳಿಗೆ ಕಲಾಯಿ ಹಾಕುವುದು, ವಾದ್ಯವೃಂದ ವೃತ್ತಿ, ವೆಲ್ಡಿಂಗ್ ಕೆಲಸ, ಕುರಿ ಸಾಕಾಣಿಕೆ.

ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆ ಅಲೆಮಾರಿ ಪಂಗಡದ ಕುಲ ಕಸುಬಿನಲ್ಲಿ ತೊಡಗಿರುವ ಕಾರ್ಮಿಕರ ವಿವರ: ಧಾರ್ಮಿಕ ಭಿಕ್ಷುಕ ವೃತ್ತಿ, ಭವಿಷ್ಯ ನುಡಿಯುವುದು, ಲಾವಣಿ ಪದಗಳನ್ನು ಹಾಡುವುದು, ಹವಾಮಾನ ಪ್ರವಾಧಿಗಳು, ಹಳ್ಳಿಗಾಡಿನ ಸಾಹಸ ಕಲೆಗಳ ಪ್ರದರ್ಶನ, ಗುಂಡು ಎಸೆಯುವುದು, ಲಾಗ ಹಾಕುವುದು, ಎತ್ತಿನ ಬಂಡಿ ತಿರುಗಿಸುವುದು ಇತರೆ ಕಸರತ್ತುಗಳ ವೃತ್ತಿ, ದೇವಸ್ಥಾನಗಳಲ್ಲಿ ನರ್ತಿಸುವುದು, ಭಿಕ್ಷಾಟನೆ, ಅಂಭಾದೇವಿಯ ಆರಾಧಕರು, ಗೋಂಧಳಿ ನೃತ್ಯ ಮಾಡುವುದು, ಜ್ಯೋತಿಷ್ಯಗಿಣಿ ಶಾಸ್ತ್ರ, ಹಸ್ತ ಮುದ್ರಿಕೆ ಶಾಸ್ತ್ರ, ಬುಡಬುಡಕಿ ಭವಿಷ್ಯ, ಕಣಿ ಹೇಳುವುದು, ದೇವರ ಕಥೆಗಳು ಹಾಗೂ ಪುರಾಣದ ಕಥೆಗಳನ್ನು ಹೇಳುವ ಹಾಗೂ ಬೊಂಬೆ ಪ್ರದರ್ಶನ, ಮದುವೆ ಮತ್ತು ಹಬ್ಬದ ದಿನಗಳಂದು ಡೋಲು ಬಡಿದು ಹಾಡು ಹೇಳುವುದು, ಅರಿಶಿಣ, ಕುಂಕುಮ ಮಾರಾಟ, ಮಸಾಲೆ ದಿನಸಿ ಮಾರಾಟ, ದೊಂಬರಾಟ, ವಿದೂಷಕ, ಮೋಡಿಗಾರರು, ಕಣ್ಣು ಕಟ್ಟು ವಿದ್ಯೆ, ಗೊಂದಲು ಹಾಕುವುದು (ಪೂಜಾ ವಿಧಾನ), ಗ್ರಾಮ ಚರಿತ್ರೆಗಳ ಪಾರುಪತ್ತೆಗಾರರು, ತಂಬೂರಿ ಮತ್ತು ಹಾರ್ಮೋನಿಯಂ ಸಹಾಯದಿಂದ ಪದಗಳನ್ನು ಕಟ್ಟಿ ಹಾಡುವುದು, ಬೊಂಬೆ, ಹೊದಿಕೆ, ಬಾಚಣಿಕೆ ತಯಾರಿಕೆ, ಹಚ್ಚೆ ಹಾಕುವುದು, ಎತ್ತನ್ನು ಹಿಡಿದುಕೊಂಡು ಊರಿಂದ ಊರಿಗೆ ಹೋಗಿ ಭಿಕ್ಷೆ ಬೇಡುವುದು, ಹಠಯೋಗ, ಧರ್ಮ ಪ್ರಚಾರ, ಕಾಲಭೈರವನ ಆರಾಧನೆ, ಕತ್ತಿ ತಯಾರಿಕೆ, ಔಷಧಿ ಮಾರಾಟಗಾರರು, ಭಿಕಾರಿ ವೈದ್ಯ ವೃತ್ತಿ, ಗಾರುಡಿಗರು, ಬೀಸುವ ಕಲ್ಲು ಮತ್ತು ಬೀಸಣಿಕೆ ಮಾರಾಟ, ಮರದ ಸೌಟುಗಳ ತಯಾರಿಕೆ, ಸೂಜಿ, ದಾರ, ಒಳಕಲ್ಲು ಮಾರಾಟ, ಡ್ರಂ ಬಾರಿಸುವುದು ಮತ್ತು ಕೊಳಲು ನುಡಿಸುವುದು, ಕಬ್ಬಿಣ, ತಾಮ್ರದ ತಂತಿಗಳನ್ನು ಉಪಯೋಗಿಸಿ ವಿಧವಿಧವಾದ ಬಳೆ ಮತ್ತು ಅಲಂಕಾರಿಕ ವಸ್ತುಗಳನ್ನು ತಯಾರಿಸುವುದು, ತೊಗಲು ಬೊಂಬೆ ಆಡಿಸುವುದು, ಮರಗವನ ಆಡಿಸುವುದು, ಊರೂರು ಅಲೆದು ಬಯಲಾಟಗಳ ಪ್ರದರ್ಶನ, ತಾಮ್ರ, ಬೆಳ್ಳಿ, ಕಲ್ಲು, ಹಿತ್ತಾಳೆಗಳಿಂದ ಆಭರಣಗಳನ್ನು ತಯಾರಿಸಿ ಮಾರಾಟ ಮಾಡುವುದು, ಅಲೆಮಾರಿ ಪಶುಪಾಲಕರು, ಕೋಳಿಮೊಟ್ಟೆ, ಮೀನು ಮಾರಾಟ ಮಾರಾಟಗಾರರು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯು ಅನ್ವಯವಾಗಲಿದ್ದು, 18 ರಿಂದ 60 ವರ್ಷದೊಳಗಿನ ಆದಾಯ ತೆರಿಗೆ ಪಾವತಿದಾರರಾಗಿರದ, ಇ.ಪಿ.ಎಫ್. ಹಾಗೂ ಇ.ಎಸ್.ಐ. ಸೌಲಭ್ಯ ಹೊಂದಿರದ ಕಾರ್ಮಿಕರು ಕಾರ್ಮಿಕ ಮಂಡಳಿಯ ತಿತಿತಿ. ಇಚಿಡಿಟಿಚಿಣಚಿಇಚಿ.ರಠತ.ಎಟಿ ಪೋರ್ಟಲ್‌ನಲ್ಲಿ ಅಗತ್ಯ ದಾಖಲೆಗೊಂದಿಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ದೊರಕುವ ಸೌಲಭ್ಯಗಳೂ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಕಛೇರಿ, ಶಿವನಗರ ಉತ್ತರ ಅಥವಾ ತಾಲ್ಲೂಕು ಕಾರ್ಮಿಕ ನಿರೀಕ್ಷಕರ ಕಛೇರಿ ಬೀದರ, ಔರಾದ, ಭಾಲ್ಕಿ, ಹುಮನಾಬಾದ, ಬಸವಕಲ್ಯಾಣ, ತಾಲ್ಲೂಕಿನಲ್ಲಿ ಸಂಪರ್ಕಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಕಾರ್ಮಿಕ ಅಧಿಕಾರಿಗಳು ತಿಳಿಸಿದ್ದಾರೆ.

# ಬೇಸಿಗೆ ತರಬೇತಿ ಶಿಬಿರ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.11: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೀದರ ವತಿಯಿಂದ 2025–26ನೇ ಸಾಲಿನಲ್ಲಿ ದಿನಾಂಕ: 22–04–2025 ರಿಂದ 11–05–2025ರವರೆಗೆ ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ವಾಲಿಬಾಲ್, ಹಾಕಿ, ಫುಟ್‌ಬಾಲ್ ಹಾಗೂ ಟೇಬಲ್ ಟೆನ್ನಿಸ್ ಕ್ರೀಡೆಗಳಲ್ಲಿ 10 ವರ್ಷದಿಂದ 18 ವರ್ಷ ಒಳಪಟ್ಟಿರುವ ಬಾಲಕ/ಬಾಲಕಿಯರಿಗೆ 21 ದಿನಗಳ ಬೇಸಿಗೆ ತರಬೇತಿ ಶಿಬಿರ ಏರ್ಪಡಿಸಲಾಗಿರುತ್ತದೆ ಎಂದು ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿ ಕ್ರೀಡೆಯಲ್ಲಿ ಕೇವಲ 50 ಜನರಿಗೆ ಮಾತ್ರ ಅವಕಾಶ ನೀಡಲಾಗಿದ್ದು ಮೊದಲು ಬಂದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಸಹಾಯಕ ನಿರ್ದೇಶಕರವರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಬೀದರ ಕಛೇರಿಯಿಂದ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ದಿನಾಂಕ: 21–04–2025 ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8310585580 ಹಾಗೂ 9844010534 ಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

# ಬಸವತತ್ವ ಜನಮಾನಸಕ್ಕೆ ಪಸರಿಸಿದ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಏ.11: ಗಡಿಭಾಗದಲ್ಲಿ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು 109 ವರ್ಷಗಳ ಕಾಲ ಗಂಧದಂತೆ ಬದುಕು ಸವೆದು ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆಗೈದಿದ್ದಾರೆ ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ವಚನ ಜಾತ್ರೆ–2025 ಮತ್ತು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ನಿಮಿತ್ತ ಗುರುವಾರ ಆಯೋಜಿಸಿದ್ದ ಶರಣರು ಕಂಡ ಬಸವಣ್ಣ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಸವಣ್ಣನವರ ಅಪ್ಪಟ ಅನುಯಾಯಿಯಾಗಿ ಬಸವತತ್ವ, ವಚನ ಸಾಹಿತ್ಯ ಜನಮಾನಸಕ್ಕೆ ತಲುಪಿಸುವಲ್ಲಿ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ ಕೊಡುಗೆ ದೊಡ್ಡದಿದೆ.

ಅಂತಹ ಪೂಜ್ಯರು ನಡೆದಾಡಿದ ನೆಲದಲ್ಲಿ ನಾವೆಲ್ಲರೂ ಜನ್ಮತಾಳಿರುವುದು ನಮ್ಮ ಪುಣ್ಯವೆಂದು ಭಾವಿಸಿದ್ದೇನೆ. ಪೂಜ್ಯರ ಬದುಕು ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಅವರ ಚಿಂತನೆ, ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಿ ಸಾರ್ಥಕ ಜೀವನ ಸಾಗಿಸಬೇಕು ಎಂದು ತಿಳಿಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ವಚನ ಜಾತ್ರೆ–2025 ಮತ್ತು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಅಂಗವಾಗಿ ಶರಣರು ಕಂಡ ಬಸವಣ್ಣ ವಿಷಯದ ಕುರಿತು ಏ.21ರ ವರೆಗೆ ಪ್ರವಚನ ಏರ್ಪಡಿಸಲಾಗಿದೆ ಪ್ರತಿದಿನ ಸಾಯಂಕಾಲ 6 ಗಂಟೆಗೆ ನಡೆಯುವ ಪ್ರವಚನದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಬೆಳಗಾವಿ–ಯಮಕನಮರಡಿ ಹುಣಸಿಕೊಳ್ಳ ಜಗದ್ಗುರು ಶೂನ್ಯ ಸಂಪಾದನಾ ಮಠದ ಉತ್ತರಾಧಿಕಾರಿ ಸಿದ್ಧಬಸವ ದೇವರು ಶರಣರು ಕಂಡ ಬಸವಣ್ಣ ವಿಷಯದ ಕುರಿತು ಪ್ರವಚನ ನೀಡಿದರು.

ಮಸ್ಕತ್ ಕರ್ನಾಟಕ ಸಂಘದ ಮಾಜಿ ಸಲಹೆಗಾರ ಭೀಮ ನೀಲಂಕಠರಾವ ಹಂಗರಗೆ ಬಸವ ಗುರುವಿನ ಪೂಜೆ ನೆರವೇರಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಬಸವಮುರಘೇಂದ್ರ ಸ್ವಾಮೀಜಿ ನೇತೃತ್ವವಹಿಸಿದ್ದರು. ರೇಖಾ ಮಹಾಜನ ಸೇರಿದಂತೆ ಹಲವರು ಇದ್ದರು. ಪ್ರವಚನ ಸೇವಾ ಸಮಿತಿ ಅಧ್ಯಕ್ಷೆ ಶಶಿಕಲಾ ಅಶೋಕ ವಾಲೆ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿದರು. ವೀರಣ್ಣ ಕುಂಬಾರ ವಂದಿಸಿದರು.

ಸಿದ್ಧಬಸವ ದೇವರು ವಚನ ಸಾಹಿತ್ಯದ ಬಗ್ಗೆ ಸಾಕಷ್ಟು ಅಧ್ಯಯನ ನಡೆಸಿದ್ದಾರೆ. ಅಂತಹ ಪೂಜ್ಯರು ಶರಣರು ಕಂಡ ಬಸವಣ್ಣ ವಿಷಯದ ಕುರಿತು ಪ್ರವಚನದ ಮೂಲಕ ಜ್ಞಾನ ದಾಸೋಹ ನೀಡುತ್ತಿದ್ದಾರೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿ ಆಲಿಸಬೇಕು.

**–ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

# ಕಟ್ಟಡ ಕಾರ್ಮಿಕರಿಗೆ ಕಿಟ್‌ಗಳ ವಿತರಣೆ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಏ.11: ಕಾರ್ಮಿಕ ಇಲಾಖೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ರವರ ಸಯುಕ್ತಾಶ್ರಯದಲ್ಲಿ ಶುಕ್ರವಾರ, ಔರಾದ ಮತ್ತು ಕಮಲನಗರ ತಾಲೂಕಿನ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗಾಗಿ ಸರಬರಾಜು ಆದ ವಿವಿಧ ಕಿಟ್ಗಳಾದ ಮೇಸನ್, ಟೈಲ್ಸ್, ವೆಲ್ಡಿಂಗ್ ಹಾಗೂ ಈ ಹಿಂದೆ ಆರ್,ಪಿ,ಎಲ್ ತರಬೇತಿಯನ್ನು ಪಡೆದ ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಪ್ರಮಾಣ ಪತ್ರ ಹಾಗೂ ಆರ್.ಪಿ.ಎಲ್ ಕಿಟ್ ವಿತರಣೆ ಕಾರ್ಯಾಕ್ರಮ ತಾಲೂಕಾ ಪಂಚಾಯತ ಔರಾದ (ಬಾ) ಸಂಭಾಂಗಣದಲ್ಲಿ, ನೆರೆವೆರಿಸಲಾಯಿತು. ಸದರಿ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಆಗಮಿಸಿ ಪ್ರಭು.ಬಿ.ಚೌವ್ಹಾಣ ಮಾನ್ಯ ಶಾಸಕರು, ಕೇಂದ್ರ & ರಾಜ್ಯ ಸರ್ಕಾರದಿಂದ ಬರುವ ಸೌಲಭ್ಯವನ್ನು ತಾಲ್ಲೂಕಿನ ಎಲ್ಲಾ ಕಾರ್ಮಿಕರ ಇಲಾಖೆ ಎಲ್ಲಾ ಸೌಲಭ್ಯವನ್ನು ದೋರಕಿಸುವ ನಿಟ್ಟಿನ ನಾನು ಸದಾ ಕಾರ್ಮಿಕರ & ಇಲಾಖೆಯ ಪರವಾಗಿ ಇರುವುದಾಗಿ ಕಿಟ್ ವಿತರಣೆ ಕಾರ್ಯಾಕ್ರಮವನ್ನು ಶಾಸಕರು ಮಾತನಾಡಿದರು. ಮಹೇಶ.ಎಲ್. ಕುಳಲಿ ಕಾರ್ಮಿಕ ಅಧಿಕಾರಿಗಳು ಮಾತನಾಡಿ, ಬೀದರ ರವರು ಕಾರ್ಮಿಕರಿಗೆ ಇರುವ ಯೋಜನೆ ಮತ್ತು ಸೌಲಭ್ಯಗಳ ಕುರಿತು ತಿಳಿಸಿದರು, ಶ್ರೀ ರಾಹುಲ. ಬಿ. ರತ್ನಾಕರ ಕಾರ್ಮಿಕ ನಿರೀಕ್ಷರು, ಔರಾದ ವೃತ್ತ ಔರಾದ (ಬಾ) ರವರು ಕಾರ್ಮಿಕರಿಗೆ ಇರುವ ಸೌಲಭ್ಯ ಮತ್ತು ಕಿಟ್ಗಳ ಕುರಿತು ಕಾರ್ಮಿಕರ ಮಕ್ಕಳ ಶೀಷ್ಯವೇತನ & ಇಲಾಖೆಯ ಯೋಜನೆಗಳ ಕುರಿತು ವಿವರಿಸಿದರು. ಈ ಸಂದರ್ಭದಲ್ಲಿ ಮಹೇಶ ಪಾಟೀಲ್ ತಾಲೂಕಾ ದಂಡಾಧಿಕಾರಿಗಳು, ಮಾಣೀಕರಾವ ಪಾಟೀಲ ಕಾರ್ಯನಿರ್ವಾಹಕ ಅಧಿಕಾರಿಗಳು, ತಾ. ಪಂ ವ್ಯವಸ್ಥಾಪಕರು, ಸಿಬ್ಬಂದಿಗಳು ಪ್ರಭೋದಿತ ಸರ್ವಿಸ್ ಇಂಡಿಯಾ ಪ್ರೈ.ಲಿಮಿಟೆಡ್, ಆರ್.ಪಿ.ಎಲ್, ಗುಲ್ಬರ್ಗಾ ವಿಭಾಗ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳಾದ ಶ್ರೀ ಶಿವಶಂಕರ, ಶ್ರೀ ರಘುನಾಥ ಹಾಜರಿದ್ದರು.

## ಏ.16 ರಂದು ಶ್ರೀ ಬಸವ ಜಯಂತಿ ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 11– 2025ರ ಏಪ್ರಿಲ್ 30ರ ಬುಧವಾರ ರಂದು ಶ್ರೀ ಬಸವ ಜಯಂತ್ಯೋತ್ಸವವನ್ನು ಆಚರಣೆ-ಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ 2025ರ ಏಪ್ರಿಲ್ 16ರ ಬುಧವಾರ ರಂದು ಅಂದು ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಶ್ರೀ ಬಸವ ಜಯಂತ್ಯೋತ್ಸವವನ್ನು ಜಯಂತಿಯನ್ನು ಆಚರಣೆಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಸಂಬಂಧಿಸಿದ ಅಧಿಕಾರಿಗಳು ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 11– ಯಾದಗಿರಿ ಜಿಲ್ಲೆಯ 2025ರ ಏಪ್ರಿಲ್ 16, 17 ರಂದು ನಡೆಯಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಈ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶವನ್ನು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೊರಡಿಸಿದ್ದಾರೆ.

ಪ್ರಕ್ರಿಯೆ ಬಿ.ಎನ್.ಎಸ್.ಎಸ್ 2023ರ ಕಲಂ 163 ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ 2025ರ ಏಪ್ರಿಲ್ 16 ರಿಂದ 17ರ ವರೆಗೆ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯ ವರೆಗೆ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ 9 ಪರೀಕ್ಷಾ ಕೇಂದ್ರಗಳು, (ಯಾದಗಿರಿ ನಗರದ 9 ಪರೀಕ್ಷಾ ಕೇಂದ್ರಗಳು) ನಡೆಸಲಾಗುತ್ತಿದ್ದು, ಈ ಪರೀಕ್ಷೆಗಳು ಸುಸೂತ್ರವಾಗಿ ನಡೆಸುವ ಹಿತದೃಷ್ಟಿಯಿಂದ, ಪರೀಕ್ಷಾ ಕೇಂದ್ರದ ಸುತ್ತಮುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಹಾಗೂ ಜೆರಾಕ್ಸ್ ಅಂಗಡಿಗಳು, ಪುಸ್ತಕ ಮಳಿಗೆಗಳನ್ನು ಷರತ್ತಿಗೊಳಪಟ್ಟು ತೆರೆಯುವುದನ್ನು ನಿಷೇಧಿಸಿ ಆದೇಶಿಸಿದೆ.

ಷರತ್ತುಗಳು : ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ ಮೊಬೈಲ್, ಪೇಜರ್, ಜೆರಾಕ್ಸ್, ಟೈಪಿಂಗ್, ಪುಸ್ತಕ ಮಳಿಗೆಗಳು ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ನಿಗದಿಪಡಿಸಿದ ಅಧಿಕಾರಿಗಳನ್ನು, ಶಿಕ್ಷಕರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವದನ್ನು ನಿಷೇಧಿಸಲಾಗಿದೆ. 200 ಮೀಟರ್ ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಈ ಆದೇಶ ಅನ್ವಯವಾಗುವುದಿಲ್ಲ. ಜವಹಾರ ಪದವಿ ಪೂರ್ವ ಕಾಲೇಜು ಯಾದಗಿರಿ ಪರೀಕ್ಷಾ ಕೇಂದ್ರದ ಬಾಲಾಜಿ ಕಲ್ಯಾಣ ಮಂಟಪಕ್ಕೆ ಹೊಂದಿಕೊಂಡಿದ್ದು, 2025ರ ಏಪ್ರಿಲ್ 16 ರಿಂದ 17 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯ ವರೆಗೆ ಯಾವುದೇ ತರಹದ ಸಭೆ ಸಮಾರಂಭಗಳನ್ನು ಮತ್ತು ಧ್ವನಿವರ್ಧಕಗಳನ್ನು ನಿಷೇಧಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಉತ್ತರ ಪತ್ರಿಕೆಗಳ

## ಮೌಲ್ಯಮಾಪನ ಕೇಂದ್ರದ ಸುತ್ತಲೂ ನಿಷೇಧಾಜ್ಞೆ ಜಾರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏಪ್ರಿಲ್ 11–ಯಾದಗಿರಿ ಜಿಲ್ಲೆಯ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕೇಂದ್ರದ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶವನ್ನು ಯಾದಗಿರಿ ಡಾ.ಸುಶೀಲಾ.ಬಿ ಅವರು ಹೊರಡಿಸಿದ್ದಾರೆ.

ಪ್ರಕ್ರಿಯೆ ಬಿ.ಎನ್.ಎಸ್.ಎಸ್ 2023ರ ಕಲಂ 163 ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ 2025ರ ಏಪ್ರಿಲ್ 15 ರಿಂದ 21ರ ವರೆಗೆ ಮೌಲ್ಯಮಾಪನ ಪ್ರಕ್ರಿಯೆಯು ಸುಸೂತ್ರವಾಗಿ ನಡೆಸುವ ದೃಷ್ಟಿಯಿಂದ ಮೌಲ್ಯಮಾಪನ ಕೇಂದ್ರಗಳ ಸುತ್ತಮುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಆದೇಶಿಸಿದೆ.

ಮೌಲ್ಯಮಾಪನ ಕೇಂದ್ರಗಳು : ಸರ್ಕಾರಿ ಪ್ರೌಢ ಶಾಲೆ ಸ್ಟೇಷನ್ ಬಜಾರ್ ಆರ್.ಟಿ.ಒ ಕಛೇರಿ ಹತ್ತಿರ ಯಾದಗಿರಿ ( ವಿಷಯ ಸಂಕೇತ 01ಕೆ). ಡಾನ್ ಬೋಸ್ಕೋ ಪ್ರೌಢ ಶಾಲೆ 2ನೇ ಮಹಡಿ ಚಿತ್ತಾಪೂರ ರಸ್ತೆ, ಯಾದಗಿರಿ. (ವಿಷಯ ಸಂಕೇತ 31ಇ). ಡಾನ್ ಬೋಸ್ಕೋ ಹಿರಿಯ ಪ್ರಾಥಮಿಕ ಶಾಲೆ 1ನೇ ಮಹಡಿ ಚಿತ್ತಾಪೂರ ರಸ್ತೆ ಯಾದಗಿರಿ (ವಿಷಯ ಸಂಕೇತ 61ಹೆಚ್). ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು (ಪ್ರೌಢ ವಿಭಾಗ) ಕೆಳ ಮಹಡಿ ಯಾದಗಿರಿ (ವಿಷಯ ಸಂಕೇತ 81 ಇಕೆ). ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು (ಪ್ರೌಢ ವಿಭಾಗ) 1ನೇ ಮಹಡಿ, ಯಾದಗಿರಿ (ವಿಷಯ ಸಂಕೇತ 83ಇಕೆ). ಆರ್.ವಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆ ಲಕ್ಷ್ಮೀ ನಗರ ಗ್ರಾಮೀಣ ಪೊಲೀಸ್ ಸ್ಟೇಷನ್ ರೋಡ ಯಾದಗಿರಿ (ವಿಷಯ ಸಂಕೇತ 85 ಇಕೆ) ನಡೆಯಲಿದೆ.

ಷರತ್ತುಗಳು: ಮೌಲ್ಯಮಾಪನ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಮೊಬೈಲ್, ಪೇಜರ್, ಜೆರಾಕ್ಸ್, ಟೈಪಿಂಗ್, ಪುಸ್ತಕ ಮಳಿಗೆಗಳು ಮುಂತಾದವುಗಳನ್ನು ನಿಷೇಧಿಸಲಾಗಿದೆ. ಮೌಲ್ಯಮಾಪನ ಕೇಂದ್ರಗಳಲ್ಲಿ ನಿಗದಿಪಡಿಸಿದ ಅಧಿಕಾರಿಗಳನ್ನು, ಶಿಕ್ಷಕರನ್ನು ಹೊರತುಪಡಿಸಿ ಇನ್ನೂಳಿದವರಿಗೆ ಪರವಾನಿಗೆ ಇಲ್ಲದೇ ಮೌಲ್ಯಮಾಪನ ಕೇಂದ್ರದಲ್ಲಿ ಪ್ರವೇಶ ಮಾಡುವದನ್ನು ನಿಷೇಧಿಸಲಾಗಿದೆ. 200 ಮೀಟರ್ ಮೌಲ್ಯಮಾಪನ ಕೇಂದ್ರದ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಈ ಆದೇಶ ಅನ್ವಯವಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.11: ಸಾಲಬಾಧೆಯಿಂದ ತನ್ನ ಹೊಲದಲ್ಲಿ ರೈತನೊಬ್ಬ ನೇಣು ಹಾಕಿಕೊಂಡು ಸಾವನ್ನಪ್ಪಿದ ಘಟನೆ ಜೇವರಗಿ ತಾಲೂಕಿನ ಸೊನ್ನ ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿವಾಸಿ ಕೆರೆಪ್ಪ ಪೂಜಾರಿ ಮಿಣಜಗಿ ಆತ್ಮಹತ್ಯೆ ಮಾಡಿಕೊಂಡ ರೈತ ಕೂಡಲೇ ಸ್ಥಳಕ್ಕೆ ನೆಲೋಗಿ ಪೊಲೀಸ್ ಠಾಣೆಯಿಂದ ಪೊಲೀಸರು ಮತ್ತು ವೈದ್ಯರು ಆಗಮಿಸಿ ಪಂಚನಾಮೆ ಮತ್ತು ಮರಣೋತ್ತರ ಪರೀಕ್ಷೆ ನಡೆಸಿದರು.

## ಅದ್ದೂರಿ ಮೆರವಣಿಗೆ ಮೂಲಕ ಭಗವಾನ್ ಮಹಾವೀರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಹಿಂಸಾ ತತ್ವಗಳ ಪ್ರತಿಪಾದಕ ಭಗವಾನ್ ಮಹಾವೀರ ಜಯಂತಿಯ ಅಂಗವಾಗಿ ಕೊಪ್ಪಳದಲ್ಲಿ ಗುರುವಾರ ಮಹಾವೀರರ ಭಾವಚಿತ್ರದ ಭವ್ಯ ಮೆರವಣಿಗೆ ಅದ್ದೂ-ರಿಯಾಗಿ ಜರುಗಿತು.

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಸಹಯೋಗದಲ್ಲಿ ಭಗವಾನ್ ಮಹಾವೀರರ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗಿದ್ದು, ಮೆರವಣಿಗೆಗೆ ನಗರದ ಅಶೋಕ್ ವೃತ್ತದಲ್ಲಿ ಚಾಲನೆ ನೀಡಲಾಯಿತು. ಈ ವೇಳೆ ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ, ತಹಶಿಲ್ದಾರರ ವಿಠ್ಠಲ ಚೌಗಲಾ, ಇತರೆ ಜನಪ್ರತಿನಿಧಿಗಳು ಹಾಗೂ ಸಮಾಜದ ಮುಖಂಡರು ಮಹಾವೀರರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

*ಮೆರವಣಿಗೆಯಲ್ಲಿ ಭಾಗಿ:* ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಅವರು ಮೆರವಣಿಗೆಯಲ್ಲಿ ಪಾಲ್ಗೊಂಡು, ಸಮಾಜದವರಿಗೆ ಶುಭ ಕೋರಿದರು.

ಈ ಸಂದರ್ಭದಲ್ಲಿ ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ, ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಅಕ್ಬರಪಾಶಾ ಪಲ್ಟನ್, ಸದಸ್ಯರಾದ ಮಹೀಂದ್ರಾ ಛೋಪ್ರಾ, ರಾಜಶೇಖರ ಆಡೂರ ಹಾಗೂ ಇತರ ಸದಸ್ಯರು, ಜೈನ ಸಮಾಜದ ಮುಖಂಡರಾದ ಹೀರೋ ಜಿರಾವಲಾ, ರಾಜೇಂದ್ರ ಜೈನ, ರಾಜೇಶ ಲುಂಕಡ, ಮಹಾವೀರ ಸಂಕಲೇಚಾ, ಮಹೇಂದ್ರ ಲುಂಕಡ, ಪ್ರಮೋದ ಜೈನ, ದೀಪಚಂದ ನಿರ್ಮಲ ಚೋಪ್ರಾ, ಭರತ ಮೆಹ್ತಾ, ಜವಾಹರಲಾಲ, ಅಶೋಕ, ದಿಲೀಪ, ಮಹಾವೀರ ವಿನಾಯಕಿಂ-ಯಾ, ಗೌತಮ ಪಾಲರೇಚಾ, ಕವಿತಾ ಜಿರಾವಲಾ, ವೈಶಾಲಿ ಧಾನೇಶಾ, ಜ್ಯೋತಿ ಪಾರಿಜಾತ, ಸಂಗೀತಾ ಚೋಪ್ರಾ, ಅನಿತಾ ಚೋಪ್ರಾ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಭಗವಾನ್ ಮಹಾವೀರ ಜಯಂತಿ ಅಂಗವಾಗಿ ಮಹಾವೀರರ ಭಾವಚಿತ್ರದ ಮೆರವಣಿಗೆ ನಗರದ ಅಶೋಕ ವೃತ್ತದಿಂದ ಪ್ರಾರಂಭಗೊಂಡು ಜವಾಹರ ರಸ್ತೆ, ಗಡಿಯಾರ ಕಂಬದ ಮಾರ್ಗವಾಗಿ ಕೋಟೆ ರಸ್ತೆಯ ಜೈನ್ ಬಸದಿವರೆಗೆ ಸಾಗಿ, ಅಲ್ಲಿ ಪೂಜಾ ಕಾರ್ಯಕ್ರಮ ಜರುಗಿತು. ನಂತರ ಅಲ್ಲಿಂದ ಪುನಃ ಗಡಿಯಾರ ಕಂಬದ ಮಾರ್ಗವಾಗಿ ಗೋಶಾಲೆ ರಸ್ತೆಯ ಜೈನ್ ಮಂದಿರದ ವರೆಗೆ ವಿಜ್ರಂಭಣೆಯಿಂದ ನಡೆಯಿತು. ಮೆರವಣಿಗೆಯಲ್ಲಿ ಸಮಾಜದ ಮುಖಂಡರು, ಮಹಿಳೆಯರು, ಮಕ್ಕಳು ಭಾಗವಹಿಸಿದ್ದರು.

## ಪ್ರವಾದಿ ಪೈಗಂಬರ್ ಬಗ್ಗೆ ಯತ್ನಾಳ್ ಹೇಳಿಕೆ ಖಂಡನೀಯ : ದಾಖನಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ। ಇಸ್ಲಾಂ ಧರ್ಮದ ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರಚೋದನಾತ್ಮಕ ಮತ್ತು ಅವಹೇಳನಕಾರಿ ಹೇಳಿಕೆ ನೀಡಿರುವುದು ಖಂಡನೀಯ ಎಂದು ಟಿಪ್ಪು ಸುಲ್ತಾನ್ ರಾಷ್ಟ್ರೀಯ ಕಮಿಟಿ ರಾಷ್ಟಧ್ಯಕ್ಷರದ ಅರ್ಷದ್ ದಾಖನಿ ಖಂಡಿಸಿದ್ದಾರೆ.



ಇಸ್ಲಾಂ ಧರ್ಮದ ಪ್ರವಕ್ತರದ ಮಹಮದ್ ಪೈಗಂಬರ್ ಒಂದು ಧರ್ಮದ ಪ್ರವರ್ತಕರಾಗಿದ್ದಾರೆ. ಕೂಡಲೇ ಶಾಸಕರು ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ಕಾನೂನಾತ್ಮಕವಾಗಿ ಹೋರಾಟ ಮಾಡಬೇಕಾಗುತ್ತದೆ ಎಂದು ಗುಡುಗಿದರು.

ಒಂದು ಧರ್ಮವನ್ನು ಆಧಾರವಾಗಿಟ್ಟುಕೊಂಡು ಪದೇ ಪದೇ ಈ ರೀತಿ ಪ್ರಚೋದನಾತ್ಮಕ ಹೇಳಿಕೆ ನೀಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇಸ್ಲಾಂ ಧರ್ಮದ ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ರವರು ಪ್ರಚೋದನಾತ್ಮಕ ಮತ್ತು ಅವಹೇಳನಕಾರಿ ಹೇಳಿಕೆ ನೀಡಿರುವುದು ಖಂಡನೀಯ ಎಂದು ಖಂಡಿಸಿದ್ದಾರೆ.

ಇಸ್ಲಾಂ ಧರ್ಮದ ಪ್ರವರ್ತಕರಾದ ಮಹಮದ್ ಪೈಗಂಬರ್ ಒಂದು ಧರ್ಮದ ಪ್ರವರ್ತಕರಾಗಿದ್ದಾರೆ.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಹೋರಾಟ ಮಾಡಲಾಗುವುದು. ಒಂದು ಧರ್ಮವನ್ನು ಆಧಾರವಾಗಿಟ್ಟುಕೊಂಡು ಪದೇ ಪದೇ ಈ ರೀತಿ ಪ್ರಚೋದನಾತ್ಮಕ ಹೇಳಿಕೆ ನೀಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಓರಿಯೆಂಟಲ್ ಇನ್ಸೂರೆನ್ಸ್ ಕಂಪನಿ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹಿಸಿ ಮನವಿ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಬಂಟನೂರ, ಬೆಕಿನಾಳ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುವ ರೈತರಿಗೆ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಹಣ ಮಂಜೂರು ಮಾಡದೆ ಇರುವ ಓರಿಯಂಟಲ್ ಇನ್ಸೂರೆನ್ಸ್ ಕಂಪನಿಯ ಮೇಲೆ ಶಿಸ್ತು ಕ್ರಮ ಜರುಗಿಸುವಂತೆ ಒತ್ತಾಯಿಸಿ ಜಯ ಕರ್ನಾಟಕ ಸಂಘಟನೆಯ ಜಿಲ್ಲಾಧ್ಯಕ್ಷ ಸಂಗಮೇಶ ದಾಸ್ಯಾಳ ಹಾಗೂ ಮುಖಂಡ ಪಿಂಟು ಗಬ್ಬೂರ ನೇತೃತ್ವದಲ್ಲಿ ರೈತ ಮುಖಂಡರು ಜಿಲ್ಲಾಧಿಕಾರಿಗಳಿಗೆ ಶುಕ್ರವಾರ ಮನವಿ ಸಲ್ಲಿಸಿದರು. ಮನವಿ ಪತ್ರದಲ್ಲಿ ಸನ್ 2024 –25 ನೇ ಸಾಲಿನಲ್ಲಿ ಮಳೆ ಆಗದೆ ಉತ್ತಮ ಫಸಲು ಬಂದಿರುವುದಿಲ್ಲ ಹಾಗೂ ಬೆಳೆದ ಅಲ್ಪ ಬೆಳೆಗೆ ಯೋಗ್ಯ ಬೆಲೆ ಇಲ್ಲದೆ ರೈತರು ಸಂಕಷ್ಟದಲ್ಲಿ ಇರುವ ಸಮಯದಲ್ಲಿ ಪರಿಹಾರ ಮೂಲಕ ವಿಮೆ ಕೊಡಬೇಕಾದ ಓರಿಯಂಟಲ್ ಇನ್ಸೂರೆನ್ಸ್ ಕಂಪನಿಯವರು ರೈತರಿಗೆ ವಿಮೆ ನೀಡದೇ ಮೋಸ ಮಾಡುತ್ತಿದೆ. ಅದೇ ರೀತಿ ಸನ್ 2021–22, 2022–23, 2023–24 ಈ ಮೂರು ವರ್ಷಗಳಲ್ಲಿ ಉತ್ತಮ ಇಳುವರಿ ಬರೆದಿದ್ದರೂ ಯಾವ ಕಂಪನಿಯವರು ವಿಮೆ ನೀಡಿರುವುದಿಲ್ಲ, ಸನ್ 2024–25 ನೇ ಸಾಲಿನಲ್ಲಿ ಬಂಟನೂರ ಬೆಕಿನಾಳ ಗ್ರಾಮಗಳ ರೈತರಿಗೆ ಸ್ಥಳೀಯವಾಗಿ ಸರ್ವೆ ಕಾರ್ಯದಲ್ಲಿ ಇನ್ಸೂರೆನ್ಸ್ ಕಂಪನಿಯವರು ಭಾಗವಹಿಸದೇ ನಿಸ್ಕಾಳಜಿ ತೋರಿಸಿ ರೈತರಿಗೆ ಬೆಳೆ ವಿಮೆ ಹಂಚಿಕೆ ಮಾಡದೆ ಇಲ್ಲಸಲ್ಲದ ತಾಂತ್ರಿಕ ಕಾರಣಗಳನ್ನು ನೀಡುತ್ತಾ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ. ಈಗಾಗಲೇ ಸರಿಯಾದ ಸಮಯದಲ್ಲಿ ಬೆಳೆ ಬಾರದೆ ಹಾಳಾಗಿರುವ ರೈತರು ಸಾಲದ ಸುಳಿಯಲ್ಲಿ ಸಿಲುಕಿ ಜೀವನ ನಡೆಸುವುದು ಕಷ್ಟಕರವಾಗಿರುತ್ತದೆ ಇಂಥಹ ಸಮಯದಲ್ಲಿ ಕಂಪನಿಗಳು ವಿಮೆ ಹಣ ನೀಡದೆ ರೈತರ ಜೀವನ ಜೊತೆ ಚೆಲ್ಲಾಟ ಆಡುತ್ತಿವೆ ಎಂದು ತಿಳಿಸಿ ರೈತರಿಗೆ ಬೆಳೆ ಪರಿಹಾರ ನೀಡದ ಓರಿಯಂಟಲ್ ಇನ್ಸೂರೆನ್ಸ್ ಕಂಪನಿ ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಂಡು ಸದರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ರೈತರಿಗೆ ವಿಮೆ ಪರಿಹಾರ ನೀಡಲು ಯೋಗ್ಯ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿಕೊಂಡಿದ್ದಾರೆ. ಈ ಸಮಯದಲ್ಲಿ ಜಯ ಕರ್ನಾಟಕ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶಿವರಾಜಗೌಡ ಪಾಟೀಲ( ಗೊಟಖಂಡಕಿ), ಬಸವರಾಜ ಸಿಂಗ್ನಳ್ಳಿ( ಬಂಟನೂರ), ಎಚ್.ಡಿ.ಜಲಪೂರ(ಸಾಸನೂರ), ಡಾ. ಬಲವಂತ್ರಾಯಗೌಡ ನಡಹಳ್ಳಿ, ಬಸನಗೌಡ ಚಿಂಚೊಳ್ಳಿ(ಶಳ್ಳಗಿ), ಮಲ್ಲನಗೌಡ ಬಿರಾದಾರ, ಅರವಿಂದ ಹಾಲಣ್ಣವರ( ಪೀರಾಪೂರ), ಸೋಮನಗೌಡ ಆನೇಸೂರ ಮತ್ತಿತರರು ಇದ್ದರು.

## ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 11– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಯಾದಗಿರಿ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಾಬಾ ಸಾಹೇಬ ಅಂಬೇಡ್ಕರ್ ರವರ 134ನೇ ಜಯಂತ್ಯೋತ್ಸವವನ್ನು 2025ರ ಏಪ್ರಿಲ್ 14ರ ಸೋಮವಾರ ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಜಿಲ್ಲಾಡಳಿತ ಭವನ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.



ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಡಾ.ಬಾಬಾ ಸಾಹೇಬ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ಕಾರ್ಯಕ್ರಮ ಉದ್ಘಾಟಿಸುವರು

ರಾಜ್ಯಸಭೆ ಸದಸ್ಯರು ಹಾಗೂ ನವದೆಹಲಿ ವಿರೋಧ ಪಕ್ಷದ ನಾಯಕರಾದ ಶ್ರೀ ಡಾ.ಮಲ್ಲಿಕಾರ್ಜುನ ಎಂ.ಖರ್ಗೆ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಗೌರವ ಉಪಸ್ಥಿತಿಯಲ್ಲಿ ನೆರವೇರಿಸುವರು. ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅಧ್ಯಕ್ಷತೆ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕುಮಾರಿ ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ವಿನಾಯಕ ಮಾಲಿ ಪಾಟೀಲ್ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಸರಕಾರಿ ಪದವಿ ಮಹಾವಿದ್ಯಾಲಯ ಕನ್ನಡ ಸಹ ಪ್ರಾಧ್ಯಾಪಕರಾದ ಡಾ.ಜಯದೇವಿ ಗಾಯಕವಾಡ, ಹಾಗೂ ಜಯಂತ್ಯೋತ್ಸವ ಸಮಿತಿಯ ಅಧ್ಯಕ್ಷರು ಶ್ರೀ ನರೇಂದ್ರ ಅನವಾರ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮಕ್ಕೆ ಯಾದಗಿರಿ ಜಿಲ್ಲಾ ಸಮಸ್ತ ಜನಪ್ರತಿನಿಧಿಗಳು, ಡಾ.ಬಾಬಾ ಸಾಹೇಬ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಮತ್ತು ಸಂಘ ಸಂಸ್ಥೆಗಳು, ಸಮಸ್ತ ನಾಗರಿಕರು ಹಾಗೂ ಮಾಧ್ಯಮ ಮಿತ್ರರು ಸರ್ವರೂ ಆಗಮಿಸುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಶ್ರೀ ಎಸ್.ಎಸ್.ಚನ್ನಬಸವ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾದಿ ಪೈಗಂಬರ್ ಬಗ್ಗೆ ಯತ್ನಾಳ್ ಹೇಳಿಕೆ ಖಂಡನೀಯ, ವಕ್ಫ ತಿದ್ದುಪಡಿ ಕಾಯ್ದೆ ಅಸಂವಿಧಾನಿಕ : ರಾಜ್ ಮೈನುದ್ದೀನ್

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಇಸ್ಲಾಂ ಧರ್ಮದ ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರಚೋದನಾತ್ಮಕ ಮತ್ತು ಅವಹೇಳನಕಾರಿ ಹೇಳಿಕೆ ನೀಡಿರುವುದು ಖಂಡನೀಯ ಎಂದು ಕೆಪಿಸಿಸಿ ರಾಜ್ಯ ಸಂಯೋಜ-ಕರಾದ ರಾಜ್ ಮೈನುದ್ದೀನ್ ಜಮಾದಾರ್ ದೋರನಹಳ್ಳಿ ಖಂಡಿಸಿದ್ದಾರೆ. ಇಸ್ಲಾಂ ಧರ್ಮದ ಪ್ರವರ್ತಕರಾದ ಮಹಮದ್ ಪೈಗಂಬರ್ ಒಂದು ಧರ್ಮದ ಪ್ರವರ್ತಕರಾಗಿದ್ದಾರೆ. ಕೂಡಲೇ ಶಾಸಕರು ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ಕಾನೂನಾತ್ಮಕವಾಗಿ ಹೋರಾಟ ಮಾಡಬೇಕಾಗುತ್ತದೆ. ಒಂದು ಧರ್ಮವನ್ನು ಆಧಾರವಾಗಿಟ್ಟುಕೊಂಡು ಪದೇ ಪದೇ ಈ ರೀತಿ ಪ್ರಚೋದನಾತ್ಮಕ ಹೇಳಿಕೆ ನೀಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.



ವಕ್ಫ್ ತಿದ್ದುಪಡಿ ಅಸಂವಿಧಾನಿಕ

ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಜಾರಿಗೆ ತಂದಿದ್ದು ಒಳ್ಳೆಯದಲ್ಲ. ಈ ಕಾಯ್ದೆಯಿಂದ ದೇಶದಲ್ಲಿ ಬಿಜೆಪಿ ಸರ್ಕಾರ ಒಡೆದು ಆಳುವಂತಹ ನೀತಿ ಅನುಸರಿಸುತ್ತಿದೆ. ದೇಶ ಒಗ್ಗಟ್ಟಾಗಿರಬೇಕು. ನಾವೆಲ್ಲರೂ ಒಟ್ಟಾಗಿರುವುದನ್ನು ಕೇಂದ್ರ ಬಿಜೆಪಿ ಸರ್ಕಾರ ಒಪ್ಪುತ್ತಿಲ್ಲ. ಆದ್ದರಿಂದಲೇ ಒಡೆದು ಆಳುವ ನೀತಿಯನ್ನು ಜಾರಿಗೆ ತಂದಿದೆ. ಇದೊಂದು ಸಂವಿಧಾನ ವಿರೋಧಿ ಕಾಯ್ದೆಯಾಗಿದ್ದು, ಧಾರ್ಮಿಕ ಸ್ವಾತಂತ್ರ್ಯದ ಮೇಲೆ ದಾಳಿ ಮಾಡುವಂತಹ ಕಾಯ್ದೆಯಾಗಿದೆ. ಈಗಾಗಲೇ ಈ ವಕ್ಫ್ ತಿದ್ದುಪಡಿ ಕಾಯ್ದೆ ವಿರುದ್ಧ ಸುಪ್ರೀಂ ಕೋರ್ಟಿನಲ್ಲಿ ಅರ್ಜಿ ದಾಖಲಾಗಿದೆ. ನ್ಯಾಯಾಲಯದಲ್ಲಿ ನ್ಯಾಯ ಸಿಗುವ ವಿಶ್ವಾಸವಿದೆ ಎಂದು ರಾಜ್ ಮೈನುದ್ದೀನ್ ವಿಶ್ವಾಸ ವ್ಯಕ್ತಪಡಿಸಿದರು.

ಇಸ್ಲಾಂ ಧರ್ಮದ ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ರವರು ಪ್ರಚೋದನಾತ್ಮಕ ಮತ್ತು ಅವಹೇಳನಕಾರಿ ಹೇಳಿಕೆ ನೀಡಿರುವುದು ಖಂಡನೀಯ ಎಂದು ಕೆಪಿಸಿಸಿ ರಾಜ್ಯ ಸಂಯೋಜಕರಾದ ರಾಜ್ ಮೈನುದ್ದೀನ್ ಜಮಾದಾರ್ ದೋರನಹಳ್ಳಿ ಖಂಡಿಸಿದ್ದಾರೆ. ಇಸ್ಲಾಂ ಧರ್ಮದ ಪ್ರವರ್ತಕರಾದ ಮಹಮದ್ ಪೈಗಂಬರ್ ಒಂದು ಧರ್ಮದ ಪ್ರವರ್ತಕರಾಗಿದ್ದಾರೆ.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಹೋರಾಟ ಮಾಡಲಾಗುವುದು. ಒಂದು ಧರ್ಮವನ್ನು ಆಧಾರವಾಗಿಟ್ಟುಕೊಂಡು ಪದೇ ಪದೇ ಈ ರೀತಿ ಪ್ರಚೋದನಾತ್ಮಕ ಹೇಳಿಕೆ ನೀಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.



ತಾಳಿಕೋಟಿ: ಪಟ್ಟಣದಲ್ಲಿ ಗುರುವಾರ ಭಗವಾನ್ ಶ್ರೀ ಮಹಾವೀರ ಜಯಂತಿ ಅಂಗವಾಗಿ ಜೈನ ಸಮುದಾಯದ ಬಾಂಧವರು ಭಗವಾನ್ ಮಹಾವೀರರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಿದರು. ಜೈನ ಸಮಾಜದ ಅಧ್ಯಕ್ಷ ಪದ್ಮರಾಜ್ ಧನಪಾಲ, ಬ್ರಹ್ಮಾನಂದ ಸುರಪೂರ, ಗಂಗಣ್ಣ ಸುರಪೂರ, ಸರೋಜಿನಿ ಸುರಪೂರ, ಪ್ರಜ್ವಲ್ ಪ್ರತಾಪ್ ಶೆಟ್ಟಿ ಶಕುಂತಲಾ ಗೋಗಿ, ವಿಲಾಸ್ಮತಿ ನಾಗಾವಿ,ವನಮಾಲಾ ಪ್ರಥಮಶೆಟ್ಟಿ,ಶೀತಲ ಉಪಾಧ್ಯಯ ಹಾಗೂ ಸಮಾಜದ ಬಾಂಧವರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

## ಅಂಬೇಡ್ಕರ್ ಜಯಂತಿ ಅದ್ದೂರಿ ಆಚರಣೆಗೆ ತೀರ್ಮಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಏ.11: ಶಾಸಕ ನಾರಾ ಭರತ್ ರೆಡ್ಡಿ ನೇತೃತ್ವದಲ್ಲಿ ಹಾಗೂ ಬಳ್ಳಾರಿ ಜಿಲ್ಲಾಡಳಿತದಿಂದ ಏ.14ರಂದು ಸಂವಿಧಾನ ಶಿಲ್ಪಿ ಡಾ.ಬಿ.ಅಂಬೇಡ್ಕರ್ ಅವರ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ಯಶಸ್ವಿಯಾಗಿ ನಡೆಸಲು ತೀರ್ಮಾನಿಸಲಾಗಿದೆಂದು ಪಾಲಿಕೆಯ ಸದಸ್ಯ ವಿ.ಶ್ರೀನಿವಾಸ್ (ಮಿಂಚು) ತಿಳಿಸಿದ್ದಾರೆ. ಅವರು ನಿನ್ನೆ ಸಂಜೆ ನಗರದ ಖಾಸಗಿ ಹೊಟೇಲಿನಲ್ಲಿ 35ನೇ ವಾರ್ಡಿನ ಹಾಗೂ ನಗರದ ವಿವಿಧ ಭಾಗಗಳ ಮುಖಂಡರು ಸಭೆ ನಡೆಸಿ ಈ ವಿಷಯ ತಿಳಿಸಿದರು. ಪ್ರತಿ ವರ್ಷ ಜಿಲ್ಲಾಡಳಿತದಿಂದ ಅಂಬೇಡ್ಕರ್ ಜಯಂತಿ ನಡೆಸಲಾಗುತ್ತಿದ್ದು, ಈ ವರ್ಷ ನಗರ ಶಾಸಕ ನಾರಾ ಭರತ್ ರೆಡ್ಡಿಯವರ ನೇತೃತ್ವದಲ್ಲಿ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿದೆ, ಶಾಸಕರ ಸೂಚನೆ ಮೇರೆಗೆ ಗುರುವಾರ ಸಭೆ ನಡೆಸಿ, ಜಯಂತಿಯನ್ನು ಯಶಸ್ವಿಗೊಳಿಸಲು ಬೇಕಾದ ಸಿದ್ಧತೆಗೆ ಸಂಬಂಧಿಸಿ ಚರ್ಚಿಸಲಾಯಿತು ಎಂದಿದ್ದಾರೆ ಸಭೆಯಲ್ಲಿ ಮುಖಂಡರಾದ ಎಲ್.ಮಾರೆಣ್ಣ, ಎರಕುಲಸ್ವಾಮಿ,

# ಅಂಬೇಡ್ಕರ್‌ವಾದಿ ಮಾವಳ್ಳಿ ಶಂಕರ್‌ಗೆ ಅಂಬೇಡ್ಕರ್ ಪ್ರಶಸ್ತಿ–ನಟರಾಜ್ ಹುಳಿಯಾರ್



ಮಾವಳ್ಳಿಶಂಕರ್ ಕರ್ನಾಟಕದ ಚಳುವಳಿಗಳ ವಲಯದಲ್ಲಿ ಕಳೆದ ಮೂರು ದಶಕಗಳಿಂದ ನಮ್ಮೆಲ್ಲರಲ್ಲೂ ಪ್ರೀತಿ, ಸ್ಫೂರ್ತಿ, ನಿಷ್ಠೆ, ಪ್ರೇರಣೆಗಳನ್ನು ಉಕ್ಕಿಸುವ ಹೆಸರು. ಶಂಕರ್ ಅವರನ್ನು ನೆನೆಯುವ ಗೆಳೆಯರೆದುರು ತಕ್ಷಣ ಕಣ್ಮುಂದೆ ಬರುವ ಚಿತ್ರ ಅವರ ನಗೆಮೊಗ. ಆದ್ದರಿಂದಲೇ ನಾನು ಒಮ್ಮೆ ಅವರನ್ನು 'ನಗುಮೊಗದ ನಾಯಕ' ಎಂದು ಕರೆದಾಗ ಅದನ್ನು ಒಪ್ಪದವರು ಯಾರೂ ಸಿಗಲಿಲ್ಲ!

ಶಂಕರ್ ಹೈಸ್ಕೂಲು ಸೇರುವ ಹೊತ್ತಿಗಾಗಲೇ ಸಿದ್ಧಲಿಂಗಯ್ಯನವರ ನಾಯಕತ್ವದಲ್ಲಿ ಮಾವಳ್ಳಿಯ ಮುನಿಯೆಲ್ಲಪ್ಪನವರು ಮಾವಳ್ಳಿಯಲ್ಲಿ ನಡೆಸುತ್ತಿದ್ದ ನೈಟ್ ಸ್ಕೂಲಿನಲ್ಲಿ ಅವರಿಗೆ ಪ್ರಗತಿಪರ ಚಿಂತನೆಗಳ ಸ್ಪರ್ಶವಾಯಿತು. ಎಂಟನೆಯ ತರಗತಿಯ ತಲುಪುವಷ್ಟರಲ್ಲಿ 'ದಲಿತ್ ಆ್ಯಕ್ಷನ್ ಕಮಿಟಿ'ಯ ಸಂಪರ್ಕವಾಗತೊಡಗಿತ್ತು. ಅಷ್ಟೊತ್ತಿಗಾಗಲೇ ಮಾರ್ಕ್ಸಿಸ್ಟ್ ಚಿಂತಕ ಎಂ.ಕೆಭಟ್ ನಡೆಸುತ್ತಿದ್ದ ಕ್ಲಾಸುಗಳ ಮೂಲಕ ಮಾರ್ಕ್ಸ್‌ವಾದದ ಪರಿಚಯ ಕೂಡ ಆಗತೊಡಗಿತ್ತು. ಆಗ ಕರ್ನಾಟಕದ ಹಲವು ಚಳುವಳಿಗಾರರ ಗುರುವಾಗಿದ್ದ ಓ. ಶ್ರೀಧರನ್ ಮಾವಳ್ಳಿಯವರ ಮೂಲ ಗುರುವೂ ಆದದ್ದು ಸಹಜವಾಗಿತ್ತು. 1978ರಲ್ಲಿ ಶ್ರೀರಾಂಪುರದ ಗಾಂಧಿ ಹಾಸೆಲ್ಲಿನಲ್ಲಿ ನಡೆದ ದಲಿತ ಸಂಘರ್ಷ ಸಮಿತಿಯ ಸಭೆಯಲ್ಲಿ ಶಂಕರ್‌ಗೆ ದಲಿತ ಚಳುವಳಿಯ ಮೊದಲ ನೇರ ಸಂಪರ್ಕ ಶುರುವಾಯಿತು.

ವಿದ್ಯಾರ್ಥಿ ದೆಸೆಯಿಂದಲೇ ಮಾರ್ಕ್ಸ್‌ವಾದಿ ಚಿಂತನೆ, ದಲಿತ ಚಳುವಳಿ ಹಾಗೂ ಪ್ರಗತಿಪರ ಚಳುವಳಿಗಳ ಸಂಗದಲ್ಲಿ ರೂಪುಗೊಂಡ ಶಂಕರ್ (ಹುಟ್ಟು: 22 ಜುಲೈ 1962) ಬೆಂಗಳೂರಿನ ಮಾವಳ್ಳಿಯವರು. ಮಾವಳ್ಳಿಯಲ್ಲಿ ಹೈಸ್ಕೂಲ್ ಮುಗಿಸಿ ಪಿ.ಯು.ಸಿ.ಯಲ್ಲಿ ವಿಜ್ಞಾನದ ವಿದ್ಯಾರ್ಥಿಯಾಗಿ ಹಾಸ್ಟೆಲ್ ಸೇರಿದ ಮಾವಳ್ಳಿಯವರ ಕತೆ ಎಪ್ಪತ್ತರ ದಶಕದಲ್ಲಿ ಮೈದಳೆದ ಕರ್ನಾಟಕದ ಚಳುವಳಿಗಾರರ ಪ್ರಾತಿನಿಧಿಕ ಕತೆಯೇ ಆಗಿದೆ.

ಎಪ್ಪತ್ತರ ದಶಕದಲ್ಲಿ ಶಂಕರ್ 'ಸಮುದಾಯ' ವೇದಿಕೆಯ ಬೀದಿ ನಾಟಕ ತಂಡದ ಭಾಗವಾದರು. ಸಿ.ಜಿ.ಕೆ. ಬರೆದು ಆಡಿಸಿದ 'ಬೆಲ್ಚಿ' ನಾಟಕದಲ್ಲಿ ನಟಿಸಿದರು. ಆಮೇಲೆ 'ಪತ್ರೆ ಸಂಗಪ್ಪನ ಕಗ್ಗೊಲೆ'ಯಲ್ಲಿ ಪತ್ರೆ ಸಂಗಪ್ಪನಾದರು; 'ಶೇಷಗಿರಿಯಪ್ಪನ ಕೊಲೆ' ಬೀದಿ ನಾಟಕದಲ್ಲೂ ನಟಿಸಿದರು. ನಂತರ ಶಂಕರ್ ದಸಂಸವನ್ನು ಪ್ರವೇಶಿಸಿದ್ದೇ ಹೋರಾಟದ ಹಾಡುಗಳ ಹಾಡುಗಾರರಾಗಿ. ಬರಗೂರು ರಾಮಚಂದ್ರಪ್ಪನವರ ಬಂಡಾಯ ಚಿಂತನೆಯೂ ಅವರನ್ನು ರೂಪಿಸಿತು. ದಸಂಸ, ಬಂಡಾಯ ಚಳುವಳಿ, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸಿಸ್ಟ್)ಗಳು ಒಟ್ಟೊಟ್ಟಿಗೇ ನಡೆಯುತ್ತಿದ್ದ ಕರ್ನಾಟಕದ ಪ್ರಗತಿಪರ ಚಿಂತನೆಗಳ ಆದರ್ಶ ಐಕ್ಯತೆಯ ಕಾಲ ಅದು. ನಟ, ಹಾಡುಗಾರ, ಹೋರಾಟಗಾರ– ಈ ಮೂರೂ ಅಂಶಗಳು ಬೆರೆತು ನಾಯಕ ಮಾವಳ್ಳಿ ಶಂಕರ್ ರೂಪುಗೊಂಡಿದ್ದು ಕರ್ನಾಟಕದ ಇಂಥ ವೈಚಾರಿಕ ಐಕ್ಯತೆಯ ಕಾಲದಲ್ಲಿ.

ಹೀಗೆ ಚಳುವಳಿಗಳ ಜೊತೆ ಸೇರಿ ಬೌದ್ಧಿಕವಾಗಿಯೂ ಬೆಳೆಯತೊಡಗಿದ ಶಂಕರ್, ನಿರಂಜನರ 'ಚಿರಸ್ಮರಣೆ', 'ಮೃತ್ಯುಂಜಯ'; ಗೋದಾವರಿ ಪರುಳೇಕರ್ ಬರೆದ 'ಮಾನವ ಎಚ್ಚೆತ್ತಾಗ', ರಾಹುಲ್ ಸಾಂಕೃತ್ಯಾಯನರ 'ವೋಲ್ಗಾ ಗಂಗಾ' ಹಾಗೂ ದೇವಿಪ್ರಸಾದ್ ಚಟ್ಟೋಪಾಧ್ಯಾಯರ ವೈಚಾರಿಕ ಕೃತಿಗಳನ್ನು ಮತ್ತೆ ಮತ್ತೆ ಓದತೊಡಗಿದರು. ಲೋಹಿಯಾರ ಜಾತಿಪದ್ಧತಿಯ ವಿಶ್ಲೇಷಣೆ, 'ಪಂಚಮ' ಪತ್ರಿಕೆಯಲ್ಲಿ ಕೋಟಗಾನಹಳ್ಳಿ ರಾಮಯ್ಯ ಹಾಗೂ ದೇವನೂರ ಮಹಾದೇವರ 'ದೇಮ ಬರೆದ ಬರಹ'ಗಳು, ಸಿದ್ಧಲಿಂಗಯ್ಯನವರ ಸಿಟ್ಟಿನ ಕವಿತೆಗಳು ಹಾಗೂ ನಿತ್ಯ ಒಡನಾಟ ಅವರನ್ನು ದಲಿತ ಕೇಂದ್ರಿತ ಚಿಂತನೆಗಳ ದಿಕ್ಕಿಗೆ ಖಚಿತವಾಗಿ ಹೊರಳಿಸಿದವು. ನಿಧಾನವಾಗಿ ಪೆರಿಯಾರ್, ಅಂಬೇಡ್ಕರ್ ಚಿಂತನೆಗಳು ಮಾವಳ್ಳಿಯವರ ಪ್ರಜ್ಞೆಯನ್ನು ರೂಪಿಸತೊಡಗಿದವು. ಅಂಬೇಡ್ಕರ್ ಚಿಂತನೆಗಳನ್ನು ಓದುತ್ತಾ ಓದುತ್ತಾ ಅವರ ವೈಚಾರಿಕ ನೋಟಗಳು ಇನ್ನಷ್ಟು ಸ್ಪಷ್ಟವಾದವು; ಗಟ್ಟಿಯಾದವು. ಪ್ರೊ. ಬಿ. ಕೃಷ್ಣಪ್ಪನವರ ನಾಯಕತ್ವ ಹಾಗೂ ಚಿಂತನೆಗಳು ಶಂಕರ್ ವ್ಯಕ್ತಿತ್ವದ ಬೆಳವಣಿಗೆಗೆ ಕಾರಣವಾದಂತೆಯೇ ರಂಜಾನ್ ದರ್ಗಾರ ಒಡನಾಟ, ಸಂಗ ಕೂಡ ಅವರ ಪ್ರಜ್ಞೆಯನ್ನು ತಿದ್ದಿತು.

ಮುಂದೆ ಬಿ.ಎಸ್ಸಿ. ಮುಗಿಸಿ ಎಲ್.ಎಲ್.ಬಿ. ಓದಲು ಶುರುಮಾಡಿದ ಮಾವಳ್ಳಿ ಶಂಕರ್, ಲಾ ಪದವಿಯನ್ನು ಅರ್ಧಕ್ಕೇ ಬಿಟ್ಟು ಪೂರ್ಣ ಪ್ರಮಾಣದಲ್ಲಿ ದಲಿತ ಚಳುವಳಿಗೆ ಧುಮುಕಿದರು. ದಲಿತ ಚಳುವಳಿಯ ರೂವಾರಿ ಪ್ರೊ. ಬಿ. ಕೃಷ್ಣಪ್ಪನವರ ಗರಡಿಯಲ್ಲಿ ತಯಾರಾದ ಅವರು ದಲಿತ ವಿದ್ಯಾರ್ಥಿ ಒಕ್ಕೂಟದ ಮುಂಚೂಣಿಯಲ್ಲಿದ್ದರು. 2002ರವರೆಗೂ ದಲಿತ ಸಂಘರ್ಷ ಸಮಿತಿಯ ಭಾಗವಾಗಿದ್ದ ಶಂಕರ್, ನಂತರ 2002ರಲ್ಲಿ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಸಂಘಟಿಸಿ, ರಾಜ್ಯದ ವಿಶಿಷ್ಟ ಸಾಮಾಜಿಕ ನಾಯಕರಾಗಿ ಬೆಳೆದರು. ದಲಿತ ಚಳುವಳಿಯಲ್ಲಿ ತಾತ್ವಿಕ ಗೊಂದಲಗಳು ಮೂಡಿದಾಗಲೆಲ್ಲ ಅಂಬೇಡ್ಕರ್ ಚಿಂತನೆ, ಬುದ್ಧ ಮಾರ್ಗ ಹಾಗೂ ವೈಚಾರಿಕ ನೋಟಗಳ ಮೂಲಕ ಖಚಿತ ಗುರಿ, ದಾರಿಗಳನ್ನು ಕಂಡುಕೊಂಡರು. ನಗುಮೊಗದ ನಾಯಕ ಶಂಕರ್ ದಲಿತರ ಹಿತಾಸಕ್ತಿಯ ಪ್ರಶ್ನೆಗಳು ಬಂದಾಗ ದಿಟ್ಟ ಪ್ರತಿಭಟನೆ ಹಾಗೂ ಖಚಿತ ವಿಶ್ಲೇಷಣೆಗಳ ಮೂಲಕ ಚಳುವಳಿಯನ್ನು ಮುನ್ನಡೆಸಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಭಾಷೆಯನ್ನು ಕಲಿಸುವ ಚಳುವಳಿಯಲ್ಲಿ ಅವರೊಡನೆ ಕೆಲಸ ಮಾಡಿದ ನನಗೆ ಅವರ ಅನನ್ಯ ಬದ್ಧತೆ ತೀರಾ ಹತ್ತಿರದಿಂದ ಪರಿಚಯವಾಯಿತು. ಆಗ ಕೆಲವು ಭಾಷಾ 'ಕಟ್ಟಾಳು'ಗಳು ನನ್ನ ಬೆನ್ನು ಹತ್ತಿ ತಿವಿಯುತ್ತಿದ್ದ ಗಳಿಗೆಗಳಲ್ಲಿ ಮಾವಳ್ಳಿ ಶಂಕರ್, ಲಕ್ಷ್ಮೀನಾರಾಯಣ ನಾಗವಾರ ನನ್ನ ಜೊತೆಗಿದ್ದಾರೆ ಎನ್ನುವುದು ನನಗೆ ಧೈರ್ಯ ಕೊಡುತ್ತಿತ್ತು. ಇವತ್ತಿಗೂ ಜನತಾ ಚಳುವಳಿಗಳ ಬೆಳಕು ನನ್ನಂಥವರಿಗೆ ಹಾದಿ ತೋರುತ್ತಿರುವುದರಲ್ಲಿ ಮಾವಳ್ಳಿಯವರ ಬೆಚ್ಚಗಿನ ಗೆಳೆತನ, ದಸಂಸ ಹಾಗೂ ದಲಿತ ಚಳುವಳಿಯ ಪಾಲೂ ಮುಖ್ಯವಾಗಿದೆ.

ಪ್ರೊ. ಬಿ. ಕೃಷ್ಣಪ್ಪನವರು ತಮ್ಮ ನಂತರದ ತಲೆಮಾರಿನಲ್ಲಿ ದಲಿತ ಚಳುವಳಿಯನ್ನು ಕೊಂಡೊಯ್ಯಬಲ್ಲ ಹೊಸ ತಲೆಮಾರಿನ ಸಮರ್ಥ ನಾಯಕರೆಂದು ಗುರುತಿಸಿದವರಲ್ಲಿ ಮಾವಳ್ಳಿ ಶಂಕರ್ ಕೂಡ ಮುಖ್ಯರು. ಪ್ರೊ. ಬಿ.ಕೆ.ಯವರ ನಂಬಿಕೆಗೆ ಇಂಬು ಕೊಟ್ಟಂತೆ ಸದಾ ದಲಿತ ಚಳುವಳಿಗೆ ಬೆಸೆದುಕೊಂಡಿರುವ ಶಂಕರ್, ಬಾಬಾಸಾಹೇಬ್ ಅಂಬೇಡ್ಕರ್ ಚಿಂತನೆಗಳನ್ನು ಕರ್ನಾಟಕದುದ್ದಕ್ಕೂ ಬಿತ್ತಿ, ಬೆಳೆದು ಹಬ್ಬಿಸಿದವರು. ದಲಿತರ ಭೂಮಿಯ ಪ್ರಶ್ನೆಗಳು, ವಸತಿ ಶಾಲೆ, ಶಿಕ್ಷಣ, ಹಾಸ್ಟೆಲ್, ವಿದ್ಯಾರ್ಥಿಗಳ ಮೂಲ ಸೌಲಭ್ಯಗಳ ಹೋರಾಟಗಳನ್ನು ಮುನ್ನಡೆಸಿದವರು. ದಲಿತರ ವಿರುದ್ಧ ನಡೆದ ದೌರ್ಜನ್ಯಗಳ ವಿರುದ್ಧ ಸಂಘಟನಾತ್ಮಕ ಹೋರಾಟಗಳನ್ನು ಕಟ್ಟಿದವರು. ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಕಲಿಕೆಗಾಗಿ ರಾಜ್ಯಾದ್ಯಂತ ರೂಪುಗೊಂಡ ಜನಪರ ಚಳುವಳಿಯ ಮುಂಚೂಣಿಯಲ್ಲಿದ್ದ ಶಂಕರ್, ಕೋಮುವಾದದ ವಿರುದ್ಧ ಗಟ್ಟಿ ದನಿಯೆತ್ತಿ ಜಾತ್ಯತೀತ ಕರ್ನಾಟಕವನ್ನು ರೂಪಿಸಲು ಕೆಲಸ ಮಾಡುತ್ತಲೇ ಇರುವವರು. ಬೌದ್ಧ ಚಿಂತನೆಗಳನ್ನು ನಿರಂತರವಾಗಿ ಬಿತ್ತುತ್ತಾ ದಲಿತ ಚಳುವಳಿಗೆ ಸ್ಪಷ್ಟ ವೈಚಾರಿಕ ನಿಲುವುಗಳನ್ನು ರೂಪಿಸಿದವರು.

ಶಂಕರ್ ಇಪ್ಪತ್ತು ವರ್ಷಗಳ ಕೆಳಗೆ ರಾಜ್ಯ ಬಜೆಟ್ಟಿನಲ್ಲಿ ದಲಿತರ ಹಕ್ಕಿನ ಪಾಲನ್ನು ಕುರಿತು ಆರಂಭಿಸಿದ ಆರ್ಥಿಕ ಚರ್ಚೆ; ಅನಂತರ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. (ಶೆಡ್ಯೂಲ್ ಕ್ಯಾಸ್ಟ್ ಸಬ್ ಪ್ಲ್ಯಾನ್/ಟ್ರೈಬಲ್ ಸಬ್ ಪ್ಲ್ಯಾನ್: ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ರಾಜ್ಯದ ಸಂಪನ್ಮೂಲ ಹಂಚಿಕೆ) ಕಾಯ್ದೆಯ ಜಾರಿಗಾಗಿ ಅವರು ಇತರ ದಲಿತ ಸಂಘಟನೆಗಳ ಜೊತೆಜೊತೆಗೇ ನಡೆಸಿದ ಸಂಘಟನಾತ್ಮಕ ಹೋರಾಟಗಳು ದಲಿತ ಚಳುವಳಿಯ ಮೈಲಿಗಲ್ಲುಗಳಾಗಿವೆ. ದಶಕಗಳ ಕೆಳಗೆ 'ಸಂವಿಧಾನ ಸಂಕಲ್ಪ ದಿನ'ವನ್ನು ಸಂಘಟನೆಯ ಕಾರ್ಯಕ್ರಮಗಳ ಭಾಗವಾಗಿಸಿದ್ದ ಶಂಕರ್, ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಸಂಘಟನೆಯ ರಾಜ್ಯ ಸಂಚಾಲಕರಾಗಿ ಚಳುವಳಿಯನ್ನು ಗಟ್ಟಿಯಾಗಿಸುತ್ತಾ ಬಂದಿದ್ದಾರೆ. 'ಅಂಬೇಡ್ಕರ್‌ವಾದ' ಪತ್ರಿಕೆಯನ್ನೂ ರೂಪಿಸುತ್ತಿದ್ದಾರೆ. ಇವತ್ತಿಗೂ ವೈಚಾರಿಕ ಬರಹಗಳು, ಪುಸ್ತಕಗಳನ್ನು ಓದುತ್ತಾ ಹೊಸ ಪುಸ್ತಕಗಳ ಬಗ್ಗೆ ಅತ್ಯಂತ ಅಪ್‌ಡೇಟ್ ಆಗಿರುವ ಚಳುವಳಿಗಾರ ನಾಯಕ ಮಾವಳ್ಳಿ ಶಂಕರ್ ಈ ಬರಹಗಳಿಂದ ಪಡೆದ ಜ್ಞಾನವನ್ನು ನಿತ್ಯ ಗೆಳೆಯರಲ್ಲಿ ಕಾರ್ಯಕರ್ತರಲ್ಲಿ ಹಂಚಿಕೊಳ್ಳುತ್ತಲೇ ಇರುತ್ತಾರೆ.

ಈ ನಡುವೆ ಚಳುವಳಿಯ ಕಹಿಗಳಿಗೂ, ಆತಂಕಗಳಿಗೂ ಶಂಕರ್ ಮೈಯೊಡ್ಡಿದ್ದಾರೆ. ಎಲ್ಲೆಡೆಯಿಂದ ಸಮಸ್ಯೆಗಳನ್ನು ನಿತ್ಯ ಹೊತ್ತು ಬರುವ ದಲಿತ ಜನಸ್ತೋಮ, ವ್ಯಕ್ತಿಗಳು ಎಲ್ಲರ ಜೊತೆಗೂ ಶಂಕರ್ ಹೆಜ್ಜೆ ಹಾಕಿದ್ದಾರೆ. ಮೆಟ್ರೋ ರೈಲು ಶುರುವಾದ ಸಂದರ್ಭದಲ್ಲಿ ವಿಧಾನಸೌಧದ ಎದುರು ನಿಂತಿರುವ ಅಂಬೇಡ್ಕರ್ ಪ್ರತಿಮೆಯ ಸ್ಥಳಾಂತರದ ಹುನ್ನಾರ ನಡೆದಾಗ ಶಂಕರ್ ಪ್ರತಿಮೆಯ ಸ್ಥಳಾಂತರದ ಬಗ್ಗೆ ಅರ್ಧ ರಾತ್ರಿಯ ಕರೆಗಳು ಬಂದಾಗ ರಾತ್ರೋರಾತ್ರಿ ಅಲ್ಲಿಗೆ ಧಾವಿಸಿದ್ದಾರೆ. ಸಂಘಟನೆಯ ಕಾರ್ಯಕರ್ತರ ಸಾವು, ನೋವುಗಳಲ್ಲಿ ನಿತ್ಯ ಭಾಗಿಯಾಗುತ್ತಲೇ ಇದ್ದಾರೆ. ಸಾರ್ವಜನಿಕ ವೇದಿಕೆಗಳಲ್ಲಿ ಸ್ಪಷ್ಟವಾಗಿ ಎಲ್ಲರನ್ನೂ ಸರಳವಾಗಿ ತಲುಪುವಂತೆ ಶಂಕರ್ ಬಳಸುವ ವೈಚಾರಿಕ ನುಡಿಗಟ್ಟು ಹಾಗೂ ಗಂಭೀರ ಕನ್ನಡ ಭಾಷೆಯ ಬಳಕೆ ಕೂಡ ಅತ್ಯಂತ ಪರಿಣಾಮಕಾರಿಯಾದವು. ಸ್ಪಷ್ಟ ಆಲೋಚನೆಯ ಶಂಕರ್ ದಿಟ್ಟ ಹಾಗೂ ನಿಷ್ಠುರ ಭಾಷಣಗಳು, ಧರಣಿ, ಪ್ರತಿಭಟನೆಗಳ ಮೂಲಕ ವ್ಯವಸ್ಥೆಯನ್ನು ನೇರವಾಗಿ ಎದುರಿಸುತ್ತಾ ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯಿಸುತ್ತಾ ಜನರಿಗೆ ನೆರವಾಗುತ್ತಾ ಬಂದಿದ್ದಾರೆ. ಗೆಳೆಯರು, ಚಳುವಳಿಯ ಕಾರ್ಯಕರ್ತರು, ವಿವಿಧ ಚಳುವಳಿಗಳ ನಾಯಕರು, ನೊಂದವರು, ಪ್ರಗತಿಪರರ ಜೊತೆ ಸಹಜ ಪ್ರೀತಿಯಿಂದ ಬೆರೆಯುವ, ಒಡನಾಡುವ, ಸ್ಪಷ್ಟ ವೈಚಾರಿಕ ಅಂಬೇಡ್ಕರ್‌ವಾದಿ ಮಾವಳ್ಳಿ ಶಂಕರ್‌ಗೆ ಅಂಬೇಡ್ಕರ್ ಪ್ರಶಸ್ತಿ–ನಟರಾಜ್ ಹುಳಿಯಾರ್

ಮಾವಳ್ಳಿಶಂಕರ್ ಕರ್ನಾಟಕದ ಚಳುವಳಿಗಳ ವಲಯದಲ್ಲಿ ಕಳೆದ ಮೂರು ದಶಕಗಳಿಂದ ನಮ್ಮೆಲ್ಲರಲ್ಲೂ ಪ್ರೀತಿ, ಸ್ಫೂರ್ತಿ, ನಿಷ್ಠೆ, ಪ್ರೇರಣೆಗಳನ್ನು ಉಕ್ಕಿಸುವ ಹೆಸರು. ಶಂಕರ್ ಅವರನ್ನು ನೆನೆಯುವ ಗೆಳೆಯರೆದುರು ತಕ್ಷಣ ಕಣ್ಮುಂದೆ ಬರುವ ಚಿತ್ರ ಅವರ ನಗೆಮೊಗ. ಆದ್ದರಿಂದಲೇ ನಾನು ಒಮ್ಮೆ ಅವರನ್ನು 'ನಗುಮೊಗದ ನಾಯಕ' ಎಂದು ಕರೆದಾಗ ಅದನ್ನು ಒಪ್ಪದವರು ಯಾರೂ ಸಿಗಲಿಲ್ಲ!

ಶಂಕರ್ ಹೈಸ್ಕೂಲು ಸೇರುವ ಹೊತ್ತಿಗಾಗಲೇ ಸಿದ್ಧಲಿಂಗಯ್ಯನವರ ನಾಯಕತ್ವದಲ್ಲಿ ಮಾವಳ್ಳಿಯ ಮುನಿಯೆಲ್ಲಪ್ಪನವರು ಮಾವಳ್ಳಿಯಲ್ಲಿ ನಡೆಸುತ್ತಿದ್ದ ನೈಟ್ ಸ್ಕೂಲಿನಲ್ಲಿ ಅವರಿಗೆ ಪ್ರಗತಿಪರ ಚಿಂತನೆಗಳ ಸ್ಪರ್ಶವಾಯಿತು. ಎಂಟನೆಯ ತರಗತಿಯ ತಲುಪುವಷ್ಟರಲ್ಲಿ 'ದಲಿತ್ ಆ್ಯಕ್ಷನ್ ಕಮಿಟಿ'ಯ ಸಂಪರ್ಕವಾಗತೊಡಗಿತ್ತು. ಅಷ್ಟೊತ್ತಿಗಾಗಲೇ ಮಾರ್ಕ್ಸಿಸ್ಟ್ ಚಿಂತಕ ಎಂ.ಕೆಭಟ್ ನಡೆಸುತ್ತಿದ್ದ ಕ್ಲಾಸುಗಳ ಮೂಲಕ ಮಾರ್ಕ್ಸ್‌ವಾದದ ಪರಿಚಯ ಕೂಡ ಆಗತೊಡಗಿತ್ತು. ಆಗ ಕರ್ನಾಟಕದ ಹಲವು ಚಳುವಳಿಗಾರರ ಗುರುವಾಗಿದ್ದ ಓ. ಶ್ರೀಧರನ್ ಮಾವಳ್ಳಿಯವರ ಮೂಲ ಗುರುವೂ ಆದದ್ದು ಸಹಜವಾಗಿತ್ತು. 1978ರಲ್ಲಿ ಶ್ರೀರಾಂಪುರದ ಗಾಂಧಿ ಹಾಸೆಲ್ಲಿನಲ್ಲಿ ನಡೆದ ದಲಿತ ಸಂಘರ್ಷ ಸಮಿತಿಯ ಸಭೆಯಲ್ಲಿ ಶಂಕರ್‌ಗೆ ದಲಿತ ಚಳುವಳಿಯ ಮೊದಲ ನೇರ ಸಂಪರ್ಕ ಶುರುವಾಯಿತು.

ವಿದ್ಯಾರ್ಥಿ ದೆಸೆಯಿಂದಲೇ ಮಾರ್ಕ್ಸ್‌ವಾದಿ ಚಿಂತನೆ, ದಲಿತ ಚಳುವಳಿ ಹಾಗೂ ಪ್ರಗತಿಪರ ಚಳುವಳಿಗಳ ಸಂಗದಲ್ಲಿ ರೂಪುಗೊಂಡ ಶಂಕರ್ (ಹುಟ್ಟು: 22 ಜುಲೈ 1962) ಬೆಂಗಳೂರಿನ ಮಾವಳ್ಳಿಯವರು. ಮಾವಳ್ಳಿಯಲ್ಲಿ ಹೈಸ್ಕೂಲ್ ಮುಗಿಸಿ ಪಿ.ಯು.ಸಿ.ಯಲ್ಲಿ ವಿಜ್ಞಾನದ ವಿದ್ಯಾರ್ಥಿಯಾಗಿ ಹಾಸ್ಟೆಲ್ ಸೇರಿದ ಮಾವಳ್ಳಿಯವರ ಕತೆ ಎಪ್ಪತ್ತರ ದಶಕದಲ್ಲಿ ಮೈದಳೆದ ಕರ್ನಾಟಕದ ಚಳುವಳಿಗಾರರ ಪ್ರಾತಿನಿಧಿಕ ಕತೆಯೇ ಆಗಿದೆ.

ಎಪ್ಪತ್ತರ ದಶಕದಲ್ಲಿ ಶಂಕರ್ 'ಸಮುದಾಯ' ವೇದಿಕೆಯ ಬೀದಿ ನಾಟಕ ತಂಡದ ಭಾಗವಾದರು. ಸಿ.ಜಿ.ಕೆ. ಬರೆದು ಆಡಿಸಿದ 'ಬೆಲ್ಚಿ' ನಾಟಕದಲ್ಲಿ ನಟಿಸಿದರು. ಆಮೇಲೆ 'ಪತ್ರೆ ಸಂಗಪ್ಪನ ಕಗ್ಗೊಲೆ'ಯಲ್ಲಿ ಪತ್ರೆ ಸಂಗಪ್ಪನಾದರು; 'ಶೇಷಗಿರಿಯಪ್ಪನ ಕೊಲೆ' ಬೀದಿ ನಾಟಕದಲ್ಲೂ ನಟಿಸಿದರು. ನಂತರ ಶಂಕರ್ ದಸಂಸವನ್ನು ಪ್ರವೇಶಿಸಿದ್ದೇ ಹೋರಾಟದ ಹಾಡುಗಳ ಹಾಡುಗಾರರಾಗಿ. ಬರಗೂರು ರಾಮಚಂದ್ರಪ್ಪನವರ ಬಂಡಾಯ ಚಿಂತನೆಯೂ ಅವರನ್ನು ರೂಪಿಸಿತು. ದಸಂಸ, ಬಂಡಾಯ ಚಳುವಳಿ, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸಿಸ್ಟ್)ಗಳು ಒಟ್ಟೊಟ್ಟಿಗೇ ನಡೆಯುತ್ತಿದ್ದ ಕರ್ನಾಟಕದ ಪ್ರಗತಿಪರ ಚಿಂತನೆಗಳ ಆದರ್ಶ ಐಕ್ಯತೆಯ ಕಾಲ ಅದು. ನಟ, ಹಾಡುಗಾರ, ಹೋರಾಟಗಾರ– ಈ ಮೂರೂ ಅಂಶಗಳು ಬೆರೆತು ನಾಯಕ ಮಾವಳ್ಳಿ ಶಂಕರ್ ರೂಪುಗೊಂಡಿದ್ದು ಕರ್ನಾಟಕದ ಇಂಥ ವೈಚಾರಿಕ ಐಕ್ಯತೆಯ ಕಾಲದಲ್ಲಿ.

ಹೀಗೆ ಚಳುವಳಿಗಳ ಜೊತೆ ಸೇರಿ ಬೌದ್ಧಿಕವಾಗಿಯೂ ಬೆಳೆಯತೊಡಗಿದ ಶಂಕರ್, ನಿರಂಜನರ 'ಚಿರಸ್ಮರಣೆ', 'ಮೃತ್ಯುಂಜಯ'; ಗೋದಾವರಿ ಪರುಳೇಕರ್ ಬರೆದ 'ಮಾನವ ಎಚ್ಚೆತ್ತಾಗ', ರಾಹುಲ್ ಸಾಂಕೃತ್ಯಾಯನರ 'ವೋಲ್ಗಾ ಗಂಗಾ' ಹಾಗೂ ದೇವಿಪ್ರಸಾದ್ ಚಟ್ಟೋಪಾಧ್ಯಾಯರ ವೈಚಾರಿಕ ಕೃತಿಗಳನ್ನು ಮತ್ತೆ ಮತ್ತೆ ಓದತೊಡಗಿದರು. ಲೋಹಿಯಾರ ಜಾತಿಪದ್ಧತಿಯ ವಿಶ್ಲೇಷಣೆ, 'ಪಂಚಮ' ಪತ್ರಿಕೆಯಲ್ಲಿ ಕೋಟಗಾನಹಳ್ಳಿ ರಾಮಯ್ಯ ಹಾಗೂ ದೇವನೂರ ಮಹಾದೇವರ 'ದೇಮ ಬರೆದ ಬರಹ'ಗಳು, ಸಿದ್ಧಲಿಂಗಯ್ಯನವರ ಸಿಟ್ಟಿನ ಕವಿತೆಗಳು ಹಾಗೂ ನಿತ್ಯ ಒಡನಾಟ ಅವರನ್ನು ದಲಿತ ಕೇಂದ್ರಿತ ಚಿಂತನೆಗಳ ದಿಕ್ಕಿಗೆ ಖಚಿತವಾಗಿ ಹೊರಳಿಸಿದವು. ನಿಧಾನವಾಗಿ ಪೆರಿಯಾರ್, ಅಂಬೇಡ್ಕರ್ ಚಿಂತನೆಗಳು ಮಾವಳ್ಳಿಯವರ ಪ್ರಜ್ಞೆಯನ್ನು ರೂಪಿಸತೊಡಗಿದವು. ಅಂಬೇಡ್ಕರ್ ಚಿಂತನೆಗಳನ್ನು ಓದುತ್ತಾ ಓದುತ್ತಾ ಅವರ ವೈಚಾರಿಕ ನೋಟಗಳು ಇನ್ನಷ್ಟು ಸ್ಪಷ್ಟವಾದವು; ಗಟ್ಟಿಯಾದವು. ಪ್ರೊ. ಬಿ. ಕೃಷ್ಣಪ್ಪನವರ ನಾಯಕತ್ವ ಹಾಗೂ ಚಿಂತನೆಗಳು ಶಂಕರ್ ವ್ಯಕ್ತಿತ್ವದ ಬೆಳವಣಿಗೆಗೆ ಕಾರಣವಾದಂತೆಯೇ ರಂಜಾನ್ ದರ್ಗಾರ ಒಡನಾಟ, ಸಂಗ ಕೂಡ ಅವರ ಪ್ರಜ್ಞೆಯನ್ನು ತಿದ್ದಿತು.

ಮುಂದೆ ಬಿ.ಎಸ್ಸಿ. ಮುಗಿಸಿ ಎಲ್.ಎಲ್.ಬಿ. ಓದಲು ಶುರುಮಾಡಿದ ಮಾವಳ್ಳಿ ಶಂಕರ್, ಲಾ ಪದವಿಯನ್ನು ಅರ್ಧಕ್ಕೇ ಬಿಟ್ಟು ಪೂರ್ಣ ಪ್ರಮಾಣದಲ್ಲಿ ದಲಿತ ಚಳುವಳಿಗೆ ಧುಮುಕಿದರು. ದಲಿತ ಚಳುವಳಿಯ ರೂವಾರಿ ಪ್ರೊ. ಬಿ. ಕೃಷ್ಣಪ್ಪನವರ ಗರಡಿಯಲ್ಲಿ ತಯಾರಾದ ಅವರು ದಲಿತ ವಿದ್ಯಾರ್ಥಿ ಒಕ್ಕೂಟದ ಮುಂಚೂಣಿಯಲ್ಲಿದ್ದರು. 2002ರವರೆಗೂ ದಲಿತ ಸಂಘರ್ಷ ಸಮಿತಿಯ ಭಾಗವಾಗಿದ್ದ ಶಂಕರ್, ನಂತರ 2002ರಲ್ಲಿ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಸಂಘಟಿಸಿ, ರಾಜ್ಯದ ವಿಶಿಷ್ಟ ಸಾಮಾಜಿಕ ನಾಯಕರಾಗಿ ಬೆಳೆದರು. ದಲಿತ ಚಳುವಳಿಯಲ್ಲಿ ತಾತ್ವಿಕ ಗೊಂದಲಗಳು ಮೂಡಿದಾಗಲೆಲ್ಲ ಅಂಬೇಡ್ಕರ್ ಚಿಂತನೆ, ಬುದ್ಧ ಮಾರ್ಗ ಹಾಗೂ ವೈಚಾರಿಕ ನೋಟಗಳ ಮೂಲಕ ಖಚಿತ ಗುರಿ, ದಾರಿಗಳನ್ನು ಕಂಡುಕೊಂಡರು.

ನಗುಮೊಗದ ನಾಯಕ ಶಂಕರ್ ದಲಿತರ ಹಿತಾಸಕ್ತಿಯ ಪ್ರಶ್ನೆಗಳು ಬಂದಾಗ ದಿಟ್ಟ ಪ್ರತಿಭಟನೆ ಹಾಗೂ ಖಚಿತ ವಿಶ್ಲೇಷಣೆಗಳ ಮೂಲಕ ಚಳುವಳಿಯನ್ನು ಮುನ್ನಡೆಸಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಭಾಷೆಯನ್ನು ಕಲಿಸುವ ಚಳುವಳಿಯಲ್ಲಿ ಅವರೊಡನೆ ಕೆಲಸ ಮಾಡಿದ ನನಗೆ ಅವರ ಅನನ್ಯ ಬದ್ಧತೆ ತೀರಾ ಹತ್ತಿರದಿಂದ ಪರಿಚಯವಾಯಿತು. ಆಗ ಕೆಲವು ಭಾಷಾ 'ಕಟ್ಟಾಳು'ಗಳು ನನ್ನ ಬೆನ್ನು ಹತ್ತಿ ತಿವಿಯುತ್ತಿದ್ದ ಗಳಿಗೆಗಳಲ್ಲಿ ಮಾವಳ್ಳಿ ಶಂಕರ್, ಲಕ್ಷ್ಮೀನಾರಾಯಣ ನಾಗವಾರ ನನ್ನ ಜೊತೆಗಿದ್ದಾರೆ ಎನ್ನುವುದು ನನಗೆ ಧೈರ್ಯ ಕೊಡುತ್ತಿತ್ತು. ಇವತ್ತಿಗೂ ಜನತಾ ಚಳುವಳಿಗಳ ಬೆಳಕು ನನ್ನಂಥವರಿಗೆ ಹಾದಿ ತೋರುತ್ತಿರುವುದರಲ್ಲಿ ಮಾವಳ್ಳಿಯವರ ಬೆಚ್ಚಗಿನ ಗೆಳೆತನ, ದಸಂಸ ಹಾಗೂ ದಲಿತ ಚಳುವಳಿಯ ಪಾಲೂ ಮುಖ್ಯವಾಗಿದೆ. ಪ್ರೊ. ಬಿ. ಕೃಷ್ಣಪ್ಪನವರು ತಮ್ಮ ನಂತರದ ತಲೆಮಾರಿನಲ್ಲಿ ದಲಿತ ಚಳುವಳಿಯನ್ನು ಕೊಂಡೊಯ್ಯಬಲ್ಲ ಹೊಸ ತಲೆಮಾರಿನ ಸಮರ್ಥ ನಾಯಕರೆಂದು ಗುರುತಿಸಿದವರಲ್ಲಿ ಮಾವಳ್ಳಿ ಶಂಕರ್ ಕೂಡ ಮುಖ್ಯರು. ಪ್ರೊ. ಬಿ.ಕೆ.ಯವರ ನಂಬಿಕೆಗೆ ಇಂಬು ಕೊಟ್ಟಂತೆ ಸದಾ ದಲಿತ ಚಳುವಳಿಗೆ ಬೆಸೆದುಕೊಂಡಿರುವ ಶಂಕರ್, ಬಾಬಾಸಾಹೇಬ್ ಅಂಬೇಡ್ಕರ್ ಚಿಂತನೆಗಳನ್ನು ಕರ್ನಾಟಕದುದ್ದಕ್ಕೂ ಬಿತ್ತಿ, ಬೆಳೆದು ಹಬ್ಬಿಸಿದವರು. ದಲಿತರ ಭೂಮಿಯ ಪ್ರಶ್ನೆಗಳು, ವಸತಿ ಶಾಲೆ, ಶಿಕ್ಷಣ, ಹಾಸ್ಟೆಲ್, ವಿದ್ಯಾರ್ಥಿಗಳ ಮೂಲ ಸೌಲಭ್ಯಗಳ ಹೋರಾಟಗಳನ್ನು ಮುನ್ನಡೆಸಿದವರು. ದಲಿತರ ವಿರುದ್ಧ ನಡೆದ ದೌರ್ಜನ್ಯಗಳ ವಿರುದ್ಧ ಸಂಘಟನಾತ್ಮಕ ಹೋರಾಟಗಳನ್ನು ಕಟ್ಟಿದವರು. ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಕಲಿಕೆಗಾಗಿ ರಾಜ್ಯಾದ್ಯಂತ ರೂಪುಗೊಂಡ ಜನಪರ ಚಳುವಳಿಯ ಮುಂಚೂಣಿಯಲ್ಲಿದ್ದ ಶಂಕರ್, ಕೋಮುವಾದದ ವಿರುದ್ಧ ಗಟ್ಟಿ ದನಿಯೆತ್ತಿ ಜಾತ್ಯತೀತ ಕರ್ನಾಟಕವನ್ನು ರೂಪಿಸಲು ಕೆಲಸ ಮಾಡುತ್ತಲೇ ಇರುವವರು. ಬೌದ್ಧ ಚಿಂತನೆಗಳನ್ನು ನಿರಂತರವಾಗಿ ಬಿತ್ತುತ್ತಾ ದಲಿತ ಚಳುವಳಿಗೆ ಸ್ಪಷ್ಟ ವೈಚಾರಿಕ ನಿಲುವುಗಳನ್ನು ರೂಪಿಸಿದವರು.

ಶಂಕರ್ ಇಪ್ಪತ್ತು ವರ್ಷಗಳ ಕೆಳಗೆ ರಾಜ್ಯ ಬಜೆಟ್ಟಿನಲ್ಲಿ ದಲಿತರ ಹಕ್ಕಿನ ಪಾಲನ್ನು ಕುರಿತು ಆರಂಭಿಸಿದ ಆರ್ಥಿಕ ಚರ್ಚೆ; ಅನಂತರ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. (ಶೆಡ್ಯೂಲ್ ಕ್ಯಾಸ್ಟ್ ಸಬ್ ಪ್ಲ್ಯಾನ್/ಟ್ರೈಬಲ್ ಸಬ್ ಪ್ಲ್ಯಾನ್: ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ರಾಜ್ಯದ ಸಂಪನ್ಮೂಲ ಹಂಚಿಕೆ) ಕಾಯ್ದೆಯ ಜಾರಿಗಾಗಿ ಅವರು ಇತರ ದಲಿತ ಸಂಘಟನೆಗಳ ಜೊತೆಜೊತೆಗೇ ನಡೆಸಿದ ಸಂಘಟನಾತ್ಮಕ ಹೋರಾಟಗಳು ದಲಿತ ಚಳುವಳಿಯ ಮೈಲಿಗಲ್ಲುಗಳಾಗಿವೆ. ದಶಕಗಳ ಕೆಳಗೆ 'ಸಂವಿಧಾನ ಸಂಕಲ್ಪ ದಿನ'ವನ್ನು ಸಂಘಟನೆಯ ಕಾರ್ಯಕ್ರಮಗಳ ಭಾಗವಾಗಿಸಿದ್ದ ಶಂಕರ್, ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಸಂಘಟನೆಯ ರಾಜ್ಯ ಸಂಚಾಲಕರಾಗಿ ಚಳುವಳಿಯನ್ನು ಗಟ್ಟಿಯಾಗಿಸುತ್ತಾ ಬಂದಿದ್ದಾರೆ. 'ಅಂಬೇಡ್ಕರ್‌ವಾದ' ಪತ್ರಿಕೆಯನ್ನೂ ರೂಪಿಸುತ್ತಿದ್ದಾರೆ. ಇವತ್ತಿಗೂ ವೈಚಾರಿಕ ಬರಹಗಳು, ಪುಸ್ತಕಗಳನ್ನು ಓದುತ್ತಾ ಹೊಸ ಪುಸ್ತಕಗಳ ಬಗ್ಗೆ ಅತ್ಯಂತ ಅಪ್‌ಡೇಟ್ ಆಗಿರುವ ಚಳುವಳಿಗಾರ ನಾಯಕ ಮಾವಳ್ಳಿ ಶಂಕರ್ ಈ ಬರಹಗಳಿಂದ ಪಡೆದ ಜ್ಞಾನವನ್ನು ನಿತ್ಯ ಗೆಳೆಯರಲ್ಲಿ ಕಾರ್ಯಕರ್ತರಲ್ಲಿ ಹಂಚಿಕೊಳ್ಳುತ್ತಲೇ ಇರುತ್ತಾರೆ. ಈ ನಡುವೆ ಚಳುವಳಿಯ ಕಹಿಗಳಿಗೂ, ಆತಂಕಗಳಿಗೂ ಶಂಕರ್ ಮೈಯೊಡ್ಡಿದ್ದಾರೆ. ಎಲ್ಲೆಡೆಯಿಂದ ಸಮಸ್ಯೆಗಳನ್ನು ನಿತ್ಯ ಹೊತ್ತು ಬರುವ ದಲಿತ ಜನಸ್ತೋಮ, ವ್ಯಕ್ತಿಗಳು ಎಲ್ಲರ ಜೊತೆಗೂ ಶಂಕರ್ ಹೆಜ್ಜೆ ಹಾಕಿದ್ದಾರೆ. ಮೆಟ್ರೋ ರೈಲು ಶುರುವಾದ ಸಂದರ್ಭದಲ್ಲಿ ವಿಧಾನಸೌಧದ ಎದುರು ನಿಂತಿರುವ ಅಂಬೇಡ್ಕರ್ ಪ್ರತಿಮೆಯ ಸ್ಥಳಾಂತರದ ಹುನ್ನಾರ ನಡೆದಾಗ ಶಂಕರ್ ಪ್ರತಿಮೆಯ ಸ್ಥಳಾಂತರದ ಬಗ್ಗೆ ಅರ್ಧ ರಾತ್ರಿಯ ಕರೆಗಳು ಬಂದಾಗ ರಾತ್ರೋರಾತ್ರಿ ಅಲ್ಲಿಗೆ ಧಾವಿಸಿದ್ದಾರೆ. ಸಂಘಟನೆಯ ಕಾರ್ಯಕರ್ತರ ಸಾವು, ನೋವುಗಳಲ್ಲಿ ನಿತ್ಯ ಭಾಗಿಯಾಗುತ್ತಲೇ ಇದ್ದಾರೆ. ಸಾರ್ವಜನಿಕ ವೇದಿಕೆಗಳಲ್ಲಿ ಸ್ಪಷ್ಟವಾಗಿ ಎಲ್ಲರನ್ನೂ ಸರಳವಾಗಿ ತಲುಪುವಂತೆ ಶಂಕರ್ ಬಳಸುವ ವೈಚಾರಿಕ ನುಡಿಗಟ್ಟು ಹಾಗೂ ಗಂಭೀರ ಕನ್ನಡ ಭಾಷೆಯ ಬಳಕೆ ಕೂಡ ಅತ್ಯಂತ ಪರಿಣಾಮಕಾರಿಯಾದವು. ಸ್ಪಷ್ಟ ಆಲೋಚನೆಯ ಶಂಕರ್ ದಿಟ್ಟ ಹಾಗೂ ನಿಷ್ಠುರ ಭಾಷಣಗಳು, ಧರಣಿ, ಪ್ರತಿಭಟನೆಗಳ ಮೂಲಕ ವ್ಯವಸ್ಥೆಯನ್ನು ನೇರವಾಗಿ ಎದುರಿಸುತ್ತಾ ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯಿಸುತ್ತಾ ಜನರಿಗೆ ನೆರವಾಗುತ್ತಾ ಬಂದಿದ್ದಾರೆ. ಗೆಳೆಯರು, ಚಳುವಳಿಯ ಕಾರ್ಯಕರ್ತರು, ವಿವಿಧ ಚಳುವಳಿಗಳ ನಾಯಕರು, ನೊಂದವರು, ಪ್ರಗತಿಪರರ ಜೊತೆ ಸಹಜ ಪ್ರೀತಿಯಿಂದ ಬೆರೆಯುವ, ಒಡನಾಡುವ, ಸ್ಪಷ್ಟ ವೈಚಾರಿಕ ನಿಲುವುಗಳ ಗೆಳೆಯ ಮಾವಳ್ಳಿ ಶಂಕರ್ ಅವರಿಗೆ ಡಾ. ಬಿ. ಆರ್. ಅಂಬೇಡ್ಕರ್ ರಾಜ್ಯ ಪ್ರಶಸ್ತಿ ಬಂದ ಸಂದರ್ಭದಲ್ಲಿ ವೈಚಾರಿಕ ಕರ್ನಾಟಕದ ಆತ್ಮೀಯ ಅಭಿನಂದನೆ.

**-KL Chandrashekhar Aijoor**

**ನಿಲುವುಗಳ ಗೆಳೆಯ ಮಾವಳ್ಳಿ ಶಂಕರ್ ಅವರಿಗೆ ಡಾ. ಬಿ. ಆರ್. ಅಂಬೇಡ್ಕರ್ ರಾಜ್ಯ ಪ್ರಶಸ್ತಿ ಬಂದ ಸಂದರ್ಭದಲ್ಲಿ ವೈಚಾರಿಕ ಕರ್ನಾಟಕದ ಆತ್ಮೀಯ ಅಭಿನಂದನೆ.**

# ಬಾಗಲಕೋಟೆ-ಏ.16, 17 ಸಿಇಟಿ ಪರೀಕ್ಷೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.11- ಏ.16 ಹಾಗೂ 17 ರಂದು ಸಿಇಟಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಜಿಲ್ಲೆಯ 21 ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಒಟ್ಟು 9369 ವಿದ್ಯಾರ್ಥಿಗಳು ಪರೀಕ್ಷೆಗೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಜಾನಕಿ ತಿಳಿಸಿದ್ದು, ಯಾವುದೇ ತೊಂದರೆಯಾಗದಂತೆ ಪರೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಸಾಮಾನ್ಯ ಪ್ರವೇಶ ಪರೀಕ್ಷೆ 2025 ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 16 ರಂದು ಬೆಳಿಗ್ಗೆ 10.30 ರಿಂದ 11.50 ರವರೆಗೆ ಭೌತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ರಸಾಯನಶಾಸ್ತ್ರ, 17 ರಂದು ಬೆಳಿಗ್ಗೆ 10.30 ರಿಂದ 11.50 ರವರೆಗೆ ಗಣಿತಶಾಸ್ತ್ರ ಮತ್ತು ಮಧ್ಯಾಹ್ನ 2.30 ರಿಂದ 3.50 ರವರೆಗೆ ಜೀವಶಾಸ್ತ್ರ ಪರೀಕ್ಷೆಗಳು ಬಾಗಲಕೋಟ ನಗರದ 13 ಹಾಗೂ ಜಮಖಂಡಿ ನಗರದ 08 ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾ ಕಣ್ಗಾವಲಿನಲ್ಲಿ ಪರೀಕ್ಷೆ ನಡೆಸಲಾಗುವುದು ಎಂದರು.

ವೆಬ್ ಕಾಸ್ಟಿಂಗ್ ಕಡ್ಡಾಯವಾಗಿದ್ದು, ಯಾವುದೇ ಲೋಪದೋಷಗಳು ಉಂಟಾಗದಂತೆ ಪರೀಕ್ಷೆಗಳು ಸುಗಮವಾಗಿ ನಡೆಯಬೇಕು. ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರವರೆಗೆ 144 ಕಲಂ ಜಾರಿ ಮಾಡಲಾಗುವುದು. ಝರಾಕ್ಸ್ ಅಂಗಡಿಗಳನ್ನು ಮುಚ್ಚಿಸಲು ಕ್ರಮ ಕೈಗೊಳ್ಳಲಾಗುವುದಲ್ಲದೇ, ಪೊಲೀಸ್ ಬಂದೋಬಸ್ತಿನಲ್ಲಿ ಪ್ರಶ್ನೆಪತ್ರಿಕೆಗಳ ಸಾಗಾಣಿಕೆ ಇದ್ದು, ಯಾವುದೇ ಅಹಿತಕರ ಘಟನೆಗಳು ನಡೆ-ಯದಂತೆ ಎಚ್ಚರಿಕೆ ವಹಿಸಬೇಕು ಎಂದು ಜಾನಕಿ ತಿಳಿಸಿದರು.

ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಗೋಡೆ ಗಡಿಯಾರಗಳನ್ನು ಅಳವಡಿಸುವುದು ಮತ್ತು ಜಿಲ್ಲೆಯಲ್ಲಿ ಬಿಸಿಲಿನ ಹೆಚ್ಚಳದ ಕಾರಣ ಪರೀಕ್ಷೆ ಕೊಠಡಿಯೊಳಗೆ ಫ್ಯಾನ್, ನೀರು, ಮೂಲಭೂತ ಸೌಕರ್ಯಗಳ ಪೂ-ರೈಕೆ ಮಾಡಿಕೊಡಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಡಿಡಿಪಿಯು ಪ್ರಕಾಶ ಜೇವೂರ, ಪ್ರಭಾರ ಡಿಡಿಪಿಐ ಹೆಚ್.ಜಿ.ಮಿರ್ಜಿ ಇತರರು ಇದ್ದರು.

## ಸೇಡಂ ಪಿ.ಎಸ್.ಐ.ಉಪೇಂದ್ರಕುಮಾರ ಆಟೋ-ಚಾಲಕರಿಗೆ ಸಂಚಾರ ನಿಯಮಗಳನ್ನು ಪಾಲಿಸುವಂತೆ ಆದೇಶ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಏ. 11. ತಾಲೂಕಿನ ಪಿ.ಎಸ್.ಐ.ಉಪೇಂದ್ರಕುಮಾರ. ರವರು ಆಟೋ-ಚಾಲಕರನ್ನು ಕರೆಯಿಸಿ ಕಾನೂನು ಸಂಚಾರ ನಿಯಮಗಳನ್ನು ಪಾಲಿಸುವಂತೆ ತಿಳಿಸಿ ಈ ಕೆಳಗಿನ ನಿಯಮಗಳನ್ನು ಪಾಲನೆ ಮಾಡಲು ತಿಳಿಸಿದರು ವಾಹನಗಳನ್ನು ನಿಗಧಿತ ಪಾರ್ಕಿಂ-ಗ್ ಸ್ಥಳದಲ್ಲಿ ನಿಲ್ಲಿಸಿ, ಪಾರ್ಕಿಂ-ಗ ಸ್ಥಳದವರಿಂದ ಟೋಕನ್ ಪಡೆಯಿರಿ.

ವಾಹನ ನಿಲುಗಡೆ ಮಾಡಿದ ನಂತರ ಪ್ರಯಾಣಿಕರು ಯಾವುದೇ ಬೆಲೆಬಾಳುವ ವಸ್ತುಗಳನ್ನು ವಾಹನದಲ್ಲಿ ಬಿಟ್ಟು ಹೋದಲ್ಲಿ ಪೊಲೀಸ್ ಠಾಣೆಗೆ ಬಂದು ಮಾಹಿತಿ ಕೊಡುವುದು. ಕಡ್ಡಾಯವಾಗಿ ಸಮವಸ್ತ್ರದಲ್ಲಿ ವಾಹನವನ್ನು ಚಲಾಯಿಸುವುದು.

ನಿಮ್ಮ ವಾಹನದ ಎಲ್ಲ ದಾಖಲಾತಿಗಳ ಒಂದು ಪ್ರತಿಯನ್ನು (ಇನ್ಸುರೆನ್ಸ್, ಆರ್.ಸಿ.. ಡಿ.ಎಲ್. ಪಿ.ಯು.ಸಿ ಇತರೆ ದಾಖಲಾತಿಗಳನ್ನು ಇಟ್ಟುಕೊಳ್ಳತಕ್ಕದ್ದು.

ನಿಮ್ಮ ಬಳಿ ಯಾರಾದರೂ ಅನುಮಾನಸ್ಪದ ವ್ಯಕ್ತಿಗಳು ಕಂಡು ಬಂದರೆ ಕೂಡಲೇ ಪೊಲೀಸರಿಗೆ ಅಥವಾ 112 ಗೆ ಕರೆ ಮಾಡಿ ಮಾಹಿತಿ ನೀಡಿ.

ಕಡ್ಡಾಯವಾಗಿ ಎಲ್ಲರು ವಾಹನದ ಅನುಕ್ರಮ ನಂಬರ್ ಪಡೆದುಕೊಳ್ಳುವುದು.

ನಿಮ್ಮ ವಾಹನಗಳಲ್ಲಿ ನಿಗದಿಪಡಿಸಿದ ಪ್ರಯಾಣಿಕರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಕೂಡಿಕೊಳ್ಳಬಾರದು.

ಸರದಿ ಪ್ರಕಾರ ವಾಹನಗಳಲ್ಲಿ ಪ್ರಯಾಣಿಕರನ್ನು ಕೂಡಿಸಿಕೊಂಡು ಹೋಗತಕ್ಕದ್ದು.

ಬಸ್ ನಿಲ್ದಾಣದ ಒಳಗಡೆ ಯಾರೂ ಆಟೋಗಳನ್ನು ತೆ-ಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.

ಅನಾವಶ್ಯಕವಾಗಿ ಎಲ್ಲೆಂದರಲ್ಲಿ ಆಟೋಗಳನ್ನು ನಿಲ್ಲಿಸಿ ವಾಹನಗಳ ಸಂಚಾರಕ್ಕೆ ಅಡೆತಡೆ ಉಂಟು ಮಾಡಬಾರದು.

ವಾಹನ ಖರೀದಿಗೆ ಮೊದಲು ಮೂಲದಾಖಲಾತಿಗಳ ನೈಜತೆಯನ್ನು ಪರೀಶೀಲಿಸಿದ ನಂತರ ಖರೀದಿಸಿ & ಅಪರಿಚಿತರಿಂದ ವಾಹನ ಖರೀದಿ ಮಾಡಬೇಡಿ.

ಮದ್ಯಪಾನ ಸೇವಿಸಿ ವಾಹನ ಚಲಾಯಿಸುವುದು ಕಂಡುಬಂದಲ್ಲಿ ನಿಮ್ಮ ಮೇಲೆ ಡಿ.ಡಿ ಕೇಸ್ ಹಾಕಲಾಗುವುದು. ಎಂದು ಕಿವಿಮಾತು ಹೇಳಿದರು ಈ ಸಂದರ್ಭದಲ್ಲಿ ಸೇಡಂ ತಾಲೂಕಿನ ಆಟೊ ಚಾಲಕರು ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿ ಇದ್ದರು.

# ಯಲಮಗೇರಿ ತಾಂಡಾದ ಯುವತಿಯ ಅದ್ಭುತ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಇಲಕಲ್ಲಗಡ ಹೋಬಳಿಯ ಯಲಮಗೇರಿ ತಾಂಡಾ ಗ್ರಾಮದ ದ್ವಿತೀಯ ವರ್ಷದ ಪಿಯುಸಿ ವಿದ್ಯಾರ್ಥಿ ಧರ್ಮ ಜಾನಕಿ ಭೋಜಪ್ಪ ನಾಯಕ್ ಸ್ಥಳೀಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಯಾಗಿದ್ದು 2024 25ರ ದ್ವಿತೀಯ ಪಿಯುಸಿ ಫಲಿತಾಂಶವನ್ನು ಶೆ.96,06 ವಾಣಿಜ್ಯ ವಿಭಾಗದಲ್ಲಿ ಪಡೆದು ತೇರ್ಗಡೆಯಾಗಿದ್ದಾಳೆ ಸಂಸ್ಥೆಗೆ ಮತ್ತು ಊರಿಗೆ ಕೀರ್ತಿ ತಂದಿರುತ್ತಾಳೆ . ಈ ಕುರಿತು ಇಂದು ಬೆಳಿಗ್ಗೆ ಸಂತ ಸೇವಾಲಾಲ್ ದೇವಸ್ಥಾನದಲ್ಲಿ ಗ್ರಾಮದ ಮತ್ತು ತಾಂಡಾದ ಎಲ್ಲಾ ಯುವಕರು ಸೇರಿ ವಿದ್ಯಾರ್ಥಿಗೆ ಸನ್ಮಾನವನ್ನು ಮತ್ತು ವಿದ್ಯಾರ್ಥಿಗೇ ಪಾಲಕರಿಗೆ ಸನ್ಮಾನ ಸಮಾರಂಭವನ್ನು ಏರ್ಪಡಿಸಿದ್ದರು ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಯುವ ಮುಖಂಡ ಮತ್ತು ಬಂಜಾರ ಸಮಾಜದ ತಾಲೂಕ ಅಧ್ಯಕ್ಷರು ಆದ ಶಂಕರ್ ನಾಯಕ್ ಮಾತನಾಡಿ ಈ ದಿನಗಳಲ್ಲಿ ಬಂಜಾರ ಸಮಾಜದವರು ಗುಳೇ ಹೋಗುವುದನ್ನು ಕಂಡಿದ್ದೇವೆ ಅತ್ಯಂತ ಕಡುಬಡತನದಲ್ಲಿ ಜೀವನ ಮಾಡುತ್ತಿರುವ ತಾಂಡಾದ ಜನರು ಮಕ್ಕಳನ್ನು ಓದಿನ ಕಡೆ ಗಮನ ಹರಿಸುತ್ತಿದ್ದಾರೆ ಮತ್ತು ಶಿಕ್ಷಣದ ಎಡೆಗೆ ಎಲ್ಲರೂ ಗಮನ ಹರಿಸಬೇಕಾಗಿದೆ ಮುಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಯ ಏಳಿಗೆಗಾಗಿ ಶ್ರಮಿಸುತ್ತೇನೆ ಎಂದು ಹೇಳಿದರು ಮತ್ತು ಸ್ಥಳೀಯ ಮುಖಂಡರಾದ ವೆಂಕನಗೌಡರು ಮೇಟಿ ಮಾತನಾಡಿ ಬಂಜಾರ ಸಮಾಜದ ವಿದ್ಯಾರ್ಥಿಯ ಬಗ್ಗೆ ನಮಗೆ ಹೆಮ್ಮೆ ಬಂದಿದೆ ಮತ್ತು ಆ ವಿದ್ಯಾರ್ಥಿಯ ಮುಂದಿನ ಭವಿಷ್ಯಕ್ಕಾಗಿ ನಾವು ತನು ಮನ ಧನದಿಂದ ಪ್ರೋತ್ಸಾಹಿಸುತ್ತೇವೆ ಎಂದು ಹೇಳಿದರು ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರಾದ ಮಂಜುನಾಥ್ ಪಾಟೀಲ್ ಗಾಳೆಪ್ಪ ಹಿರೇಮನಿ ಸೋಮು ಕುದುರೆಮೋತಿ ಮತ್ತು ಸೋಮು ನಾಯಕ್ ಗ್ರಾಮ ಪಂಚಾಯತಿಯ ಸದಸ್ಯರಾದ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು ನೀಲಪ್ಪ ತಾವರಗೇರಿ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ಶಿರೂರ ಲಕ್ಕಂ ಕಾಲೇಜಿಗೆ ಪ್ರತಿಭಾ ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.11-ಶಿರೂರ ಪಟ್ಟಣದ ಟಿ.ಎಂ.ಭಗವತಿ ಶಿಕ್ಷಣ ಸಂಸ್ಥೆಯ ಕೆ.ಆರ್.ಲಕ್ಕಂ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪಿ.ಯು.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದ್ದಾರೆ. ಪ್ರತಿಭಾ ಕಂಬಾರ ಶೇ.88.83 ಅಂಕ ಗಳಿಸಿ ಕಾಲೇಜಿಗೆ ಪ್ರಥಮ ಸ್ಥಾನ ಗಳಿಸಿದರೆ, ಲಕ್ಷ್ಮೀ ಮಲಘಾಣ ಹಾಗೂ ದರ್ಶನ್ ಖಂಡೋಬಾ ತಲಾ ಶೇ. 86.33 ಅಂಕ ಪಡೆದು ದ್ವಿತೀಯ ಮತ್ತು ಮಲ್ಲಿಕಾರ್ಜುನ 81.83 ಅಂಕಗಳಿಸಿ ತೃತೀಯ ಸ್ಥಾನ ಗಳಿಸಿದ್ದಾರೆ.

ಪರೀಕ್ಷೆ ಬರೆದ 68 ವಿದ್ಯಾರ್ಥಿಗಳಲ್ಲಿ 41 ವಿದ್ಯಾರ್ಥಿಗಳು ತೇರ್ಗಡೆ-ಯಾಗಿದ್ದಾರೆ ಎಂದು ಸಂಸ್ಥೆಯ ಕಾರ್ಯದರ್ಶಿ ಶ್ರೀಶೈಲ ಕರಿಶಂಕರಿ, ಪ್ರಾಚಾರ್ಯ ಎಸ್.ಎಸ್.ಮುಳ್ಳೂರ ತಿಳಿಸಿದ್ದಾರೆ.

# ಭಗವತಿ ಕಾಲೇಜಿಗೆ ಸಿದ್ಧಾರ್ಥ ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.11-ತಾಲೂಕಿನ ಭಗವತಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪಿ.ಯು.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದ್ದು, ಸಿದ್ದಾರ್ಥ ಭಜಂತ್ರಿ ಶೇ.83.6 ಅಂಕ ಗಳಿಸಿ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾನೆ.

ಸಹನಾ ಮಾಗಿ ಶೇ. 83.5 ಅಂಕ ಪಡೆದು ದ್ವಿತೀಯ ಮತ್ತು ಸಂಗೀತಾ ಗೋವಿನದಿನ್ನಿ ಶೇ.82.5 ಅಂಕಗಳಿಸಿ ತೃತೀಯ ಸ್ಥಾನ ಗಳಿಸಿದ್ದಾರೆ.

ಪರೀಕ್ಷೆ ಬರೆದ 71 ವಿದ್ಯಾರ್ಥಿಗಳಲ್ಲಿ 59 ವಿದ್ಯಾರ್ಥಿಗಳು ತೇರ್ಗಡೆ-ಯಾಗಿದ್ದು, 39 ವಿದ್ಯಾರ್ಥಿಗಳು ಪ್ರಥಮ ದರ್ಜೆ, 14 ವಿದ್ಯಾರ್ಥಿಗಳು ದ್ವಿತೀಯ ಹಾಗೂ 6 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಬಿ.ವಾಯ್. ಕೆಳಗಿನಮನಿ ತಿಳಿಸಿದ್ದಾರೆ.

## ಸುಪರ್ ಸ್ಪೆಶಾಲಿಟಿ ಆಸ್ಪತ್ರೆ: ವಿದ್ಯುತ್ ಸ್ಥಾವರಕ್ಕೆ ಚರಂತಿಮಠ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.11-ನಗರದ ಬಿವಿವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ಆವರಣದಲ್ಲಿ ಶೀಘ್ರವಾಗಿ ಆರಂಭವಾಗಲಿರುವ ಸುಪರ್ ಸ್ಪೆಶಾಲಿಟಿ ಆಸ್ಪತ್ರೆಗೆ ಪೂರಕವಾಗಿ ನೂತನವಾಗಿ 3 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗಿರುವ 1600 ಕಿಲೊ ವ್ಯಾಟ್‌ನ ಅತ್ಯಾಧುನಿಕ ವಿದ್ಯುತ್ ಸ್ಥಾವರದೊಂದಿಗೆ 1010 ಕಿಲೊ ವ್ಯಾಟ್‌ನ ಎರಡು ಜನರೇಟರಗಳಿಗೆ ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಚಾಲನೆ ನೀಡಿದರು. ಶುಕ್ರವಾರ ವಿದ್ಯುತ್ ಸ್ಥಾವರ ಮತ್ತು ಹೊಸ ಜನರೇಟರಗಳಿಗೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಈ ಅತ್ಯಾಧುನಿಕ ಸುಪರ್ ಸ್ಪೆಶಾಲಿಟಿ ಆಸ್ಪತ್ರೆ ಬಾಗಲಕೋಟೆ ಮತ್ತು ಸುತ್ತಲಿನ ಗ್ರಾಮೀಣ ಭಾಗದ ಸಾರ್ವಜನಿಕರಿಗೆ ವರದಾನವಾಗಲಿದೆ. ಎಲ್ಲಾ ವಿಧದ ರೋಗಿಗಳಿಗೆ ಈ ಆಸ್ಪತ್ರೆಯಲ್ಲಿ ಆಧುನಿಕ ಉಪಕರಣಗಳೊಂದಿಗೆ ನುರಿತ ತಜ್ಞ ವೈದ್ಯರುಗಳಿಂದ ಪರಿಣಾಮಕಾರಿ ಚಿಕಿತ್ಸೆ ಲಭಿಸಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿವಿವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ್ ಅಥಣಿ, ಕಟ್ಟಡ ವಿಭಾಗದ ಕಾರ್ಯಾಧ್ಯಕ್ಷ ಮಹೇಶ ಕಕರಡ್ಡಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ(ಬೇವೂರು), ಸಂಘದ ಸದಸ್ಯ ವಿಶ್ವನಾಥ ಇಲ್ಯಾಳಶೆಟ್ಟರ, ಸುಪರ್ ಸ್ಪೆಶಾಲಿಟಿ ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ನವೀನ ಚರಂತಿಮಠ, ಎಸ್.ಎನ್.ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ಎಚ್.ಎಸ್.ಕೆ.ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ದಂತ ಕಾಲೇಜಿನ ಪ್ರಾಚಾರ್ಯ ಡಾ.ಶ್ರೀನಿವಾಸ ವನಕಿ, ಕೊಲ್ಹಾಪುರದ ಎಲಮೆಕ್ ಇಂಜಿನಿಯರಿಂಗ್ ಕಂಪನಿಯ ಗುತ್ತಿಗೆದಾರ ಅಶ್ವಿನ್ ಹೆಗಡೆ, ಕಟ್ಟಡ ವಿಭಾಗದ ಇಂಜಿನೀಯರಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಏ.20ರಂದು ಚಿಕ್ಕೋಡಿಯಲ್ಲಿ ಯಾದವ ಸಂಘದ ಶತಮಾನೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ, ಏ.11: ಕರ್ನಾಟಕ ರಾಜ್ಯ ಗೊಲ್ಲ (ಯಾದವ) ಸಂಘದ ಶತಮಾನೋತ್ಸವ ಹಾಗೂ ಶ್ರೀ ಯಾದವಾನಂದ ಸ್ವಾಮಿಜಿಗಳ 16ನೇ ಪಟ್ಟಾಭಿಷೇಕ ಸಮಾರಂಭವನ್ನು ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯಲ್ಲಿ ಜಿಲ್ಲಾ ಕ್ರೀಡಾಂಗಣದ ಅಮಟೂರು ಬಾಳಪ್ಪನವರ ಸ್ಮರಣಾರ್ಥ ಮಂಟಪದಲ್ಲಿ ಏ.20 ರಂದು ಮಧ್ಯಾನ್ಹ 3 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯರವರು ಸಮಾರಂಭವನ್ನು ಉದ್ಘಾಟಿಸುವರು ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಕರ್ನಾಟಕ ಗೊಲ್ಲ(ಯಾದವ) ಸಂಘದ ರಾಜಾಧ್ಯಕ್ಷ ಡಿ.ಟಿ.ಶ್ರೀನಿವಾಸ ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಗೊಲ್ಲ(ಯಾದವ) ಸಂಘ 1924ರಲ್ಲಿ ಅಸ್ತಿತ್ವಕ್ಕೆ ಬಂದಿದ್ದು, ಕಳೆದ 2024ರಲ್ಲಿ ನೂರು ವಸಂತಗಳನ್ನು ಪೂರೈಸಿದೆ. ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿರುವ ಯಾದವ ಸಮಾಜ ಸಂಘಟನೆಗಾಗಿ ಸಂಘದ ಶತಮಾನೋತ್ಸವ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

# ಮೌನೇಶತಾಲೂಕಿಗೆ ಪ್ರಥಮ,ಪದ್ಮಾವತಿ ದ್ವಿತೀಯ



ಮಲ್ಲಮ್ಮ ನುಡಿ ವಾರ್ತೆ

ದೋರನಹಳ್ಳಿ ಗ್ರಾಮದ ಡಿ.ಡಿ.ಯು ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿಯಲ್ಲಿ ಜಿಲ್ಲೆಗೆ 5ನೇ ಸ್ಥಾನ, ತಾಲೂಕಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿ ಮೌನೇಶ 600 ಅಂಕಗಳಿಗೆ 545 ಅಂಕ ಪಡೆದು ಜಿಲ್ಲೆಗೆ ಐದನೇ ಸ್ಥಾನ ತಾಲೂಕಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾನೆ. ವಿದ್ಯಾರ್ಥಿನಿ ಪದ್ಮಾವತಿ 600 ಅಂಕಗಳಿಗೆ 540 ಅಂಕಗಳು ಪಡೆದು ಜಿಲ್ಲೆಗೆ ಆರನೇ ಸ್ಥಾನ ತಾಲೂಕಿಗೆ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾಳೆ. ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಅಂಕ ಪಡೆದು ಒಟ್ಟು ಕಾಲೇಜಿಗೆ ಶೇ.96 ರಷ್ಟು ಫಲಿತಾಂಶ ಸಾಧಿಸಿದೆ. ವಿದ್ಯಾರ್ಥಿಗಳ ಪಿಯುಸಿ ಸಾಧನೆಗೆ ಡಿ.ಡಿ.ಯು ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಡಾ.ಭೀಮಣ್ಣ ಮೇಟಿ, ಕಾರ್ಯದರ್ಶಿ ದೇವಿಂದ್ರಪ್ಪ ಮೇಟಿ, ಆಡಳಿತ ಅಧಿಕಾರಿ ಮಲ್ಲಿಕಾರ್ಜುನ ಮೇಟಿ ಕಾಲೇಜಿನ ಪ್ರಾಂಶುಪಾಲ ಮಹೇಶ ಪತ್ತಾರ ಮತ್ತು ಕಾಲೇಜಿನ ಉಪನ್ಯಾಸಕರು ಹರ್ಷ ವ್ಯಕ್ತಪಡಿಸಿದ್ದಾರೆ.

ನಮ್ಮ ಡಿ,ಡಿ,ಯು ಪಿಯು ಕಾಲೇಜಿನಲ್ಲಿ ನುರಿತ ಉಪನ್ಯಾಸಕರಿದ್ದು ನಮಗೆ ಒಳ್ಳೆಯ ಪಾಠ-ಪ್ರವಚನ ಮಾಡಿದ್ದಾರೆ. ಪ್ರತಿ ತಿಂಗಳು ಕಿರು ಪರೀಕ್ಷೆ, ವಿಚಾರ ಸಂಕೀರ್ಣ ಮುಂತಾದ ರಚನಾತ್ಮಕ ಚಟುವಟಿಕೆಗಳ ಮೂಲಕ ನಮಗೆ ಗುಣಾತ್ಮಕ ಶಿಕ್ಷಣ ನೀಡಿದ್ದಾರೆ. ಉಪನ್ಯಾಸಕರ ಸಹಕಾರದಿಂದ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಯಿತು.

**-ಮೌನೇಶ ಮಲ್ಲಿಕಾರ್ಜುನ ತಾಲೂಕಿಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ**

## ಏಪ್ರಿಲ್ 14 ರಂದು ಡಾ. ಬಾಬಾ ಸಾಹೇಬ ಅಂಬೇಡ್ಕರ್ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.11-ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಹಾಗೂ ಭಾರತ ರತ್ನ ಡಾ. ಬಾಬಾ ಸಾಹೇಬ ಅಂಬೇಡ್ಕರ್‌ರವರ 134ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಇದೇ ಏಪ್ರಿಲ್ 14 ರಂದು ಕಲಬುರಗಿ ಜಗತ್ ವೃತ್ತದ ಡಾ. ಬಿ.ಆರ್. ಅಂಬೇಡ್ಕರ ಪುತ್ಥಳಿ ಹತ್ತಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಡಾ. ಬಾಬಾ ಸಾಹೇಬ ಅಂಬೇಡ್ಕರ್‌ರವರ ಪುತ್ಥಳಿಗೆ ಮಾಲಾರ್ಪಣೆ ಹಾಗೂ ಬೆಳಿಗ್ಗೆ 9.30 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ. ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ಆರ್. ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಹಾಗೂ ಕಲಬುರಗಿ ಡಾ. ಬಾಬಾ ಸಾಹೇಬ ಅಂಬೇಡ್ಕರ್‌ರವರ ಜಯಂತ್ಯೋತ್ಸವ ಆಚರಣೆ ಸಮಿತಿಯ ಅಧ್ಯಕ್ಷ ವಾಸು ಎಸ್. ವಂಟಿ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು. ಕಲಬುರಗಿ ಗೋದುತಾಯಿ ದೊಡ್ಡಪ್ಪ ಅಪ್ಪ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಪುಟ್ಟಮಣಿ ದೇವಿದಾಸ ಅವರು ವಿಶೇಷ ಉಪನ್ಯಾಸ ನೀಡುವರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ವತಿಯಿಂದ ಕೆಕೆಆರ್‌ಡಿಬಿ ಕಾರ್ಯದರ್ಶಿಗಳ ಭೇಟಿ:

## ಪತ್ರಿಕೆಗಳಿಗೆ ಜಾಹೀರಾತು ನೀಡುವ ಬಗ್ಗೆ ಚರ್ಚೆ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಏ.11:-ಇಂದು ಕಲಬುರ್ಗಿ ನಗರದಲ್ಲಿರುವ ಕೆಕೆಆರ್‌ಡಿಬಿ ಕಚೇರಿಯಲ್ಲಿ ಸನ್ಮಾನ್ಯ ಕಾರ್ಯದರ್ಶಿಗಳನ್ನು ಭೇಟಿ ಮಾಡಿ ಈ ಭಾಗದ ಪತ್ರಿಕೆಗಳಿಗೆ ತಿಂಗಳಿಗೆ ಎರಡು ಪುಟ ಜಾಹೀರಾತು ನೀಡಬೇಕೆಂಬ ಬೇಡಿಕೆ ಬಗ್ಗೆ ಸುದೀರ್ಘವಾಗಿ ಸಭೆ ನಡೆಯಿತು.

ಈ ಸಭೆ ಬೆಳಗ್ಗೆ 11:30 ಗಂಟೆಗೆ ಕಲಬುರ್ಗಿ-ಯಾದಗಿರ್-ಬೀದರ್ ಜಿಲ್ಲೆಯ ಸಂಪಾದಕರು ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ. ಬೀದರ್ ಘಟಕದ ಮತ್ತು ಕಲ್ಬುರ್ಗಿ ಘಟಕ, ಯಾದಗಿರ್‌ನವರು ಸೇರಿ ಸಭೆಯಲ್ಲಿ ಭಾಗವಹಿಸಿ ಸುದೀರ್ಘವಾಗಿ ಚರ್ಚೆ ನಡೆದು ಕಾರ್ಯದರ್ಶಿಗಳು ಈ ಬಗ್ಗೆ ಈಗಾಗಲೇ ಅಧ್ಯಕ್ಷರು ತಿಳಿಸಿರುವುದರಿಂದ ಮತ್ತು ಅಧ್ಯಕ್ಷರ ಆದೇಶದ ಮೇರೆಗೆ ಇಂದು ಕಾರ್ಯದರ್ಶಿಗಳ ಜೊತೆ ಸಭೆ ನಡೆಸಲಾಗಿದೆ ಸಾಧಕ ಬಾದಕಗಳನ್ನು ಚರ್ಚೆ ಮಾಡಿ ಯಾವ ನಿಯಮದಡಿ ಜಾಹೀರಾತು ನೀಡಬಹುದೆಂಬ ಬಗ್ಗೆ ಪರಿಶೀಲಿಸಿ ಒಂದು ತೀರ್ಮಾನಕ್ಕೆ ಬರಲಾಗುವುದೆಂದರು.

ಯಾವುದೇ ಕಾರ್ಯಕ್ರಮ ಇದ್ದಲ್ಲಿ ಅಂತಹ ಸಂದರ್ಭದಲ್ಲಿ ಜಾಹೀರಾತು ನೀಡುವ ಬಗ್ಗೆ ಈಗಾಗಲೇ ಚರ್ಚೆ ನಡೆದಿದೆ. ಪ್ರತಿ ತಿಂಗಳು ಜಾಹಿರಾತು ಬೇಡಿಕೆ ಬಗ್ಗೆ ಸುದೀರ್ಘ ಚರ್ಚೆ ನಡೆಸಿ ಒಂದು ಹಂತಕ್ಕೆ ಬರಲಾಗುವುದೆಂದು ಸ್ಪಷ್ಟನೆ ನೀಡಿದ್ದಾರೆ. ಮುಖ್ಯಮಂತ್ರಿಗಳ ಬೀದರ್ ಮತ್ತು ಕಲ್ಬುರ್ಗಿಯಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳ ಜಾಹೀರಾತು ನೀಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿರುತ್ತಾರೆ.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ. ಬೀದರ್ ಘಟಕದ ಅಧ್ಯಕ್ಷರಾದ ವಿಜಯಕುಮಾರ ಪಾಟೀಲ, ವಾರ್ತಾ ಇಲಾಖೆಯ ಮಾನ್ಯತಾ ಸಮಿತಿ ಸದಸ್ಯರಾದ ಗುರುರಾಜ ಕುಲಕರ್ಣಿ, ಕಲಬುರಗಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಆನಂದ ಪಿ. ಮಣ್ಣೂರ, ರಾಮಚಂದ್ರ ಭೋಸ್ಲೆ, ಪ್ರದೀಪ ಬಿರಾದಾರ, ಕಲಬುರಗಿ ಜಿಲ್ಲಾಧ್ಯಕ್ಷರಾದ ಸಿದ್ರಮಾಪ್ಪ, ಮಲ್ಲಿಕಾರ್ಜುನ ಕೋಡಿ, ವಿಠಲ ಚಿಕಣಿ, ಹಣಮಂತ ಬೋದನಕರ್, ಶಿವಕುಮಾರ , ಅವಿನಶ ಕೊಳ್ಳೂರು, ಮಲ್ಲಿಕಾರ್ಜುನ ಜೋಗ, ಡಿ.ವಿ. ಚಕ್ರವರ್ತಿ, ಶಂಕ್ರೆಪ್ಪಾ, ವಿಜಯಕುಮಾರ, ಜಯಪ್ರಕಾಶ, ಚಂದ್ರಶೇಖರ, ವಿಜಯಕುಮಾರ ಜಿಡಗಿ, ರವೀಂದ್ರ ಕುಪನೂರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ರವರ 134ನೇ ಜನ್ಮ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ. 11:ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ, ಭಾರತ ರತ್ನ, ಮಹಾ ಮಾನವತಾವಾದಿ,ಬಾಬಾ ಸಾಹೇಬ ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮ ದಿನಾಚರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಏಪ್ರಿಲ್ 14 ರಂದು ಬೆಳಿಗ್ಗೆ 10.30 ಗಂಟೆಗೆ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧದ ಮುಂಭಾಗದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಿದ್ದು, ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರು ಪ್ರತಿಮೆಗೆ ಗೌರವ ಸಮರ್ಪಣೆ ಮಾಡಲಿರುವರು. ನಂತರ ಬೆಳಿಗ್ಗೆ 10.45 ಗಂಟೆಗೆ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಹಮ್ಮಿಕೊಳ್ಳಲಾಗಿರುವ ವೇದಿಕೆ ಕಾರ್ಯಕ್ರಮದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕಾರ್ಯಕ್ರಮದ ಉದ್ಘಾಟನೆ ಮಾಡಲಿರುವರು.

ಭಾರತ ಸರ್ಕಾರದ ಮಾನ್ಯ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಹಾಗೂ ಮಾನ್ಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವರಾದ ಕು. ಶೋಭಾ ಕರಂದ್ಲಾಜೆ ಅವರು ಗೌರವಾನ್ವಿತ ಆಹ್ವಾನಿತರಾಗಿ ಆಗಮಿಸಲಿದ್ದು, ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಗಳಾದ ಬಸವರಾಜ ಎಸ್ ಹೊರಟ್ಟಿ, ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್, ಮಾನ್ಯ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರ ಘನ ಉಪಸ್ಥಿತಿಯೊಂದಿಗೆ ಶಿವಜಿನಗರ ವಿಧನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಅರ್ಷದ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿರುವರು.

ಕಾರ್ಯಕ್ರಮದಲ್ಲಿ ಸಚಿವರುಗಳು, ಶಾಸಕರುಗಳು, ಕರ್ನಾಟಕ ವಿಧಾನ ಪರಿಷತ್ ಹಾಗೂ ವಿಧಾನಸಭೆಯ ವಿರೋಧ ಪಕ್ಷದ ನಾಯಕರು, ಕರ್ನಾಟಕ ವಿಧಾನ ಪರಿಷತ್ತಿನ ಉಪ ಸಭಾಪತಿಗಳು, ಕರ್ನಾಟಕ ವಿಧಾನ ಸಭೆಯ ಉಪಾಧ್ಯಕ್ಷರು, ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಮುಖ್ಯ ಸಚೇತಕರು, ಕರ್ನಾಟಕ ವಿಧಾನ ಪರಿಷತನ ಸರ್ಕಾರಿ ಮುಖ್ಯ ಸಚೇತಕರು, ಲೋಕಸಭೆಯ ಸಂಸದರು, ರಾಜ್ಯ ಸಭೆಯ ಸಂಸದರು, ಗಣ್ಯರು ಸೇರಿದಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಅಭಿವೃದ್ಧಿ ಆಯುಕ್ತರು ಹಾಗೂ ಅಪರ ಮುಖ್ಯ ಕಾದರ್ಶಿಗಳಾದ ಶ್ರೀಮತಿ ಉಮ ಮಹದೇವನ್, ಸಮಾಜ ಕಲ್ಯಾಣ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಡಾ. ಬಿ.ಆರ್.ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತರು:

ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ 2023, 2024 ಮತ್ತು 2025ನೇ ಸಾಲಿನ ಪ್ರಶಸ್ತಿ ಪುರಸ್ಕೃತರನ್ನು ಸರ್ಕಾರದ ಆದೇಶ ಸಂಖ್ಯೆ: ಸ.ಕ,ಇ 330 ಪಕವಿ 2025 ದಿನಾಂಕ: 09-04-2025ರಲ್ಲಿ ಆಯ್ಕೆ ಮಾಡಿ ಆದೇಶ ಹೊರಡಿಸಲಾಗಿದೆ.

2023ನೇ ಸಾಲಿಗೆ ಸಮಾಜ ಸೇವೆ ಕ್ಷೇತ್ರದಲ್ಲಿ ಮೈಸೂರಿನ ಹರಿಹರಾ ನಂದ ಸ್ವಾಮಿ. ಪತ್ರಿಕೋದ್ಯಮ ಕ್ಷೇತ್ರದಲ್ಲಿ ಬೆಂಗಳೂರಿನ ಇಂದೂಧರ ಹೊನ್ನಾಪುರ, ಆಡಳಿತ ಕ್ಷೇತ್ರದಲ್ಲಿ ದಾವಣಗೆರೆಯ ರುದ್ರಪ್ಪ ಹನಗವಾಡಿ,

ದೇವದಾಸಿ ವಿಮೋಚನೆ ಕ್ಷೇತ್ರದಲ್ಲಿ ಬೆಳಗಾವಿಯ ಸೀತವ್ವ ಜೋಡಟ್ಟಿ ಹಾಗೂ ಸಮಾಜ ಸೇವೆ, ರಾಜಕೀಯ ಕ್ಷೇತ್ರದಿಂದ ಬೀದರನ ಕೆ.ಪುಂಡಲೀಕರಾವ್ ಶೆಟ್ಟಿಬಾ ಅವರು ಭಾಜನರಾಗಿದ್ದಾರೆ.

2024ನೇ ಸಾಲಿಗೆ ಹೋರಾಟ ಕ್ಷೇತ್ರದಿಂದ ಬೆಂಗಳೂರಿನ ಶ್ರೀಧರ ಕಲಿವೀರ, ಸಮಾಜ ಸೇವೆ, ರಾಜಕೀಯ ಕ್ಷೇತ್ರದಿಂದ ಮಂಡ್ಯದ ಮಲ್ಲಾಜಮ್ಮ,ಪತ್ರಿಕೋದ್ಯಮ ಕ್ಷೇತ್ರದಿಂದ ಬೆಂಗಳೂರಿನ ರಾಮದೇವರ ರಾಕೆ, ಸಾಹಿತ್ಯ/ಸಮಾಜ ಕ್ಷೇತ್ರದಿಂದ ಬೆಳಗಾವಿಯ ವೈ.ಬಿ.ಹಿಮ್ಮಡಿ ಹಾಗೂ ಸಾಹತ್ಯ/ಸಂಘಟನೆ ಕ್ಷೇತ್ರದಿಂದ ಕೋಲಾರದ ಲಕ್ಷ್ಮೀಪತಿ ಕೋಲಾರ ಅವರು ಭಾಜನರಾಗಿದ್ದಾರೆ.

2025ನೇ ಸಾಲಿಗೆ ಪ್ರಕಾಶನ ಕ್ಷೇತ್ರದಿಂದ ಕಲಬುರುಗಿಯ ದತ್ತಾತ್ರೇಯ ಇಕ್ಕಳಕಿ, ಹೋರಾಟ ಕ್ಷೇತ್ರದಿಂದ ಬೆಂಗಳೂರಿನ ಮಾವಳ್ಳಿ ಶಂಕರ್ ಹಾಗೂ ಧಾರವಾಡದ ಎಫ್.ಹೆಚ್.ಜಕ್ಕಪ್ಪನವರ್,

ಜನಪದ ಕಲೆ ಕ್ಷೇತ್ರದಿಂದ ಚಾಮರಾಜನಗರದ ಹೊನ್ನೂರು ಗೌರಮ್ಮ ಹಾಗೂ ದಲಿತ ಹೋರಾಟ ಕ್ಷೇತ್ರದಿಂದ ಈರಪ್ಪ ಅವರು ಭಾಜನರಾಗಿದ್ದಾರೆ.

ಪ್ರಶಸ್ತಿ ಪುರಸ್ಕರತರೆಲ್ಲರಿಗೂ ಏಪ್ರಿಲ್ 14 ರಂದು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಹಮ್ಮಿಕೊಳ್ಳಲಾಗಿರುವ ಡಾ.ಬಿ.ಆರ್.ಅಂಬೇಡ್ಕರ್ 134ನೇ ಜಯಂತಿ ಹಾಗೂ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

# ರಾಷ್ಟ್ರದ ಅಭಿವೃದ್ಧಿಗೆ ಯುವಶಕ್ತಿಯೇ ಆಧಾರ: ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್



ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ:ಏ. 11:ಯುವ ಶಕ್ತಿಯು ಯಾವುದೇ ರಾಷ್ಟ್ರದ ಅಭಿವೃದ್ಧಿಯ ಆಧಾರವಾಗಿದೆ ಮತ್ತು ಯುವಕರು ಅಸಾಧ್ಯವಾದುದನ್ನು ಸಹ ಸಾಧ್ಯವಾಗಿಸುವ ಶಕ್ತಿಯನ್ನು ಹೊಂದಿದ್ದಾರೆ. ಯುವಜನತೆಗೆ ಬೇಕಾಗಿರುವುದು ಆಂತರಿಕ ಶಕ್ತಿ, ನಿರಂತರ ಅಭ್ಯಾಸ, ಆತ್ಮ ವಿಶ್ವಾಸ ಮತ್ತು ಸಕಾರಾತ್ಮಕ ಮನೋಭಾವವನ್ನು ಗುರುತಿಸುವುದಾಗಿದೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಬೆಳಗಾವಿಯಲ್ಲಿ ನಡೆದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ 13ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ಆತ್ಮೀಯ ವಿದ್ಯಾರ್ಥಿಗಳೇ, ಇಂದು, ಈ ವಿಶೇಷ ದಿನ, ನಿಮ್ಮ ಜೀವನದ ಅತ್ಯಮೂಲ್ಯ ಕ್ಷಣಗಳಲ್ಲಿ ಒಂದಾಗಿದೆ, ಇಂದು ನೀವು ಶಿಕ್ಷಣದ ಹಾದಿಯಿಂದ ಅನುಭವ ಮತ್ತು ಕ್ರಿಯೆಯ ಹಾದಿಗೆ ಹೆಜ್ಜೆ ಹಾಕಲಿದ್ದೀರಿ. ನಿಮ್ಮ ಮುಂದೆ ಹೊಸ ಸವಾಲುಗಳು ಮತ್ತು ಅವಕಾಶಗಳು ಇರುತ್ತವೆ. ನೀವು ಪಡೆದ ಜ್ಞಾನ ಮತ್ತು ಕೌಶಲ್ಯಗಳ ಆಧಾರದ ಮೇಲೆ ಆ ಸವಾಲುಗಳನ್ನು ಎದುರಿಸಲು ಮತ್ತು ಉದಯೋನ್ಮುಖ ಅವಕಾಶಗಳ ಲಾಭವನ್ನು ಪಡೆಯಲು ಸಾಧ್ಯವಾಗುತ್ತದೆ ಎಂಬ ವಿಶ್ವಾಸವಿದೆ" ಎಂದರು.

"ನಿಮ್ಮ ಮುಂದೆ ಅನೇಕ ಮಾರ್ಗಗಳು ತೆರೆದಿವೆ – ಸರ್ಕಾರಿ ಸೇವೆ, ಖಾಸಗಿ ವಲಯ, ಉದ್ಯಮಶೀಲತೆ, ಸಂಶೋಧನೆ, ಸಮಾಜ ಸೇವೆ ಮತ್ತು ಇನ್ನೂ ಅನೇಕ. ನೀವು ಯಾವುದೇ ಕ್ಷೇತ್ರಕ್ಕೆ ಹೋದರೂ, ಶ್ರೇಷ್ಠತೆ, ಪ್ರಾಮಾಣಿಕತೆ ಮತ್ತು ಮಾನವೀಯತೆಯ ಮೌಲ್ಯಗಳನ್ನು ಎಂದಿಗೂ ಮರೆಯಬಾರದು. ನಮ್ಮ ದೇಶದ ಮಹಾನ್ ಶಿಕ್ಷಣ ತಜ್ಞ ಡಾ.ಸರ್ವೆಪಲ್ಲಿ ಡಾ. ರಾಧಾಕೃಷ್ಣನ್ ಶಿಕ್ಷಣವನ್ನು ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಬದಲಾವಣೆಗೆ ಸಾಧನವೆಂದು ವ್ಯಾಖ್ಯಾನಿಸಿದ್ದಾರೆ. ಅಂದರೆ ನೀವು ಗಳಿಸಿದ ಜ್ಞಾನವನ್ನು ಸಮಾಜ ಸೇವೆಗೆ, ಮಾನವ ಸೇವೆಗೆ ಬಳಸಿ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟವನ್ನಾಗಿ ಮಾಡಿ ಎಂದ ರಾಜ್ಯಪಾಲರು, ಸ್ವಾಮಿ ವಿವೇಕಾನಂದರು ಸೇರಿದಂತೆ ರಾಷ್ಟಕ್ಕಾಗಿ, ಸಮಾಜದ ಒಳಿತಿಗಾಗಿ ಶ್ರಮಿಸಿದ ಮಾಹಾನ್ ನಾಯಕರ ಮಾರ್ಗದರ್ಶನದಲ್ಲಿ ನಡೆಯಿರಿ" ಎಂದು ಸಲಹೆ ನೀಡಿದರು.

"ಇಂದಿನ ಯುಗ ನಾವೀನ್ಯತೆ ಮತ್ತು ಸ್ಪರ್ಧೆಯಾಗಿದೆ. ಇದು ಡಿಜಿಟಲ್ ಯುಗವಾಗಿದ್ದು, ಕೃತಕ ಬುದ್ಧಿಮತ್ತೆ, ಡೇಟಾ ವಿಜ್ಞಾನ ಮತ್ತು ಮುಂದುವರಿದ ತಂತ್ರಜ್ಞಾನಗಳು ಜಗತ್ತಿಗೆ ಹೊಸ ಆಯಾಮಗಳನ್ನು ನೀಡುತ್ತಿವೆ. ನಿರಂತರ ಕಲಿಕೆಯ ಜೊತೆಗೆ ನಾವೀನ್ಯತೆ ಮತ್ತು ಸಂಶೋಧನೆಯೊಂದಿಗೆ ನಾವು ಮುನ್ನಡೆಯಬೇಕು. ನಮ್ಮ ಭಾರತವನ್ನು "ವಿಶ್ವ ಗುರು" ಮತ್ತು "ಚಿನ್ನದ ಹಕ್ಕಿ" ಎಂದು ಕರೆಯುತ್ತಿದ್ದರು. ಏಕೆಂದರೆ ನಳಂದ, ತಕ್ಷಶಿಲಾ, ವಿಕ್ರಮಶಿಲಾ ಮುಂತಾದ ವಿಶ್ವದರ್ಜೆಯ ಶಿಕ್ಷಣ ಸಂಸ್ಥೆಗಳಿದ್ದವು. ನಮ್ಮ ಶಿಕ್ಷಣ ವ್ಯವಸ್ಥೆ, ನಮ್ಮ ಜ್ಞಾನ ಮತ್ತು ವಿಜ್ಞಾನಕ್ಕೆ ನಮ್ಮ ಕೊಡುಗೆಯೊಂದಿಗೆ, ಭಾರತವು ಧರ್ಮ, ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಕೇಂದ್ರವಾಗಿತ್ತು ಮತ್ತು ಬಲವಾದ ಆರ್ಥಿಕತೆಯಿಂದಾಗಿ ಆರ್ಥಿಕವಾಗಿ ಸಮೃದ್ಧವಾಗಿತ್ತು. ನಮ್ಮ ವೇದಗಳಲ್ಲಿ ಖಗೋಳ ಘಟನೆಗಳನ್ನು ಉಲ್ಲೇಖಿಸಲಾಗಿದೆ – ಋಗ್ವೇದ, ಯಜುರ್ವೇದ, ಅಥರ್ವವೇದ ಮತ್ತು ಸಾಮವೇದ. ಖಗೋಳ ವಿಜ್ಞಾನದಿಂದ ಭೂವಿಜ್ಞಾನ, ಗಣಿತ, ವೈದ್ಯಕೀಯ ಮತ್ತು ಇತರ ಹಲವು ಕ್ಷೇತ್ರಗಳಲ್ಲಿ ಭಾರತೀಯರು ಪ್ರಮುಖ ಕೊಡುಗೆಗಳನ್ನು ನೀಡಿದ್ದಾರೆ. ಗಣಿತದಲ್ಲಿ ಸೊನ್ನೆ ಮತ್ತು ದಶಮಾಂಶದ ಆವಿಷಾ??ರವು ಭಾರತೀಯ ಗಣಿತಜ್ಞರು ಮತ್ತು ಖಗೋಳಶಾಸ್ತ್ರಜ್ಞರ ಕೊಡುಗೆಯಾಗಿದೆ" ಎಂದು ತಿಳಿಸಿದರು.

"ಭಾರತದ ಇತಿಹಾಸದ ಮಹಾನ್ ನಾಯಕಿಯರಲ್ಲಿ ಒಬ್ಬರಾದ ರಾಣಿ ಚನ್ನಮ್ಮ ಅವರು ದೇಶದ ಸ್ವಾತಂತ್ರ್ಯಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಸ್ಮರಣಾರ್ಥ ಸ್ಥಾಪಿಸಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಇಂದು 13ನೇ ಘಟಿಕೋತ್ಸವವನ್ನು ಆಚರಿಸುತ್ತಿದ್ದು, ವಿಶ್ವವಿದ್ಯಾಲಯವು ಸಾಮಾಜಿಕ ಹಿತಾಸಕ್ತಿ, ಸಾರ್ವಜನಿಕ ಹಿತಾಸಕ್ತಿ, ರಾಷ್ಟ್ರೀಯ ಹಿತಾಸಕ್ತಿ ಮತ್ತು ಧಾರ್ಮಿಕ ಮತ್ತು ಸಂಸ್ಕೃತಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್, ಪೂಜ್ಯ ಶಿವಲಿಂಗೇಶ್ವರ ಮಹಾಸ್ವಾಮಿಜೀ ಮತ್ತು ಶಂಸುದ್ದೀನ್ ಅಬ್ದುಲ್ಲಾ ಪುಣೇಕರ್ ಅವರಿಗೆ ಗೌರವ ಪದವಿಗಳನ್ನು ನೀಡಿ ಗೌರವಿಸಲಾಗಿದೆ. ಸಮಾಜಕ್ಕಾಗಿ ಅವರ ಸೇವೆ ನಿರಂತರವಾಗಿರಲೆಂದು ಆಶಿಸುತ್ತೇನೆ" ಎಂದರು.

ಈ ಸಂದರ್ಭದಲ್ಲಿ ಸಚಿವರಾದ ಎಂ.ಸಿ.ಸುಧಾಕರ್, ಮುಖ್ಯ ಅತಿಥಿ ಪದ್ಮಶ್ರೀ ಪ್ರೊಫೆಸರ್ ಗಣೇಶ್ ಎನ್.ದೇವಿ, ಕುಲಪತಿ ಸಿ.ಎಂ. ತ್ಯಾಗರಾಜ್ ಗಣ್ಯರು ಹಾಜರಿದ್ದರು.

# ಕಟ್ಟಡಗಳು ಗಟ್ಟಿಯಾಗಿ ನಿಲ್ಲಲಿ, ಕಾರ್ಮಿಕರ ರಕ್ಷಣೆಗೆ ಒತ್ತು ಕೊಡಿ: ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 11: ಕಟ್ಟಡಗಳು ನಗರದಲ್ಲಿ ಗಟ್ಟಿಯಾಗಿ ನೆಲೆನಿಲ್ಲುವಂತೆ ನಿರ್ಮಿಸುವ ಬಹುದೊಡ್ಡ ಜವಾಬ್ದಾರಿ ಸಿವಿಲ್ ಇಂಜಿನಿಯರ್ ಅವರ ಮೇಲಿದೆ. ಜೊತೆಗೆ ಕಟ್ಟಡ ನಿರ್ಮಾಣದ ಸಂದರ್ಭದಲ್ಲಿ ಕಾರ್ಮಿಕರಿಗೆ ಗ್ಲೌಜ್, ಶೂಸ್, ಹೆಲ್ಮೆಟ್ ಹಾಗೂ ಇನ್ನಿತರ ಸುರಕ್ಷಿತ ವಸ್ತುಗಳನ್ನು ನೀಡುವ ಅವಶ್ಯಕತೆ ಇದೆ ಎಂದು ಲೋಕಸಭಾ ಸದಸ್ಯ ಸಾಗರ ಖಂಡ್ರೆ ತಿಳಿಸಿದರು.

ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್(ಇಂಡಿಯಾ) ವತಿಯಿಂದ ನಗರದ ಲಾವಣ್ಯ ಕನ್ವೆನ್ಷನ್ ಹಾಲ್‌ನಲ್ಲಿ ನಡೆಯುತ್ತಿರುವ ಮೂರು ದಿವಸಗಳ ಸ್ಪೈಕಾನ್–4 ರಾಷ್ಟ್ರೀಯ ವಿಚಾರ ಸಂಕಿರಣ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಕಾಲದಲ್ಲಿ ಪ್ರತಿಯೊಬ್ಬರೂ ಕೆರೆ ಹಾಗೂ ನದಿಯಲ್ಲಿ ಸಿಗುವ ರೇತಿ ಕಡೆಗೆ ಹೆಚ್ಚು ಗಮನ ಹರಿಸುತ್ತಾರೆ. ಇದರಿಂದ ಪ್ರಕೃತಿ ನಾಶವಾಗುತ್ತಿದೆ. ಅದಕ್ಕೂ ಮೀರಿ ರೋಬೊ ರೇತಿ ಹಾಗೂ ಇನ್ನಿತರ ಕಟ್ಟಿಗೆಯ ಕಟ್ಟಡದ ಕಡೆಗೆ ಒಲವು ತೋರುತ್ತಿಲ್ಲ. ನದಿಯ ರೇತಿಯಿಂದ ನೀರಿನೊಳಗಿನ ಜಲಚರ ಪ್ರಾಣಿಗಳು ಹಾಗೂ ಭೂಮಿಯ ಒಡಲು ನಾಶವಾಗುತ್ತಿದೆ. ಆದ್ದರಿಂದ ಆಸ್ಟ್ರೇಲಿಯಾ ದೇಶದಂತೆ ಹಗುರವಾದ ವಸ್ತುಗಳಿಂದಲೂ ಕಟ್ಟಡ ನಿರ್ಮಾಣದ ಕಡೆಗೆ ಗಮನ ಹರಿಸಬೇಕೆಂದು ತಿಳಿಸಿದರು. ಸುರಕ್ಷಿತ ಕಟ್ಟಡಗಳ ನಿರ್ಮಾಣ, ಬಳಸುವ ವಸ್ತುಗಳ ಕುರಿತು ಬಹಳ ಮಾರ್ಮಿಕವಾಗಿ ಮೂರು ದಿವಸಗಳ ವಿಚಾರ ಸಂಕಿರಣ ಆಯೋಜನೆ ಮಾಡಿದ್ದು ಖುಷಿ ತಂದಿದೆ. ಸಿವಿಲ್ ಇಂಜಿನಿಯರ್ ಹಾಗೂ ಸರ್ಕಾರ ಒಟ್ಟಾಗಿ ಸೇರಿ–ಕೊಂಡು ರಸ್ತೆ, ಸಮುದಾಯ ಭವನ, ಶೌಚಾಲಯ, ಶಾಲೆಗಳ ಕಟ್ಟಡ ಹಾಗೂ ಇನ್ನಿತರ ಸರ್ಕಾರಿ ಕಟ್ಟಡಗಳ ಕೆಲಸ ಗುಣಮಟ್ಟದಿಂದ ಮಾಡಿದರೆ ಗಟ್ಟಿಮುಟ್ಟಾದ ಕಾಮಗಾರಿಗಳನ್ನು ಮಾಡಬಹುದು ಎಂದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಕೆ ಬೆಲ್ದಾಳೆ ಮಾತನಾಡಿ ಕಟ್ಟಡಗಳ ಜೊತೆಗೆ ವ್ಯಕ್ತಿ ಭಾವನಾತ್ಮಕವಾಗಿ ಬೆಸೆದುಕೊಂಡಿರುತ್ತಾನೆ. ಹೀಗಾಗಿ ಒಮ್ಮೆ ನಿರ್ಮಿಸಿದ ಮನೆಯಲ್ಲಿ ನಾಲ್ಕು ತಲೆಮಾರಿನವರು ಜೀವಿಸುವಷ್ಟು ಬಾಳಿಕೆಗೆ ಬರಬೇಕೆಂದು ಜನರು ಆಸೆ ಪಡುತ್ತಾರೆ. ಹೀಗಾಗಿ ಪ್ರಕೃತಿ ಸ್ನೇಹಿ ವಸ್ತುಗಳನ್ನು ಬಳಸಿ ಕಟ್ಟಡಗಳನ್ನು ನಿರ್ಮಿಸಬೇಕೆಂದು ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್(ಇಂಡಿಯಾ) ದ ಅಧ್ಯಕ್ಷ ವೀರಶೆಟ್ಟಿ ಮಣಗೆ ಕಾರ್ಯಕ್ರಮದ ಯಶಸ್ವಿಗೆ ಸಾಕಷ್ಟು ಜನ ಉದ್ಯಮಿಗಳು ಹಾಗೂ ವಿವಿಧ ಕಟ್ಟಡ ನಿರ್ಮಾಣ ಸಾಮಗ್ರಿ ಮಾರಾಟದ ಅಂಗಡಿಗಳ ಮಾಲಿಕರು ಸಹಕಾರ ನೀಡಿದ್ದಾರೆ. ಒಂದು ಯಶಸ್ವಿ ಕಟ್ಟಡ ನಿರ್ಮಿಸುವಲ್ಲಿ ಸಿವಿಲ್ ಇಂಜಿನಿಯರ್ ಹಿಡಿದು ಕಾರ್ಮಿಕರವರೆಗೆ ಸಾಕಷ್ಟು ಜನರ ಪರಿಶ್ರಮ ಇರುತ್ತದೆ. ಹೀಗಾಗಿ ಜಿಲ್ಲೆಯಲ್ಲಿ ವಿನೂತನ ಕಟ್ಟಡಗಳ ನಿರ್ಮಾಣಕ್ಕೆ ಎಲ್ಲರೂ ಕೂಡಿ ಶ್ರಮಿಸೋಣ ಎಂದರು.

ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿದರು. ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಜ್ಯೋತಿರ್ಮಯಾನಂದ ಸ್ವಾಮೀಜಿ ದಿವ್ಯಸಾನಿಧ್ಯ ವಹಿಸಿದ್ದರು. ವೇದಿಕೆ ಮೇಲೆ ನಗರಸಭೆ ಅಧ್ಯಕ್ಷ ಮಹ್ಮದ್ ಗೌಸ್, ಹೈದರಾಬಾದನ ಡಾ. ಎಸ್.ಪಿ.ಅಂಚೂರಿ, ಅಜೀಜ್ ಖಾನ್, ಸರ್ದಾರ್ ಪವಿತ್ ಸಿಂಗ್, ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜಿನ ಸಂತೋಷ ತಾಳಂಪಳ್ಳಿ, ಅಶೋಕ ಉಪ್ಪೆ ಉಪಸ್ಥಿತರಿದ್ದರು.

ಇದೇ ವೇಳೆ ಸಮ್ಮೇಳನದ ಸ್ಮರಣ ಸಂಚಿಕೆಯ ಮುಖಪುಟವನ್ನು ಶಾಸಕ ಡಾ. ಶೈಲೇಂದ್ರ ಕೆ ಬೆಲ್ದಾಳೆ ಬಿಡುಗಡೆ ಮಾಡಿದರು. ಎಸಿಸಿಇಐ ಅಧ್ಯಕ್ಷ ವೀರಶೆಟ್ಟಿ ಮಣಗೆ ಸ್ವಾಗತಿಸಿದರು. ಅರ್ಪಣ ನಿರೂಪಿಸಿದರು. ಎಸಿಸಿಇಐ ಅಶೋಕ ಉಪ್ಪೆ ವಂದಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಖಜಾಂಚಿ ಓಂಕಾರ ಪಾಟೀಲ, ವ್ಯವಸ್ಥಾಪಕ ಮಂಡಳಿ ಸದಸ್ಯರಾದ ಶಿವಕುಮಾರ ಯಲಾಲ್, ಸಂದೀಪ ಕಾಡವಾದ, ಅಮಿತ ನಾಗೂರೆ, ಸದಸ್ಯರಾದ ಮಹೇಶ ಹೊರಂಡೆ, ದಿಲೀಪ ನಿಟ್ಟೂರೆ ಹಾಗೂ ಇತರರು ಉಪಸ್ಥಿತರಿದ್ದರು.

# ಶಿಸ್ತಿಗೆ ಇನ್ನೊಂದು ಹೆಸರು ಪೋಲಿಸ್ ಇಲಾಖೆ: ವರಜ್ಯೋತಿ ಬಂತೇಜಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.11:ಇವತ್ತಿನ ಹಲವಾರು ಇಲಾಖೆಗಳಲ್ಲಿ ಅತ್ಯಂತ ಶಿಸ್ತು ಬದ್ಧತೆಯಿಂದ ಕೂಡಿದ ಇಲಾಖೆ ಪೋಲಿಸ್ ಇಲಾಖೆ ಯಾಗಿದೆ. ಕಲಬುರಗಿ ಜಿಲ್ಲೆಯ ಐದು ಜನರಿಗೆ ನಮ್ಮವರಿಗೆ ಮುಖ್ಯಮಂತ್ರಿ ಚಿನ್ನದ ಪದಕ ಲಭಿಸಿದ್ದು ನನಗೆ ಸಂತೋಷ

ಶಿಸ್ತಿಗೆ ಇನ್ನೊಂದು ಹೆಸರೇ ಪೋಲಿಸ್ ಇಲಾಖೆ ಅ ಣದೂರಿನ ಪೂಜ್ಯ ವರ ಜ್ಯೋತಿ ಬಂತೇಜಿಯವರು ನುಡಿದರು. ಕನ್ನಡ ಭವನದ ಸುವರ್ಣ ಸಭಾ ಭವನದಲ್ಲಿ ಜಿಲ್ಲಾ ಸಿರಿ ಗನ್ನಡ ವೇದಿಕೆ ಮತ್ತು ಜನಕಲ್ಯಾಣ ಎಜ್ಯುಕೇಷನ್ ???ಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಮುಖ್ಯಮಂತ್ರಿ ಚಿನ್ನದ ಪದಕ ವಿಜೇತ ಪುರಸ್ಕೃತರಿಗೆ ಹಮ್ಮಿಕೊಂಡ ಸಮಾರಂಭದ ಸಾನಿಧ್ಯ ವಹಿಸಿಕೊಂಡು ಆಶೀರ್ವಚನ ನೀಡಿ ಮಾತನಾಡಿದ ಅವರು ಇವತ್ತು ಒಳ್ಳೆಯವರಿಗೆ ಒಳ್ಳೆಯವರಾಗಿ; ಕೆಟ್ಟದ್ದು ಕಂಡರೆ ಶಿಕ್ಷಿಸಿ ತಮ್ಮ ಎಡೆ ಬಿಡದ ಶಿಸ್ತು ಪರಿಪಾಲಕರು ಅಲ್ಲದೇ ನನ್ನ ಜೀವನದಲ್ಲಿ ಅವರ ಪಾತ್ರ ನಾನು ಅವರು ಮಾಡಿದ ಸಹಾಯ ಮರೆಯುವಂತಿಲ್ಲವೆಂದರು. ಕೆ.ಎಸ್.ಪಿ.ಎಸ್. ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಹೇಶ ಮೇಘಣ್ಣನವರ ಉದ್ಘಾಟಿಸಿ ನಮ್ಮ ಇಲಾಖೆಯ ಸೇವೆಗೆ ಸಂದ ಗೌರವವಾಗಿದೆ ಇಂತಹ ಅಭಿನಂದನ ಸಮಾರಂಭದ ಕಾರ್ಯ ಮಾಡಿದ ವೇದಿಕೆಯ ಕಾರ್ಯ ಅನುಕರಣೀಯವೆಂದರು.

ಅಭಿನಂದನಾ ಭಾಷಣ ಮಾಡಿದ ಸಾಹಿತಿ ಮತ್ತು ಜಿಲ್ಲಾ ಸಿರಿಗನ್ನಡ ವೇದಿಕೆ ಅಧ್ಯಕ್ಷ ಡಾ.ಗವಿಸಿದ್ಧಪ್ಪ ಪಾಟೀಲ ಅವರು ದಕ್ಷ,ಪ್ರಮಾಣಿಕ ಸೇವೆಯನ್ನು ಮಾಡುತ್ತಾ ನಮ್ಮ ಜೀವನಕ್ಕೆ ರಕ್ಷಣೆ ನೀಡುವ ಕೆಲಸ ಮಾಡಿ, ತಮ್ಮ ಮನೆ ಮಠ, ವಯಕ್ತಿಕ ಜೀವನದಿಂದ ದೂರವಿದ್ದು ಜನರ ಸೇವೆ ಮಾಡುವುದು, ಕಠಿಣ ಸಮಸ್ಯೆಗಳನ್ನು ಎದುರಿಸಿ, ತಮ್ಮ ಜೀ ವದ ಹಂಗು ತೊರೆದು ಮಾಡುವ ಕರ್ತವ್ಯ, ಅವರ ಇಲಾಖೆಯ ಸೇವೆಯನ್ನು ಪರಿಗಣಿಸಿ ಮುಖ್ಯಮಂತ್ರಿ ಚಿನ್ನದ ಪದಕ ಐದು ಜನರಿಗೆ ಲಭಿಸಿದ್ದು ಅವರ ಸೇವೆಗೆ ಸಂದ ಗೌರವ ವೆಂದು ಅವರಿಗೆ ಹೆಚ್ಚು ಪ್ರಶಸ್ತಿ ಗೌರವ ಲಭಿಸಲಿ ಬುದ್ಧ, ಬಸವ,ಅಂಬೇಡ್ಕರ್ ತತ್ವ ಆದರ್ಶ ಮೈಗೂಡಿಸಿಕೊಂಡವರೆಂದು ಬಣ್ಣಿಸಿದರು.ಹಿಸಿದ ಜನಕಲ್ಯಾಣ ಟ್ರಸ್ಟ್ ಅಧ್ಯಕ್ಷ ಸುರೇಶ್ ಎಸ್. ಕಾನೇಕರ ಅವರು ನಾವು ದಿನನಿತ್ಯ ನೆಮ್ಮದಿಯಿಂದ ನಿದ್ದೆ ಮಾಡುತ್ತಿದ್ದೇವೆ ಅಂದರೆ ಪೋಲಿಸ್ ಇಲಾಖೆಯಿಂದ ಅವರು ನಮಗಾಗಿ ಸೇವೆ ಮಾಡುತ್ತಾರೆ; ನಾವು ಗೌರವಿಸು ವುದು ಆದ್ಯ ಕರ್ತವ್ಯ ಎಂದರು. ಅಭಿನಂದಿತರ ಪರವಾಗಿ ಚಿಂಚೋಳಿ ಸರ್ಕಲ್ ಇನಸ್ಪೆಕ್ಟರ ಕಪಿಲದೇವ ಗಢದ ಅವರು ನಮ್ಮ ಕೆಲಸಕ್ಕೆ ಸಂದ ಗೌರವ ಅಲ್ಲದೇ ಬುದ್ಧ,ಅಂಬೇಡ್ಕರ್, ಮತ್ತು ತಂದೆ–ತಾಯಿಯ ಪುಣ್ಯದ ಕೆಲಸದಿಂದ ಲಭಿಸಿದೆ ಎಂದರು. ಆಳಂದ ಪೊಲೀಸ್ ಇನ್ಸ್‌ಪೆಕ್ಟರ್ ಶರಣಬಸಪ್ಪ ಕೊಡ್ಲಾ ಅವರು ನಮ್ಮ ಹದಿನೆಂಟು ವರ್ಷದ ಸೇವೆ, ಒಳ್ಳೆಯ ಇಲಾಖೆ ಸೇವೆ ಮತ್ತು ಅಧಿಕಾರಿಗಳ ಶಿಫಾರಸು ಮಾಡಿದ ಸೇವೆ ಒಳ್ಳೆಯ ಸಮಯಕ್ಕೆ ಬಂದಿದೆ ಇನ್ನೂ ಕೆಲಸ ಮಾಡಲು ಸ್ಫೂರ್ತಿ ತಂದಿದೆ ಎಂದರು. ಕಪಿಲದೇವ ಗಢದ, ಜೈಶ್ರೀ ಹೊಡಲ್, ಶರಣಬಸಪ್ಪ ಕೊಡ್ಲಾ, ಜೈಭೀಮ ಝುಳಕಿ, ಅಮರ ತೇಲ್ಕರ್, ಅವರಿಗೆ ಸನ್ಮಾನಿಸಿ ಗೌರವ ಪತ್ರ ನೀಡಲಾಯಿತು. ತಾಲೂಕಾಧ್ಯಕ್ಷ ಡಾ.ಸಿದ್ಧಲಿಂಗ ದಬ್ಬಾ ಸ್ವಾಗತಿಸಿದರು, ಡಾ.ಸಿದ್ದಪ್ಪ ಹೊಸ ಮನಿ ಪ್ರಧಾನ ಕಾರ್ಯದರ್ಶಿ ಪ್ರಾಸ್ತಾವಿಕ ನುಡಿ ಆಡಿದರು. ಡಾ.ಶ್ರೀಮಂತ ಹೊಳ್ಕರ್ ಮತ್ತು ಡಾ.ರಾಜಕುಮಾರ ಮಾಳಗೆ ನಿರೂಪಿಸಿದರು ವೇದಿಕೆ ಕಾರ್ಯದರ್ಶಿ ಡಾ.ಶೀಲಾದೇವಿ ಎಸ್.ಬಿರಾದಾರ ವಂದಿಸಿದರು.

# ಕುಡಿಯಲು ಹಣ ಕೊಡಲಿಲ್ಲವೆಂದು ಹೆತ್ತ ತಾಯಿಯನ್ನೇ ಕೊಂದ ಮಗ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.11: ಕುಡಿಯಲು ವೃದ್ಧ ತಾಯಿಯ ಬಳಿ ಪ್ರತಿದಿನ ಹಣ ಕೇಳ್ತಿದ್ದ ಮಗನೊಬ್ಬ ಇವತ್ತು ಹಣ ಕೊಡಲಿಲ್ಲ ಅಂತ 82 ವರ್ಷದ ವೃದ್ಧ ತಾಯಿಯನ್ನ ಹತ್ಯೆ ಮಾಡಿದ್ದಾನೆ.

ವೃದ್ಧ ತಾಯಿಯನ್ನ ಕಣ್ಣಲ್ಲಿ ಕಣ್ಣಿಟ್ಟು ನೋಡಿಕೊಳ್ಳಬೇಕಾದ ಮಗ, ಕುಡಿಯಲು ಹಣ ಕೊಡಲಿಲ್ಲ ಅಂತ 82 ವರ್ಷದ ವೃದ್ಧ ತಾಯಿಯನ್ನು ಹತ್ಯೆ ಮಾಡಿದ್ದಾನೆ. 82 ವರ್ಷದ ಶಾಂತಾಬಾಯಿ ಕೊಲೆಯಾದ ತಾಯಿ. ಇನ್ನು ಕೊಲೆ ಹಂತಕ ಮಗ 52 ವರ್ಷದ ಈ ಮಹೇಂದ್ರ ಸಿಂಗ್. ಬಗಲಗುಂಟೆಯ ಮುನೇಶ್ವರ ನಗರದಲ್ಲಿ ನಿನ್ನೆ (ಗುರುವಾರ) ತಡರಾತ್ರಿ 1.30ಕ್ಕೆ ಕೊಲೆ ಮಾಡಿ ಮಗ ಎಸ್ಕೇಪ್ ಆಗಿದ್ದಾನೆ. ಕುಡಿತದ ಚಟಕ್ಕೆ ಬಿದ್ದಿದ್ದ ಮಹೇಂದ್ರ ಸಿಂಗ್ ಕೆಲಸಕ್ಕೆ ಹೋಗದೇ ಅಲೆಯುತ್ತಿದ್ದನಂತೆ. ನಿತ್ಯ ಹಣಕ್ಕಾಗಿ ತಾಯಿಗೆ ಹಿಂಸೆ ಕೊಟ್ಟು, ನಿಂದಿಸುತ್ತಿದ್ದ. ಗುರುವಾರ ಹಣ ಕೊಡದೇ ಇದಿದ್ದಕ್ಕೆ ಕಿರಿಕ್ ತೆಗೆದು ಕಬ್ಬಿಣದ ರಾಡ್ ನಿಂದ ತಾಯಿಯ ತಲೆಗೆ ಹೊಡೆದು ಕೊಲೆಮಾಡಿ ತನ್ನ ಬೈಕ್ ನಲ್ಲಿ ಎಸ್ಕೇಪ್ ಆಗಿದ್ದಾನೆ.

# ಮೇ ಮೊದಲ ವಾರದೊಳಗೆ ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆಗೆ ಕಬ್ಬು ಸಾಗಿಸಿದ ರೈತರ ಕಬ್ಬಿನ ಬಿಲ್ ಪಾವತಿಗೆ ಕ್ರಮ: ಡಿ.ಕೆ. ಸಿದ್ರಾಮ



ಬೀದರ:ಏ.11: ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಇಮಾಮಪೂರ, ಬೀದರ ಕಾರ್ಖಾನೆಯು 2024–25 ಹಂಗಾಮಿಗೆ 3 ಲಕ್ಷ ಮೆ.ಟನ್‌ಗೂ ಅಧಿಕ ಕಬ್ಬು ನುರಿಸಿ 9.75% ರಿಕವರಿಯೊಂದಿಗೆ ಸಕ್ಕರೆ ಉತ್ಪಾದಿಸಿ ಹಂಗಾಮನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

ಕೇಂದ್ರ ಸರ್ಕಾರವು ಮುಕ್ತ ಮಾರುಕಟ್ಟೆಯಲ್ಲಿ ಸಕ್ಕರೆ ಮಾರಾಟ ಮಾಡಲು ನಿಯಂತ್ರಣ ವಿಧಿಸಿರುವುದರಿಂದ ಅತಿ ಕಡಿಮೆ ಪ್ರಮಾಣದಲ್ಲಿ ಸಕ್ಕರೆಯನ್ನು ಮಾರಾಟ ಮಾಡಲು ಅನುಮತಿ ಆದೇಶ ನೀಡುತ್ತಿರುವ ಹಿನ್ನೆಲೆಯಲ್ಲಿ ಮಾನ್ಯ ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಬೆಂಗಳೂರು ರವರು ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆಗೆ ಕಬ್ಬು ಪೂರೈಸಿದ ರೈತರ ಕಬ್ಬಿನ ಬಾಕಿ ಬಿಲ್ ಪಾವತಿಸಲು ಅನುಕೂಲವಾಗುವಂತೆ ಹೆಚ್ಚುವರಿ ಸಕ್ಕರೆ ಬಿಡುಗಡೆ ಮಾಡಲು ಆದೇಶ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ. ಅದರಂತೆ ಕೇಂದ್ರ ಸರ್ಕಾರವು ಕೂಡಾ ಸಕಾರಾತ್ಮಕವಾಗಿ ಸ್ಪಂದಿಸಿ 50,000 ಕ್ವಿಂಟಲ್ ಹೆಚ್ಚುವರಿ ಸಕ್ಕರೆ ಬಿಡುಗಡೆಗೆ ಆದೇಶ ನೀಡಲಾಗುವುದು ಎಂದು ಆಶ್ವಾಸನೆ ನೀಡಿರುತ್ತದೆ. ಅಲ್ಲದೇ ಈಗಾಗಲೇ ದಿನನಿತ್ಯ ರೂ.2 ಕೋಟಿ ರೈತರ ಕಬ್ಬಿನ ಬಿಲ್ ಬಾಕಿ ಪಾವತಿ ಮಾಡಲಾಗುತ್ತಿದೆ. ಮೇ 2025ರ ಮೊದಲನೇ ವಾರದೊಳಗಾಗಿ 2024–25 ಹಂಗಾಮಿಗೆ ಕಾರ್ಖಾನೆಗೆ ಕಬ್ಬು ಪೂರೈಸಿದ ರೈತರ ಕಬ್ಬಿನ ಬಾಕಿ ಬಿಲ್ ಪಾವತಿಸಲು ಎಲ್ಲ ರೀತಿಯಿಂದ ಕ್ರಮವಿಡಲಾಗುತ್ತಿದೆ. ಜಿಲ್ಲೆಯ ರೈತ ಸಂಘಟನೆಗಳು ಹಾಗೂ ಕಾರ್ಖಾನೆಗೆ ಕಬ್ಬು ಪೂರೈಸಿದ ರೈತರು ಯಾವುದೇ ರೀತಿ ಆತಂಕ ಪಡದೇ ಸಹಕರಿಸಲು ಕಾರ್ಖಾನೆಯ ಅಧ್ಯಕ್ಷ ಡಿ.ಕೆ. ಸಿದ್ರಾಮ ಕೋರಿದ್ದಾರೆ.






Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.